ಸಂಪುಟ: 14 Volume | ಸಂಚಿಕೆ: 58 Issue | ಪುಟಗಳು 08 Pages | ಶುಕ್ರವಾರ 05 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**
ಜಗತ್ತಿನಲ್ಲಿ ಹೇಳುವವರಿಗಿಂತ, ಹೇಳಿದಂತೆ ನಡೆಯುವವರ ಯೋಗ್ಯತೆ ಹೆಚ್ಚಿನದು.
–ಗಳಗನಾಥ



ಸಿದ್ಧಗಂಗಾ ಶ್ರೀ ಗಳಿಂದ ಆಶೀರ್ವಾದ ಪಡೆದ ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್.

## ಎಸ್ಪಿ ಹೆಸರಲ್ಲಿ ಫೇಕ್ ಅಕೌಂಟ್, ವಂಚಕ ಅರೆಸ್ಟ್..!

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ವಿಜಯಪುರದ ಸೈಬರ್ ಪೊಲೀಸ್ ಠಾಣೆಯಲ್ಲಿ ಬಬಲೇಶ್ವರ ತಾಲೂಕಿನ ತಿಗಣಿಬಿದರಿ ಗ್ರಾಮದ ಸುರೇಶ್ ಅಥಣಿ ಎಂಬುವವರು ವಂಚನೆ ಪ್ರಕರಣದ ದೂರು ದಾಖಲಿಸಿದ್ದರು ಆರೋಪಿಯು ಎಸ್.ಪಿ. ಲಕ್ಷ್ಮಣ್ ನಿಂಬರಗಿ ಅವರ ಹೆಸರಿನಲ್ಲಿ ನಕಲಿ ಫೇಸ್‌ಬುಕ್ ಖಾತೆ ಹಾಗೂ ಇಮೇಲ್ ಐಡಿ (nimbargilax-man29@gmail.com) ಸೃಷ್ಟಿಸಿದ್ದನು. ಈ ನಕಲಿ ಐಡಿ ಮೂಲಕ ದೂರುದಾರರಿಗೆ ಸಂಪರ್ಕಿಸಿ, ಕಛಾಆ ಇಲಾಖೆಯಲ್ಲಿ SDC ನೌಕರಿ ಕೊಡಿಸುವುದಾಗಿ ನಂಬಿಸಿ ₹5,04,600 ಹಣವನ್ನು ಪಡೆದು ವಂಚಿಸಿದ್ದನು ಈ ಕುರಿತು ಪ್ರಕರಣ ದಾಖಲಾಗಿತ್ತು. ಪ್ರಕರಣದ ಬೆನ್ನತ್ತಿದ CEN ಪೊಲೀಸರು ಬೆಳಗಾವಿ ಜಿಲ್ಲೆಯ ಗೋಕಾಕ್ ತಾಲೂಕಿನ ದುರದುಂಡಿ ಗ್ರಾಮದ ನಿವಾಸಿ ಹನುಮಂತ ಭಜಂತ್ರಿ ಎಂಬಾತನನ್ನು ಬಂಧಿಸಿದ್ದಾರೆ. ಆರೋಪಿಯು ತನ್ನ ತಪ್ಪನ್ನು ಒಪ್ಪಿಕೊಂಡಿದ್ದು, ಬಂಧಿತ





ಆರೋಪಿಯು ಇದೇ ರೀತಿ ಹುಬ್ಬಳ್ಳಿ, ಶಿವಮೊಗ್ಗ ಮತ್ತು ಇತರೆಡೆಗಳಲ್ಲೂ ನಕಲಿ ಪ್ರೊಫೈಲ್ ಸೃಷ್ಟಿಸಿ ವಂಚಿಸಿರುವ ಬಗ್ಗೆ ಪೊಲೀಸರಿಗೆ ಮಾಹಿತಿ ಲಭ್ಯವಾಗಿದೆ. ಇತರ ಅಧಿಕಾರಿಗಳ ಹೆಸರನ್ನೂ ಬಳಸಿಕೊಂಡು ವಂಚನೆ ಮಾಡಿದ್ದಾನೆಯೇ ಎಂಬ ಬಗ್ಗೆ ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ವಿಜಯಪುರ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ತಿಳಿಸಿದ್ದಾರೆ.

## ಬೀದರ್ ಅಭಿವೃದ್ಧಿ ನನ್ನ ಕನಸು: ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಶತಮಾನಗಳ ಶಾಪದಿಂದ ತೀವ್ರ ಹಿಂದುಳಿದಿರುವ ಬೀದರ್ ಜಿಲ್ಲೆಯನ್ನು ಮೈಸೂರು, ಬೆಂಗಳೂರು ರೀತಿಯಲ್ಲಿ ಅಭಿವೃದ್ಧಿ ಪಡಿಸಬೇಕು ಎಂಬುದು ತಮ್ಮ ಕನಸಾಗಿದ್ದು, ಇದಕ್ಕಾಗಿ ಶಕ್ತಿಮೀರಿ ಶ್ರಮಿಸುವುದಾಗಿ ನೂತನ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.

ಬೆಂಗಳೂರಿನಲ್ಲಿ ತಮ್ಮನ್ನು ಭೇಟಿ ಮಾಡಿ ಅಭಿನಂದಿಸಿದ ಬೀದರ್ ಜನರನ್ನುದ್ದೇಶಿಸಿ ಮಾತನಾಡಿದ ಅವರು, ಬಸವಾದಿ ಶರಣರ ನಾಡು ಬೀದರ್ ತೀವ್ರ ಹಿಂದುಳಿದಿದೆ. ಈ ಪ್ರದೇಶ ಔದ್ಯೋಗಿಕವಾಗಿ, ಶೈಕ್ಷಣಿಕವಾಗಿ ಹಾಗೂ ಸಾಮಾಜಿಕವಾಗಿ ಅಭಿವೃದ್ಧಿ ಸಾಧಿಸಬೇಕು. ಈ ನಿಟ್ಟಿನಲ್ಲಿ ಎಲ್ಲರ ಪೂರ್ಣ ಸಹಕಾರದೊಂದಿಗೆ ಕಾರ್ಯ ನಿರ್ವಹಿಸುವುದಾಗಿ ಹೇಳಿದರು. ರಾಜ್ಯ ಸರ್ಕಾರ ಜನಪರವಾಗಿದ್ದು, ಶೋಷಿತರು, ವಂಚಿತರು, ದುರ್ಬಲರು, ದಲಿತರು, ಹಿಂದುಳಿದವರನ್ನು ಮೇಲೆತ್ತಲು ಹಗಲಿರುಳು ದುಡಿಯುತ್ತಿದೆ. ಕಳೆದ 3 ವರ್ಷ ಜೀವಪರ ಮತ್ತು ಜನಪರ ಆಡಳಿತ ನೀಡಿದ್ದು, ಮುಂದಿನ 2 ವರ್ಷವೂ ಉತ್ತಮ ಆಡಳಿತ ನೀಡಿ ಜನಮೆಚ್ಚುಗೆ ಗಳಿಸಿ 2028ರಲ್ಲಿ ಕಾಂಗ್ರೆಸ್ ಪಕ್ಷ ಮರಳಿ ಅಧಿಕಾರಕ್ಕೆ ಬರಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಬೀದರ್ ಸರ್ವ ಜನಾಂಗದ ಶಾಂತಿಯ ತೋಟವಾಗಿದೆ. ಇಲ್ಲಿ ಪ್ರತಿಯೊಬ್ಬರೂ ಸೌಹಾರ್ದತೆಯಿಂದ ಮತ್ತು ಸಹಬಾಳ್ವೆ ನಡೆಸುತ್ತಿದ್ದಾರೆ. ಬೀದರ್ ಜನತೆ ತಮ್ಮ ಮೇಲೆ ಅಭಿಮಾನವಿಟ್ಟಿದ್ದಾರೆ. ಇವರೆಲ್ಲರ ಪ್ರಾರ್ಥನೆಯ ಫಲವಾಗಿ ತಮಗೆ 3ನೇ ಬಾರಿಗೆ ಸಚಿವರಾಗಿ ಕಾರ್ಯ ನಿರ್ವಹಿಸುವ ಅವಕಾಶ ಸಿಕ್ಕಿದ್ದು, ರಾಜ್ಯದ ಸಮಸ್ತ ಜನತೆಗೆ ಮತ್ತು ಮುಖ್ಯಮಂತ್ರಿಗಳು ಹಾಗೂ ಪಕ್ಷದ ವರಿಷ್ಠರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು.

## ವಿವಿಧೆಡೆ ಸುರಿದ ಭಾರಿ ಮಳೆ



**ಭಾಲ್ಕಿ:** ನಗರದಲ್ಲಿ ಅಲ್ಪ ಸೇರಿದಂತೆ ತಾಲ್ಲೂಕಿನ ವಿವಿಧೆಡೆ ಬುಧವಾರ ಸಂಜೆ ಮಳೆ ಸುರಿಯಿತು. ತಾಲ್ಲೂಕಿನ ಕದಲಾಬಾದ, ತಳವಾಡ, ಕೋನ ಮೇಳಕುಂದಾ, ಕರಡ್ಯಾಳ, ಹಲಬರ್ಗಾ ಸೇರಿದಂತೆ ಇತರೆಡೆ ಸುಮಾರು ಅರ್ಧ ಗಂಟೆ ಗಾಳಿ ಸಹಿತ ತುಸು ಜೋರು ಮುಂಗಾರು ಮಳೆ ಸುರಿಯಿತು.

## ಪುರಸಭೆ ಮಾಜಿ ಅಧ್ಯಕ್ಷರಾದ ಗವಿಸಿದ್ಧಪ್ಪ ಕಂದಾರಿ ನಿಧನ



**ಕೊಪ್ಪಳ:** ನಗರದ ವಾರ್ಡ ನಂ 12 ರ ಬಸವೇಶ್ವರ ನಗರದ ನಿವಾಸಿ, ಪುರಸಭೆ ಮಾಜಿ ಅಧ್ಯಕ್ಷ ಗವಿಸಿದ್ಧಪ್ಪ ಕಂದಾರಿ ಇಂದು(ಗುರುವಾರ) ಬೆಳಗಿನ ಜಾವ 3 ಘಂಟೆಗೆ ಕೊನೆಯುಸಿರೆಳೆದರು. ಮೃತರು ಪತ್ನಿ ಶೇಖಮ್ಮ ಕಂದಾರಿ, ಓರ್ವ ಪುತ್ರಿ, ಮೂವರು ಪುತ್ರರನ್ನು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ವೃತ್ತಿಯಿಂದ ವಾಚ್ ರಿಪೇರಿ ಮಾಡುತ್ತಿದ್ದ ಇವರು,ಸ್ಥಳೀಯ, ರಾಜ್ಯ ಹಾಗೂ ರಾಷ್ಟ್ರ ರಾಜಕಾರಣದ ಒಳ ಹೊರಗುಗಳ ಬಗ್ಗೆ ಅಪಾರವಾದ ತಿಳುವಳಿಕೆ ಹೊಂದಿದ್ದರು. ಉತ್ತಮ ರಾಜಕೀಯ ವಿಶ್ಲೇಷಕರೂ ಆಗಿದ್ದರು. ಕೊಪ್ಪಳದ ಹನುಮಂತಪ್ಪ ಅಂಗಡಿ ಅವರು ಅವಿಭಜಿತ ರಾಯಚೂರು ಜಿಲ್ಲೆಯ ಜನತಾದಳದ ಜಿಲ್ಲಾಧ್ಯಕ್ಷರಾಗಿದ್ದ ಅವಧಿಯಲ್ಲಿ 1994ರಲ್ಲಿ ಜನತಾದಳ ಪರಿಶಿಷ್ಟ ಜಾತಿ ವಿಭಾಗದ ತಾಲೂಕ ಘಟಕದ ಅಧ್ಯಕ್ಷರಾಗಿದ್ದರು. 1998–2000 ರವರೆಗೆ ಕೊಪ್ಪಳ ಪುರಸಭೆ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದರು. ಪುರಸಭಾಧ್ಯಕ್ಷರು ,ಸದಸ್ಯರಾಗಿದ್ದ ದಿನಗಳಲ್ಲಿಯೂ ತಮ್ಮ ವೃತ್ತಿ ವಾಚ್ ರಿಪೇರಿ ಮಾಡುವುದನ್ನು ಅವರು ಮರೆತಿರಲಿಲ್ಲ,ಪ್ರತಿದಿನ ತಮ್ಮ ಕರ್ತವ್ಯ ನಿರ್ವಹಿಸುತ್ತಿದ್ದರು. ನಂತರ ಕೆಲಕಾಲ ಕಾಂಗ್ರೆಸ್ ಪಕ್ಷದಲ್ಲಿದ್ದರು. ಕರಡಿ ಸಂಗಣ್ಣ ನವರು ಶಾಸಕರು,ಸಂಸದರಾಗಿ ಆಯ್ಕೆಯಾಗುವಲ್ಲಿ ಶ್ರಮಿಸಿದರು, ಭಾರತೀಯ ಜನತಾ ಪಕ್ಷದಲ್ಲಿ ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯರಾಗಿದ್ದರು. ಕನಕಗಿರಿ ವಿಧಾನಸಭಾ ಮೀಸಲು ಕ್ಷೇತ್ರಕ್ಕೆ ಭಾರತೀಯ ಜನತಾ ಪಕ್ಷದಿಂದ ಇವರ ಹೆಸರು ಮೂಂಚೂಣಿಯಲ್ಲಿತ್ತು. ಕೊಪ್ಪಳ ಜಿಲ್ಲಾ ಮಾದಿಗ ಸಮಾಜದ ಮುಖಂಡರಾಗಿ ಕೊಪ್ಪಳದ ರಾಜಕರಣದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದರು. ಗವಿಸಿದ್ಧಪ್ಪ ಕಂದಾರಿ ಅವರ ಪಾರ್ಥಿವ ಶರೀರದ ಅಂತ್ಯಕ್ರಿಯೆಯನ್ನು ಇಂದು ಮಧ್ಯಾಹ್ನ 3 ಘಂಟೆಗೆ ಸಿಂದೋಗಿ ರಸ್ತೆಯ ಘನತಾಜ್ಯ ನಿರ್ವಹಣೆ ಘಟಕದ ಪಕ್ಕದಲ್ಲಿರುವ ಕೃಷಿಭೂಮಿಯಲ್ಲಿ ನೇರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಸಿಎಂ ಖಡಕ್ ಸೂಚನೆ

## ಜನರ ಸಮಸ್ಯೆಗಳಿಗೆ ಸಕಾರಾತ್ಮಕವಾಗಿ ಅಧಿಕಾರಿಗಳು ಸ್ಪಂದಿಸಬೇಕು: ಡಿಕೆ ಶಿವಕುಮಾರ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಜನರ ಭಾವನೆ,ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಸಕಾರಾತ್ಮಕವಾಗಿ ಕಾರ್ಯನಿರ್ವಹಿಸಲು ಅಧಿಕಾರಿಗಳಿಗೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಖಡಕ್ ಸೂಚನೆ ನೀಡಿದ್ದಾರೆ. ನಮ್ಮ ಸರ್ಕಾರ ಯಾವುದೇ ಜಾತಿ, ಧರ್ಮ, ಪ್ರಭಾವಗಳಿಗೆ ಹಾಗೂ ಒತ್ತಡಗಳಿಗೆ ಮಣಿಯುವುದಿಲ್ಲ. ಜನರ ಭಾವನೆ, ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಸಕಾರಾತ್ಮಕ ಭಾವದಿಂದ ಹಾಗೂ ಪಾರದರ್ಶಕವಾಗಿ ಕಾರ್ಯನಿರ್ವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

**ಎಲ್ಲಾ ಅಧಿಕಾರಿಗಳ ಸಭೆ:** ಅವರು ಇಂದು ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ, ಪ್ರಧಾನ ಕಾರ್ಯದರ್ಶಿ, ಕಾರ್ಯದರ್ಶಿ, ಎಲ್ಲಾ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳ ಸಭೆ ನಡೆಸಿ ಮಾತನಾಡಿದ್ದಾರೆ.

**ಸಚಿವರ ಮಾರ್ಗದರ್ಶನ:** ಲಭ್ಯವಿರುವ ಆರ್ಥಿಕ ವ್ಯವಸ್ಥೆಯೊಳಗೆ ಬಾಕಿ ಇರುವ ಕಾಮಗಾರಿಗಳಲ್ಲದೇ ಹೊಸದಾಗಿ ಕೈಗೊಳ್ಳಬಹುದಾದ ಕೆಲಸಗಳ ಬಗ್ಗೆ 25 ದಿನಗಳಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಸಲ್ಲಿಸುವಂತೆ ಸೂಚಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರೂ ಕೂಡ ಜಿಲ್ಲಾ ಪ್ರವಾಸ ಕೈಗೊಂಡು ಅಗತ್ಯ ಮಾರ್ಗದರ್ಶನ ಮತ್ತು ನೆರವು ಒದಗಿಸಲು ಸೂಚಿಸಲಾಗಿದೆ ತಿಳಿಸಿದ್ದಾರೆ.

### ಮತದಾನವೇ ಹಕ್ಕು

ಚುನಾವಣಾ ಆಯೋಗ ನಡೆಸುತ್ತಿರುವ ಮತದಾರರ ಪಟ್ಟಿ ಪರಿಷ್ಕರಣೆ (ಎಸ್.ಐ.ಆರ್ ) ನಡೆಯುತ್ತಿದೆ. ಈ ದೇಶದ ಮತದಾನದ ಹಕ್ಕನ್ನು ಯಾರೂ ಕಳೆದುಕೊಳ್ಳಬಾರದು. ಮತದಾರರ ಪಟ್ಟಿ ಹೊಂದಿರುವವರು ಅರ್ಜಿಗಳನ್ನು ಭರ್ತಿ ಮಾಡುವಂತೆ ಮತದಾರರಿಗೆ ಜಾಗೃತಿ ಮೂಡಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಿ ಎಂದಿದ್ದಾರೆ ಸಿಎಂ.



### ಗೃಹಜ್ಯೋತಿ ಪರಿಷ್ಕರಣೆ

ಗೃಹಜ್ಯೋತಿ ಯೋಜನೆಯ ಪರಿಷ್ಕರಣೆ ಬಗ್ಗೆ ಪ್ರತಿಕ್ರಿಯೆ ನೀಡಿ 200 ಯೂನಿಟ್, ವಾಣಿಜ್ಯ ಉದ್ದೇಶಗಳಿಗೆ ಬಳಕೆ ಮಾಡುತ್ತಿರುವ ಬಗ್ಗೆ ಅರ್ಜಿಗಳು ಸಲ್ಲಿಕೆಯಾಗಿವೆ. 1.60 ಕೋಟಿ ಜನ ವೈಯಕ್ತಿಕವಾಗಿ ಸೌಲಭ್ಯ ಪಡೆದುಕೊಂಡಿದ್ದಾರೆ. ಒಬ್ಬರ ಹೆಸರಲ್ಲಿ ಐದಾರು ಮೀಟರ್‌ಗಳಿದ್ದು ಫಲಾನುಭವಿಗಳ ಬಗ್ಗೆ ಮಾಹಿತಿ ಪಡೆದುಕೊಳ್ಳಲಾಗುತ್ತಿದೆ ಎಂದು ವಿವರಿದ್ದಾರೆ.

### ಕ್ರಿಯಾ ಯೋಜನೆ

15 ದಿನಗಳಲ್ಲಿ ಕ್ರಿಯಾ ಯೋಜನೆಯನ್ನು ಇಲಾಖೆಗಳಿಗೆ ಸಿದ್ದಪಡಿಸಲು ಸೂಚಿಸಲಾಗಿದೆ. ಎಲ್ಲರೂ ಉತ್ತರದಾಯಿಯಾಗಿರಬೇಕು ಹಾಗೂ ಪ್ರಜ್ಞಾವಂತಿಕೆಯಿಂದ ಕೆಲಸ ಮಾಡಬೇಕು. ಎಲ್ಲಾ ಸಮಸ್ಯೆಗಳಿಗೂ ಪರಿಹಾರವಿದ್ದು, ಅದನ್ನು ಬಗೆಹರಿಸಲು ಸಕಾರಾತ್ಮಕ ಮನೋಭಾವ ಇರಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

## ಗಮನ ಸೆಳೆದ ಸ್ಕೋಡಾ ಆಟೋ ಫೋಕ್ಸ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಸ್ಕೋಡಾ ಆಟೋ ಫೋಕ್ಸ್‌ವ್ಯಾಗನ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ (SAVWIPL) ಇಂದು ಕಾಂಟಿನೆಂಟಲ್ ಕಾರ್ಸ್ ಮತ್ತು ಕಮರ್ಷಿಯಲ್ಸ್ ಲಿಮಿಟೆಡ್ ಸಹಭಾಗಿತ್ವದಲ್ಲಿ ಫೋಕ್ಸ್ ವ್ಯಾಗನ್ ಬ್ರ್ಯಾಂಡ್ ಅನ್ನು ಶ್ರೀಲಂಕಾದಲ್ಲಿ ಬಿಡುಗಡೆ ಮಾಡುವುದಾಗಿ ಘೋಷಿಸಿದೆ, ಇದು ಕಂಪನಿಯ ಪ್ರಾದೇಶಿಕ ಬೆಳವಣಿಗೆಯ ಪ್ರಯಾಣದಲ್ಲಿ ಮಹತ್ವದ ಮೈಲಿಗಲ್ಲಾಗಿದೆ ಮತ್ತು ಮಾರುಕಟ್ಟೆಗೆ ಅದರ ದೀರ್ಘಕಾಲೀನ ಬದ್ಧತೆಯನ್ನು ಬಲಪಡಿಸುತ್ತದೆ. ಫೋಕ್ಸ್ ವ್ಯಾಗನ್ ಬ್ರ್ಯಾಂಡ್ ಎರಡು ಜಾಗತಿಕವಾಗಿ ಮೆಚ್ಚುಗೆ ಪಡೆದ ಮಾಡೆಲ್ಗಳಾದ ಫೋಕ್ಸ್ ವ್ಯಾಗನ್ ಟೈಗನ್ ಎಸ್ಯುವಿ ಮತ್ತು ವರ್ಟಸ್ ಸೆಡಾನ್ ಜೊತೆಗೆ ಶ್ರೀಲಂಕಾವನ್ನು ಪ್ರವೇಶಿಸುತ್ತಿದ್ದು,ಇದು ಯುರೋಪಿಯನ್ ಗುಣಮಟ್ಟದ ಉತ್ಪನ್ನಗಳು, ಬಲವಾದ ಸುರಕ್ಷತಾ ಸಾಕ್ಷ್ಯಗಳು ಮತ್ತು ವಿಶ್ವದರ್ಜೆಯ ಮಾರಾಟ ಮತ್ತು ಮಾರಾಟದ ನಂತರದ ಸೇವೆಯಿಂದ ಬೆಂಬಲಿತವಾದ ಪ್ರೀಮಿಯಂ ಮಾಲೀಕತ್ವದ ಅನುಭವವನ್ನು ಒಟ್ಟುಗೂಡಿಸುತ್ತದೆ.

## ಕೊಟ್ಟ ಮಾತಿನಂತೆ ಖಾತೆ ಕೊಡಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಬೆಂಗಳೂರು ನಗರಾಭಿವೃದ್ಧಿ ಖಾತೆಗಾಗಿ ಸಚಿವ ರಾಮಲಿಂಗಾರೆಡ್ಡಿ ಅವರು ಪಟ್ಟು ಹಿಡಿದಿದ್ದಾರೆ. ಈ ಹಿಂದೆ ಕೊಟ್ಟ ಮಾತಿನಂತೆ ನನಗೆ ಖಾತೆಯನ್ನು ಕೊಡಬೇಕು. ನನ್ನ ಕಾರ್ಯಕ್ಷಮತೆಯನ್ನು ಗಮನಿಸಿ ಪ್ರಾಶಸ್ತ್ಯ ನೀಡಬೇಕು ಎಂದು ಸಿಎಂಗೆ ಮನವಿ ಮಾಡಿದ್ದಾರೆ. ನಗರಾಭಿವೃದ್ಧಿ ಖಾತೆ ನೀಡದಿದ್ದಕ್ಕೆ ಹಿರಿಯ ಸಚಿವ ರಾಮಲಿಂಗಾರೆಡ್ಡಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ನಿರ್ಧರಿಸಿದ್ದಾರೆ ಎನ್ನಲಾಗಿದೆ. ಕಾಂಗ್ರೆಸ್‌ನ ಪ್ರಭಾವಿ ಹಾಗೂ ಹಿರಿಯ ನಾಯಕರಾಗಿರುವ ರಾಮಲಿಂಗಾರೆಡ್ಡಿ ಅವರು ಬೆಂಗಳೂರು ನಗರಾಭಿವೃದ್ಧಿ ಖಾತೆ ಮೇಲೆ ಕಣ್ಣಿಟ್ಟಿದ್ದರು. ಆದರೆ, ಅವರಿಗೆ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡದೆ ಜಲಸಂಪನ್ಮೂಲ ಖಾತೆ ಹಂಚಿಕೆ ಮಾಡಿದ್ದು, ಇದು ಅಸಮಾಧಾನಕ್ಕೆ ಕಾರಣವಾಗಿದೆ. ಹೀಗಾಗಿ ಸಿಎಂ ಅವರನ್ನು ಭೇಟಿ ಮಾಡಿ, ಕೊಟ್ಟರೆ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡಿ, ಇಲ್ಲದಿದ್ದರೇ ಸ್ಥಾನವೇ ಬೇಡ ಎಂದು ಪಟ್ಟು ಹಿಡಿದಿದ್ದಾರೆ ಎಂದು ತಿಳಿದು ಬಂದಿದೆ.

# ಅಕಟಕಟಾ.. ಕೇಳ್ಬೇಡಿ ಕಿಟ್ಟಾ ಗ್ರಾ.ಪಂ. ಕಷ್ಟ..!

• ಮಲ್ಲಮ್ಮ ನುಡಿ ವಾರ್ತೆ ಡಿಕೆ ಪ್ರಹ್ಲಾದ್, ಬಸವಕಲ್ಯಾಣ

ತಾಲೂಕಿನ ಕಿಟ್ಟಾ ಗ್ರಾ.ಪಂ. ವ್ಯಾಪ್ತಿಯಲ್ಲಿ ಮೂಲಭೂತ ಸೌಲಭ್ಯಗಳಿಲ್ಲದೆ ಜನತೆ ಪರದಾಡುವಂತಾಗಿದೆ. ಹಲವು ತಿಂಗಳುಗಳಿಂದ ಸಮರ್ಪಕ ಸ್ವಚ್ಛತಾ ಕಾರ್ಯ ನಡೆಯುತ್ತಿಲ್ಲ. ಗ್ರಾಮದಲ್ಲಿನ ರಸ್ತೆ ಬದಿಗಳು, ಚರಂಡಿಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಸ ಸಂಗ್ರಹವಾಗಿದೆ. ಇದರಿಂದ ದುರ್ವಾಸನೆ ಹಾಗೂ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಉಂಟಾಗಿದೆ ಎಂದು ಗ್ರಾಮದ ಬಹುಜನ ಸಮಾಜ ಪಕ್ಷದ ತಾಲೂಕು ಅಧ್ಯಕ್ಷ ಶಂಕರ್ ಫುಲೆ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಗ್ರಾಮದ ರಸ್ತೆ ಹಾಳು:** ಅದೇ ರೀತಿ ಗ್ರಾಮದಲ್ಲಿನ ಅನೇಕ ಕಡೆ ಸಿಸಿ ರಸ್ತೆಗಳು ಹಾಳಾಗಿವೆ. ಮಳೆಗಾಲದಲ್ಲಿ ಸಾರ್ವಜನಿಕರಿಗೆ ಸಂಚಾರಕ್ಕೆ ತೊಂದರೆ ಉಂಟಾಗುತ್ತಿದೆ. ಚರಂಡಿಗಳ ನಿರ್ಮಾಣ ಮತ್ತು ನಿರ್ವಹಣೆ ಸರಿಯಾಗಿ ನಡೆಯದ ಕಾರಣ ಮಳೆ ನೀರು ರಸ್ತೆ ಮೇಲೆ ಹರಿದು ಜನರಿಗೆ ತೊಂದರೆ ಉಂಟುಮಾಡುತ್ತಿದೆ.

**ಲಿಖಿತ ದೂರಿಗೆ ಇಲ್ಲ ಕಿಮ್ಮತ್ತು:** ಗ್ರಾಮದ ಅನೇಕ ಪ್ರದೇಶಗಳಲ್ಲಿ ಬೀದಿ ದೀಪಗಳ (ಸ್ಟ್ರೀಟ್ ಲೈಟ್) ವ್ಯವಸ್ಥೆ ಸಮರ್ಪಕವಾಗಿಲ್ಲ. ರಾತ್ರಿ ವೇಳೆ ಕತ್ತಲೆ ಆವರಿಸುವುದರಿಂದ ಸಾರ್ವಜನಿಕರ ಸುರಕ್ಷತೆಗೆ ಧಕ್ಕೆಯಾಗುತ್ತಿದೆ. ಈ ಕುರಿತು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳಿಗೆ ಹಲವಾರು ಬಾರಿ ಮೌಖಿಕವಾಗಿ ಮತ್ತು ಲಿಖಿತವಾಗಿ ತಿಳಿಸಿದರೂ ಸಹ ಯಾವುದೇ ರೀತಿಯ ಪರಿಣಾಮಕಾರಿ ಕ್ರಮ ಕೈಗೊಳ್ಳಲಾಗಿಲ್ಲ ಎಂದು ದೂರಿದ್ದಾರೆ.




### ಗ್ರಾ.ಪಂ ವ್ಯಾಪ್ತಿಯಲ್ಲಿ ಆಗ ಬೇಕಿರುವುದೇನು?

- ನಿಯಮಿತ ಸ್ವಚ್ಛತಾ ಕಾರ್ಯ ಕೈಗೊಳ್ಳಲು ತುರ್ತು ಕ್ರಮ
- ಹಾಳಾಗಿರುವ ಸಿಸಿ ರಸ್ತೆಗಳನ್ನು ದುರಸ್ತಿ ಮಾಡಬೇಕಿದೆ
- ಚರಂಡಿ ನಿರ್ಮಾಣ, ಸ್ವಚ್ಛಗೊಳಿಸುವ ಕಾರ್ಯ ಕೈಗೊಬೇಕು
- ಎಲ್ಲಾ ಬೀದಿ ದೀಪಗಳನ್ನು ದುರಸ್ತಿ ಮಾಡಿ, ಹೊಸ ದೀಪ ಅಳವಡಿಕೆ
- ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ಅಗತ್ಯ

### ಪ್ರಗತಿ ಬಿಡಿ, ಸ್ವಚ್ಛತೆಗೆ ಗಮನ ಕೊಡಿ

ಕಿಟ್ಟಾ ಗ್ರಾಮದಲ್ಲಿ ಸ್ವಚ್ಛತೆ ಕಾಣದ ಚರಂಡಿ, ರಸ್ತೆಗಳ ಸರಿಯಾಗಿ ಇಲ್ಲದೇ ಕಾರಣ ಸಾರ್ವಜನಿಕರಿಗೆ ತೀವ್ರ ತೊಂದ–ರೆ ಅನುಭವಿಸುವಂತಾಗಿದೆ. ಚರಂಡಿಗಳಲಿ ಕಸ ಇತರೆ ವಸ್ತುಗಳನ್ನು ಬಿದ್ದು ದುರ್ವಾಸನೆ ಬೀರುತ್ತದೆ. ಸಂಬಂಧಪಟ್ಟ ಅಧಿಕಾರಿಗಳು ಇತ್ತ ಕಡೆ ಗಮನ ಹರಿಸಿ ಆದಷ್ಟು ಬೇಗ ಚರಂಡಿ ಸ್ವಚ್ಛತೆ ಬಗ್ಗೆ ಕ್ರಮ ಕೈಗೊಳ್ಳಬೇಕು ಎಂದು ಶಂಕರ್ ಫುಲೆ, ಸಾರ್ವಜನಿಕರು ಆಗ್ರಹಿಸಿದ್ದಾರೆ.



### ಅಧಿಕಾರಿ ಡೋಂಟ್ ಕೇರ್, ರಾಜಕಾರಣಿಗಳು ಇತ್ತ ಸುಳಿಯಲ್ಲ

ಸರ್ಕಾರ ಗ್ರಾಮೀಣ ಪ್ರದೇಶಕ್ಕೆ ಅಭಿವೃದ್ಧಿಗಾಗಿ ಲಕ್ಷಾಂತರ ರೂ.ಖರ್ಚು ಮಾಡುತ್ತದೆ. ಆದರೂ ಸೂಕ್ತ ನೀರು ಸರಬರಾಜು ಇಲ್ಲ. ಸಂಬಂಧ ಪಟ್ಟ ಅಧಿಕಾರಿಗೆ ತಿಳಿಸಿದರೂ ಪ್ರಯೋಜನ ಇಲ್ಲ. ಜನಪ್ರತಿನಿಧಿಗಳು ಇತ್ತ ಕಡೆ ತಿರುಗಿ ನೋಡಿದೆ ಇರುವುದರಿಂದ ಇಂತಹ ಸಮಸ್ಯೆ ಉಂಟಾಗುತ್ತದೆ ಎಂದು ಗ್ರಾಮದ ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಜಾತಿ, ಧರ್ಮ ಯಾವುದೇ ಪ್ರಭಾವಕ್ಕೂ ಮಣಿಯಬೇಡಿ: ಪಾರದರ್ಶಕವಾಗಿ ಕೆಲಸ ಮಾಡುವಂತೆ ಅಧಿಕಾರಿಗಳಿಗೆ ಡಿಕೆಶಿ ಸೂಚನೆ**

## ಗುಣಮಟ್ಟದ ರಸಗೊಬ್ಬರಗಳು ದೊರಕದೆ ರೈತರು ಪರದಾಡುವ ಸ್ಥಿತಿ

ರಾಜ್ಯದ ಆರ್ಥಿಕ ಬೆನ್ನೆಲುಬಾಗಿರುವ ರೈತ ಸಮುದಾಯ ಇಂದು ಅನೇಕ ಸಂಕಷ್ಟಗಳನ್ನು ಎದುರಿಸುತ್ತಿದೆ. ಅದರಲ್ಲೂ ಪ್ರಮುಖವಾಗಿ ಬೀಜ ಹಾಗೂ ಗೊಬ್ಬರಗಳ ಸಮರ್ಪಕ ಪೂರೈಕೆ ಸಮಸ್ಯೆ ರೈತರನ್ನು ಹೆಚ್ಚು ತೊಂದರೆಗೆ ದೂಡುತ್ತಿದೆ. ಕೃಷಿ ಕಾಲ ಆರಂಭವಾಗುತ್ತಿದ್ದಂತೆ ಅಗತ್ಯವಾದ ಗುಣಮಟ್ಟದ ಬೀಜಗಳು ಮತ್ತು ರಸಗೊಬ್ಬರಗಳು ಸಮಯಕ್ಕೆ ಸರಿಯಾಗಿ ದೊರಕದೆ ರೈತರು ಪರದಾಡುವ ಸ್ಥಿತಿ ನಿರ್ಮಾಣವಾಗುತ್ತದೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಸರ್ಕಾರ ಮತ್ತು ಕೃಷಿ ಇಲಾಖೆ ಈ ವಿಷಯದಲ್ಲಿ ಇನ್ನಷ್ಟು ಜವಾಬ್ದಾರಿಯುತವಾಗಿ ನಡೆದುಕೊಳ್ಳುವುದು ಅನಿವಾರ್ಯ. ಮಾರುಕಟ್ಟೆಯಲ್ಲಿ ಕೃತಕ ಕೊರತೆ ಸೃಷ್ಟಿಯಾಗದಂತೆ ಕಠಿಣ ನಿಗಾವಹಿಸಬೇಕು. ಜೊತೆಗೆ ಖಾಸಗಿ ವ್ಯಾಪಾರಿಗಳು ಅನಧಿಕೃತ ದರ ಹೆಚ್ಚಳ ಮಾಡದಂತೆ ನಿಯಮಿತ ತಪಾಸಣೆಗಳನ್ನು ನಡೆಸಬೇಕು. ರೈತರಿಗೆ ನೇರವಾಗಿ ಸಹಾಯವಾಗುವ ರೀತಿಯಲ್ಲಿ ಪಡಿತರ ಮಾದರಿಯ ಪೂರೈಕೆ ವ್ಯವಸ್ಥೆಯನ್ನು ಬಲಪಡಿಸುವ ಅಗತ್ಯವಿದೆ.

ಬೀಜಗಳ ಗುಣಮಟ್ಟದಲ್ಲಿಯೂ ಯಾವುದೇ ರಾಜಿ ಮಾಡಿಕೊಳ್ಳಬಾರದು. ನಕಲಿ ಬೀಜಗಳ ಮಾರಾಟದಿಂದ ರೈತರು ಬೆಳೆ ನಷ್ಟ ಅನುಭವಿಸುವುದು ಸಾಮಾನ್ಯವಾಗಿದೆ. ಇದನ್ನು ತಡೆಯಲು ಪ್ರತಿ ಹಂತದಲ್ಲೂ ಪರಿಶೀಲನೆ ಮತ್ತು ಪ್ರಮಾಣೀಕರಣ ಕಡ್ಡಾಯವಾಗಬೇಕು.

ರೈತರಿಗೆ ಸಮಯಕ್ಕೆ ಸರಿಯಾಗಿ ಬೀಜ ಮತ್ತು ಗೊಬ್ಬರ ದೊರಕಿದಾಗ ಮಾತ್ರ ಉತ್ತಮ ಉತ್ಪಾದನೆ ಸಾಧ್ಯ. ಇದು ಕೇವಲ ಕೃಷಿ ಇಲಾಖೆಯ ಹೊಣೆಗಾರಿಕೆ ಮಾತ್ರವಲ್ಲ, ಸರ್ಕಾರದ ಸಮಗ್ರ ನೀತಿ ಹಾಗೂ ವ್ಯವಸ್ಥೆಯ ಪರಿಣಾಮಕಾರಿತ್ವದ ಪರೀಕ್ಷೆಯೂ ಹೌದು.

ಇಂದು ಅಗತ್ಯವಿರುವುದು ಘೋಷಣೆಗಳಲ್ಲ, ನಿಜವಾದ ಜಾರಿಗೆ ಬರುವ ಕ್ರಮಗಳು. ರೈತನ ಹಿತವೇ ದೇಶದ ಹಿತ ಎಂಬುದನ್ನು ಮನದಲ್ಲಿಟ್ಟುಕೊಂಡು ಸರ್ಕಾರ ತಕ್ಷಣ ಕಾರ್ಯಪ್ರವೃತ್ತವಾಗಬೇಕು.

## ಅಭಿವೃದ್ಧಿಗೆ ಗಮನ ಹರಿಸಿ: ಶಾಸಕ ಪ್ರದೀಪ್ ಈಶ್ವರ್‌ಗೆ ಸಂದೀಪ್ ರೆಡ್ಡಿ ಸಲಹೆ



**ಚಿಕ್ಕಬಳ್ಳಾಪುರ:** ಜನರಿಂದ ಆಯ್ಕೆಯಾದ ಶಾಸಕ ಕ್ಷೇತ್ರದ ಜನರೊಂದಿಗೆ ಬೆರೆತು ಅವರ ಕಷ್ಟ–ಸುಖಗಳನ್ನು ಅರಿತು, ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳಬೇಕು ಕಳೆದ ಮೂರು ವರ್ಷಗಳಲ್ಲಿ ನೀವು ಏನು ಮಾಡಿದ್ದೀರಿ ಎಂಬುದು ನಿಮಗೆ ಗೊತ್ತಿದೆ.ಕನಿಷ್ಠ ಈಗಾದರೂ ಉಳಿದಿರುವ ಎರಡು ವರ್ಷಗಳ ಅವಧಿಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದ ಅಭಿವೃದ್ಧಿಗೆ ಆದ್ಯತೆ ನೀಡಬೇಕು. ಮೂರು–ನಾಲ್ಕು ತಿಂಗಳುಗಳ ಕಾಲ ಕ್ಷೇತ್ರದತ್ತ ಮುಖ ಮಾಡದೇ ಇದ್ದರೆ ಜನರು ತಮ್ಮ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ಯಾರನ್ನು ಸಂಪರ್ಕಿಸಬೇಕು?

ಎಂದು ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಸಂದೀಪ್ ರೆಡ್ಡಿ ಶಾಸಕ ಪ್ರದೀಪ್ ಈಶ್ವರ್ ಅವರನ್ನು ಪ್ರಶ್ನಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕ ಪ್ರದೀಪ್ ಈಶ್ವರ್ ಕ್ಷೇತ್ರಕ್ಕೆ ಆಗಾಗ್ಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಆಲಿಸಿ ಕ್ಷೇತ್ರದ ಅಭಿವೃದ್ಧಿಗೆ ಅಗತ್ಯವಿರುವ ಅನುದಾನಗಳನ್ನು ಪಡೆಯಲು ಮುಖ್ಯಮಂತ್ರಿ ಹಾಗೂ ಸಂಬಂಧಪಟ್ಟ ಸಚಿವರೊಂದಿಗೆ ಸಮನ್ವಯ ಸಾಧಿಸಿ ನಗರದಲ್ಲಿ ಹಲವು ಮೂಲಭೂತ ಸಮಸ್ಯೆಗಳು ಉಂಟಾಗಿವೆ. ಅವುಗಳನ್ನು ಪರಿಹರಿಸುವುದು ಶಾಸಕರ ಜವಾಬ್ದಾರಿಯಾಗಿದೆ ಅಲ್ಲವೇ ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ನಗರದ ವಿವಿಧ ರಸ್ತೆಗಳಲ್ಲಿ ಗುಂಡಿಗಳು ಬಿದ್ದಿದ್ದು,ಅವುಗಳನ್ನು ತಕ್ಷಣ ಮುಚ್ಚುವ ಕೆಲಸಕ್ಕೆ ಕ್ರಮ ಕೈಗೊಳ್ಳಿ ಎಂದು ಶಾಸಕರಿಗೆ ತಿಳಿಸಿದರು.

ಮನೆ ಮನೆಗೆ ತೆರಳಿ ಜನರ ಸಮಸ್ಯೆಗಳನ್ನು ಬಗೆಹರಿಸುತ್ತಿದ್ದೇನೆ ಎಂದು ನೀವು ಹೇಳುತ್ತೀರಿ.ಆದರೆ ಅದು ಎಷ್ಟರ ಮಟ್ಟಿಗೆ ಪರಿಣಾಮಕಾರಿಯಾಗಿದೆ ಎಂಬುದು ನಿಮಗೂ ಗೊತ್ತಿದೆ.ಕ್ಷೇತ್ರದ ಬಗ್ಗೆ ಇಂತಹ ಬೇಜವಾಬ್ದಾರಿತನ ಸರಿಯಲ್ಲ.ಈಗಾದರೂ ಕ್ಷೇತ್ರದಲ್ಲೇ ಹೆಚ್ಚು ಸಮಯ ಕಳೆಯುತ್ತ ಜನರ ಧ್ವನಿಯಾಗಿ ಕಾರ್ಯನಿರ್ವಹಿಸಿ,ಹೆಚ್ಚಿನ ಅನುದಾನ ತಂದು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ಹೇಳಿದರು.

ಕ್ಷೇತ್ರದ ಸರ್ಕಾರಿ ಶಾಲೆಗಳು ಹಾಗೂ ಆಸ್ಪತ್ರೆಗಳ ದುಸ್ಥಿತಿಯ ಬಗ್ಗೆ ಗಮನಹರಿಸಿ.ಅಲ್ಲಿನ ಮೂಲಸೌಕರ್ಯ ಮತ್ತು ಸೇವೆಗಳ ಸ್ಥಿತಿಗತಿಯನ್ನು ಪರಿಶೀಲಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ರಾಜಕೀಯವಾಗಿ ಇನ್ನಷ್ಟು ಎತ್ತರಕ್ಕೆ ಬೆಳೆಯಬೇಕೆಂಬ ಆಶಯ ಇದ್ದರೆ ಕ್ಷೇತ್ರದ ಅಭಿವೃದ್ಧಿಗೆ ಒತ್ತು ನೀಡಿ,ಜನರ ಸಮಸ್ಯೆಗಳಿಗೆ ಸ್ಪಂದಿಸಿ ಆಗ ಅಧಿಕಾರ ಮತ್ತು ಜನಬೆಂಬಲ ತಾನಾಗಿಯೇ ಲಭಿಸುತ್ತದೆ. ಕೇವಲ ರಾಜಕೀಯವಾಗಿ ಬೆಳೆಯುವ ಆಸೆಯಿಂದ ಮಾತ್ರ ಯಶಸ್ಸು ಸಾಧಿಸಲು ಸಾಧ್ಯವಿಲ್ಲ ಎಂದು ಸಂದೀಪ್ ರೆಡ್ಡಿ ಅಭಿಪ್ರಾಯಪಟ್ಟರು.

# ಕೋಟಿ ವೆಚ್ಚದ ಸೇತುವೆ ಕಾಮಗಾರಿಗೆ ಗುದ್ದಲಿ ಪೂಜೆ



- ಮಲ್ಲಮ್ಮ ನುಡಿ ವಾರ್ತೆ ಬೀದರ್

ಬೀದರ್ ದಕ್ಷಿಣ ಕ್ಷೇತ್ರದ ಚಿಟ್ಟಾ ವಾಡಿ–ಚಿಟ್ಟಾ ಗ್ರಾಮದ ಮುಖ್ಯ ರಸ್ತೆಯಲ್ಲಿ ಸುಮಾರು ₹3 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ನೂತನ ಸೇತುವೆ ಕಾಮಗಾರಿಗೆ ಇಂದು ಗುದ್ದಲಿ ಪೂಜೆ ನೆರವೇರಿಸಿ ಚಾಲನೆ ನೀಡಲಾಯಿತು. ಈ ಸೇತುವೆ ನಿರ್ಮಾಣವು ಗ್ರಾಮೀಣ ಭಾಗದ ಅಭಿವೃದ್ಧಿಗೆ ಹೊಸ ಮೈಲಿಗಲ್ಲಾಗಲಿದ್ದು, ಸ್ಥಳೀಯ ಜನರ ಬಹುದಿನಗಳ ಕನಸನ್ನು ನನಸಾಗಿಸುವ ಮಹತ್ವದ ಯೋಜನೆಯಾಗಿದೆ.

ವರ್ಷಗಳಿಂದ ಮಳೆಗಾಲದಲ್ಲಿ ಈ ಭಾಗದ ಜನರು ಸಂಚಾರಕ್ಕೆ ತೀವ್ರ ತೊಂದರೆ ಅನುಭವಿಸುತ್ತಿದ್ದರು. ರಸ್ತೆ ಸಂಪರ್ಕ ಕಡಿತಗೊಂಡು ರೈತರು ತಮ್ಮ ಕೃಷಿ ಚಟುವಟಿಕೆಗಳಿಗೆ, ವಿದ್ಯಾರ್ಥಿಗಳು ಶಾಲಾ–ಕಾಲೇಜುಗಳಿಗೆ ಹಾಗೂ ಸಾರ್ವಜನಿಕರು ತಮ್ಮ ದೈನಂದಿನ ಕೆಲಸಗಳಿಗೆ ತೆರಳಲು ಪರದಾಡುವ ಪರಿಸ್ಥಿತಿ ನಿರ್ಮಾಣವಾಗುತ್ತಿತ್ತು. ಈ ಹಿನ್ನೆಲೆಯಲ್ಲಿ ಗ್ರಾಮಸ್ಥರು ಸೇತುವೆ ನಿರ್ಮಾಣಕ್ಕೆ ಬೇಡಿಕೆ ಸಲ್ಲಿಸಿದ್ದರು.

ಈಗ ಸುಮಾರು ₹3 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಸುಸಜ್ಜಿತ ಸೇತುವೆಯು ಚಿಟ್ಟಾ ವಾಡಿ, ಚಿಟ್ಟಾ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ಉತ್ತಮ ಸಂಚಾರ ವ್ಯವಸ್ಥೆಯನ್ನು ಕಲ್ಪಿಸಲಿದೆ. ವಿಶೇಷವಾಗಿ ಮಳೆಗಾಲದಲ್ಲಿ ಉಂಟಾಗುತ್ತಿದ್ದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ದೊರೆಯಲಿದ್ದು, ರೈತರು ತಮ್ಮ ಕೃಷಿ ಉತ್ಪನ್ನಗಳನ್ನು ಸುಲಭವಾಗಿ ಮಾರುಕಟ್ಟೆಗೆ ಸಾಗಿಸಲು ಅನುಕೂಲವಾಗಲಿದೆ. ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಸುರಕ್ಷಿತವಾಗಿ ಸಂಚರಿಸಲು ಸಹ ನೆರವಾಗಲಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು, ಜನರ ಅಗತ್ಯತೆಗಳಿಗೆ ಸ್ಪಂದಿಸಿ ಕ್ಷೇತ್ರದ ಅಭಿವೃದ್ಧಿಗೆ ನಿರಂತರವಾಗಿ ಆದ್ಯತೆ ನೀಡಲಾಗುತ್ತಿದೆ. ರಸ್ತೆ, ಸೇತುವೆ, ಕುಡಿಯುವ ನೀರು, ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರದ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಜನರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಚಿಟ್ಟಾ ವಾಡಿ–ಚಿಟ್ಟಾ ಸೇತುವೆ ನಿರ್ಮಾಣವು ಈ ಭಾಗದ ಅಭಿವೃದ್ಧಿಗೆ ಹೊಸ ದಿಕ್ಕು ನೀಡಲಿದೆ ಎಂದು ಹೇಳಿದರು.

ಗ್ರಾಮಸ್ಥರು ಕೂಡ ಸಂತಸ ವ್ಯಕ್ತಪಡಿಸಿ, ಹಲವಾರು ವರ್ಷಗಳಿಂದ ಈ ಸೇತುವೆ ನಿರ್ಮಾಣಕ್ಕಾಗಿ ನಾವು ಕಾಯುತ್ತಿದ್ದೆವು. ಮಳೆಗಾಲದಲ್ಲಿ ಸಂಚಾರ ತುಂಬಾ ಕಷ್ಟಕರವಾಗುತ್ತಿತ್ತು. ಈಗ ಕಾಮಗಾರಿಗೆ ಚಾಲನೆ ದೊರೆತಿರುವುದು ಸಂತಸದ ಸಂಗತಿಯಾಗಿದೆ. ಜನರ ಸಮಸ್ಯೆಯನ್ನು ಅರಿತು ಅಭಿವೃದ್ಧಿ ಕಾರ್ಯ ಕೈಗೊಂಡಿರುವ ಶಾಸಕರಿಗೆ ನಾವು ಕೃತಜ್ಞರಾಗಿದ್ದೇವೆ ಎಂದು ತಿಳಿಸಿದರು.


ಈ ಸಂದರ್ಭದಲ್ಲಿ ಮುಖಂಡರಾದ ಉದಯಕುಮಾರ ತೋರಣ, ಶಿವಕುಮಾರ ಸ್ವಾಮಿ, ಸಂಜುಕುಮಾರ ಮಾಶೆಟ್ಟಿ, ವೆಂಕಟರೆಡ್ಡಿ, ಅರುಣಕುಮಾರ, ಅನೀಲ ಗುನ್ನಳ್ಳಿ, ಜೋಸೆಫ್ ಕೊಡ್ಡೆಕರ್, ವಿಧ್ಯಾಸಾಗರ ಸ್ವಾಮಿ, ಪ್ರತಿಮಾ ಸ್ವಾಮಿ, ಆನಂದ ಪಾಟೀಲ, ಅನೀಲ ಚಿಟ್ಟಾ, ಶಿವಕುಮಾರ ಪಾಟೀಲ, ರಾಜಶೇಖರ ನೌಬಾದೆ, ರಾಮು ಅಮಲಾಪುರ, ಮಲ್ಲಿಕಾರ್ಜುನ ವಾಡಿ, ಮಹೇಶ ತೋರಣ, ಮಹೇಶ ದೊಡ್ಡಿ, ಜನಾರ್ದನ ರೆಡ್ಡಿ, ಶಿವಕುಮಾರ, ಶ್ರೀಕಾಂತ, ಸುಂದರ ವಕೀಲ್, ಈರಯ್ಯಾ ಸ್ವಾಮಿ, ಮಹೇಶ್ ವಾಡಿ, ಬಸು ಹೇಡೆ, ಅರುಣ ಚಿಟ್ಟಾ, ಶಿವರಾಜ ಚಿಟ್ಟಾ,ನರಸಪ್ಪ ಚಿಟ್ಟಾ, ಧನರಾಜ ಮತ್ತು ಅನೇಕರಿದ್ದರು.

## ಕಾರ್ ಡೋರ್ ಲಾಕ್: ಮಗು ಸಾವು

- ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಾರಿನ ಡೋರ್‌ಗಳು ಲಾಕ್ ಆಗಿದ್ದರಿಂದ ಒಳಗಿದ್ದ ಮಗು ಉಸಿರುಗಟ್ಟಿ ಸಾವನ್ನಪ್ಪಿದ ಹೃದಯವಿದ್ರಾವಕ ಘಟನೆ ಶಹಾಬಾದ್ ತಾಲ್ಲೂಕಿನ ತೊನಸನಹಳ್ಳಿ (ಎಸ್) ಗ್ರಾಮದಲ್ಲಿ ವರದಿಯಾಗಿದೆ. ಮೃತ ಮಗುವನ್ನು ಮೂರು ವರ್ಷದ ಬಸವಪ್ರಭು ತಂದೆ ಕೊಟ್ಟುರೇಶ್ವರ ಎಂದು ಗುರುತಿಸಲಾಗಿದೆ.

ಮಗುವನ್ನು ಕರೆದುಕೊಂಡು ಶಾಲೆಗೆ ಕಾರಿನಲ್ಲಿ ಹೋಗಿದ್ದ ಪೋಷಕರು ಶಾಲೆ ಬಳಿ ಕಾರು ಪಾರ್ಕ್ ಮಾಡಿ ಲಾಕ್ ಮಾಡದೇ ಹೋಗಿದ್ದರು. ಈ ವೇಳೆ ಮಗು ಆಟವಾಡುತ್ತಾ ಕಾರಿನೊಳಗೆ ಹೋಗಿದೆ. ಈ ವೇಳೆ ಕಾರಿನ ಎಲ್ಲ ಡೋರ್‌ಗಳು ಲಾಕ್ ಆಗಿವೆ. ಬೆಳಿಗ್ಗೆಯಿಂದ ಮಧ್ಯಾಹ್ನದವರೆಗೆ ಮಗು ಎಲ್ಲಿ ಹೋಯಿತು ಅಂತ ಹುಡುಕಾಡಿದ್ದ ಪೋಷಕರು ಬಳಿಕ ಕಾರು ಓಪನ್ ಮಾಡಿದ್ದಾಗ ದುರಂತ ಬೆಳಕಿಗೆ ಬಂದಿದೆ. ಈ ಉರಿತು ಶಹಾಬಾದ್



ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಮೇಲಾಧಿಕಾರಿಗಳ ಒತ್ತಡ ಆರೋಪ: ಆತ್ಮಹತ್ಯೆ

- ಮಲ್ಲಮ್ಮ ನುಡಿ ವಾರ್ತೆ ಬೀದರ

ಬಸವಕಲ್ಯಾಣ ಗ್ರಾಮ ಲೆಕ್ಕಾಧಿಕಾರಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡ ಘಟನೆ ಬುಧವಾರ ಸಾಯಂಕಾಲ ಸುಮಾರು 4 ಗಂಟೆಗೆ ನಡೆದಿದ್ದು ಮೇಲಾಧಿಕಾರಿಗಳ ಒತ್ತಡಿಂದಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿ ಕುಟುಂಬಸ್ಥರು ದೂರು ನೀಡಿದ್ದಾರೆ.

ಕಾಂಬಳಿ ವಾಡಿ ಗ್ರಾಮದ ನಿವಾಸಿ ಮಹಾದೇವ್ (30) ಆತ್ಮಹತ್ಯೆ ಮಾಡಿಕೊಂಡವರು.

ತಾಲೂಕಿನ ಉಮ್ಮಾಪುರ್ ಹಾಗೂ ಹಳ್ಳಿ ಗ್ರಾಮದಲ್ಲಿ ಮಹಾದೇವ್ ಅವರು ಗ್ರಾಮ ಲೆಕ್ಕಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದರು. ಅವರು ಕೆಲಸಕ್ಕೆ ಸೇರಿ ಒಂದು ವರ್ಷವಷ್ಟೇ ಕಳೆದಿತ್ತು. ಕೆಲಸದಲ್ಲಿ ಮೇಲಾಧಿಕಾರಿಗಳ ಒತ್ತಡ ಹೆಚ್ಚಾಗಿದೆ ಎಂದು ತನ್ನ ತಾಯಿಯ ಹತ್ತಿರ ಅವರು ಹೇಳಿಕೊಂಡಿದ್ದು, ಕುಟುಂಬಸ್ಥರು ಅವರಿಗೆ ಸಮಾಧಾನ ಕೂಡ ಹೇಳಿದ್ದರು ಎನ್ನಲಾಗಿದೆ. "ನನ್ನ ಮಗ ಕೆಲಸಕ್ಕೆ ಸೇರಿ ಕೇವಲ ಒಂದು ವರ್ಷವಾಗಿತ್ತು. ಮೇಲಾಧಿಕಾರಿಗಳ ಒತ್ತಡ ಹೆಚ್ಚಾಗಿದೆ ಎಂದು ನನ್ನ ಬಳಿ ಹೇಳಿದ್ದ. ಈಗ ನನ್ನ ಮಗ ಪ್ರಾಣವನ್ನೇ



ಬಿಟ್ಟಿದ್ದಾನೆ. ನನ್ನ ಮಗನ ಸಾವಿಗೆ ನ್ಯಾಯ ಕೊಡಿ" ಎಂದು ಮೃತನ ತಾಯಿ ಮಾಧ್ಯಮದ ಮುಂದೆ ತಮ್ಮ ಅಳಲನ್ನು ತೋಡಿಕೊಂಡಿದ್ದಾರೆ.

ಘಟನಾ ಸ್ಥಳಕ್ಕೆ ಭೇಟಿ ನೀಡಿದ ಸಹಾಯಕ ಆಯುಕ್ತ ಪ್ರಕಾಶ್ ಕುದ್ರೆ ಹಾಗೂ ತಹಸೀಲ್ದಾರ್ ಅವರ ಮುಂದೆ ಮೃತರ ಕುಟುಂಬಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಂತರ ಮಾಧ್ಯಮದ ಜೊತೆ ಮಾತನಾಡಿದ ಪ್ರಕಾಶ್ ಕುದ್ರೆ ಅವರು, ಈಗಾಗಲೆ ಈ ಕುರಿತು ಮಂಠಾಳ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಾಮಾಜಿಕ ಪರಿಶೋಧನಾ ನಿರ್ದೇಶಕರಿಂದ ನಾಗಮಾರಪಳ್ಳಿಗೆ ಭೇಟಿ

- ಮಲ್ಲಮ್ಮ ನುಡಿ ವಾರ್ತೆ ಔರಾದ್

ತಾಲೂಕಿನ ನಾಗಮಾರಪಳ್ಳಿ ಗ್ರಾಮ ಪಂಚಾಯತಿಗೆ ಬುಧವಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಾಮಾಜಿಕ ಪರಿಶೋಧನಾ ನಿರ್ದೇಶಕರಾದ ಸಿ.ಕೆ. ಮಲ್ಲಪ್ಪ ಅವರು ಭೇಟಿ ನೀಡಿ ವಿವಿಧ ಯೋಜನೆಗಳ ಉತ್ತಮ ಅನುಷ್ಠಾನಕ್ಕೆ ಸೂಚನೆ. ಇದೇ ವೇಳೆ ನರೇಗಾ, 15ನೇ ಹಣಕಾಸು ಆಯೋಗ, ರಾಜ್ಯ ಹಣಕಾಸು ಆಯೋಗ, ಸಮಗ್ರ ಶಿಕ್ಷಣ ಅಭಿಯಾನ ಹಾಗೂ ಮಧ್ಯಾಹ್ನ ಬಿಸಿಯೂಟ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಅನುದಾನ ವಹಿಗಳು, ಲೆಕ್ಕಪತ್ರಗಳು, ದಾಖಲಾತಿಗಳು ಮತ್ತು ಸಾಮಾಜಿಕ ಪರಿಶೋಧನೆಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದರು.

ವಿವಿಧ ಯೋಜನೆಗಳ ಅನುಷ್ಠಾನ, ಅನುದಾನದ ಬಳಕೆ, ಕಾಮಗಾರಿಗಳ ಪ್ರಗತಿ, ದಾಖಲಾತಿಗಳ ನಿರ್ವಹಣೆ ಹಾಗೂ ಸಾಮಾಜಿಕ ಪರಿಶೋಧನಾ ವರದಿಗಳ ಕುರಿತು ಮಾಹಿತಿ ಪಡೆದುಕೊಂಡರು.



ಗ್ರಾಮ ಪಂಚಾಯತಿಗಳಲ್ಲಿ ಸಾಮಾಜಿಕ ಪರಿಶೋಧನಾ ಪ್ರಕ್ರಿಯೆ ಮೂಲಕ ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಅಲ್ಲದೆ, ಗ್ರಾಮಸಭೆಗಳ ಮೂಲಕ ಜನರ ಭಾಗವಹಿಸುವಿಕೆಯನ್ನು ಹೆಚ್ಚಿಸಬೇಕು ಎಂದು ತಿಳಿಸಿದರು. ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು. ಈ ವೇಳೆ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ್, ಸಹಾಯಕ ನಿರ್ದೇಶಕ (ಗ್ರಾ.ಉ) ಶಿವಕುಮಾರ ಘಾಟೆ, ರಾಜ್ಯ ಸಂಪನ್ಮೂಲ ವ್ಯಕ್ತಿ ನರಸಾರೆಡ್ಡಿ, ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳಾದ ದೇವಿದಾಸ, ಹಣಮಂತ ಮೇತ್ರೆ, ರಾಹುಲ್ ಕೈವಾರೆ, ತಾಂತ್ರಿಕ ಸಂಯೋಜಕ ಆನಂದ ಕಾಳಗಾಪೂರೆ, ತಾಂತ್ರಿಕ ಸಹಾಯಕರು, ಐಇಸಿ ಸಂಯೋಜಕರು, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸಂಗೀತಾ ದೇಶಮುಖ, ಗ್ರಾಮ ಪಂಚಾಯತಿ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಸೋಲಾಪುರ ವಿಭಾಗದಲ್ಲಿ ಚಲಿಸುವ ರೈಲುಗಳ ಮೇಲೆ ನಿರ್ಬಂಧ

- ಮಲ್ಲಮ್ಮ ನುಡಿ ವಾರ್ತೆ ಸೋಲಾಪುರ

ಸೋಲಾಪುರ ಬಳಿಯ ಟಿಕೇಕರವಾಡಿ ಯಾರ್ಡ್‌ನಲ್ಲಿ ಮೇಲ್ದರ್ಜೆ ಕಾಮಗಾರಿಗೆ ಸಂಬಂಧಿಸಿದಂತೆ ಎಲೆಕ್ಟ್ರಾನಿಕ್ ಇಂಟರ್‌ಲಾಕಿಂಗನ್ನು ನಿಯೋಜಿಸಲು ಪೂರ್ವ–ಇಂಟರ್‌ಲಾಕಿಂಗ್ ಅಲ್ಲದ ಮತ್ತು ಇಂಟರ್‌ಲಾಕಿಂಗ್ ಅಲ್ಲದ ಕೆಲಸದಿಂದಾಗಿ ಜೂನ್ 05 ರಿಂದ 10 ರವರೆಗೆ ಕೇಂದ್ರ ರೈಲ್ವೆಯ ಸೋಲಾಪುರ ವಿಭಾಗವು ಸಂಚಾರ ನಿರ್ಬಂಧಗಳನ್ನು ನಿರ್ವಹಿಸಲಿದೆ. ಬ್ಲಾಕ್‌ನಿಂದಾಗಿ ಸೋಲಾಪುರ ವಿಭಾಗದ ನಿಲ್ದಾಣಗಳ ಮೂಲಕ ರೈಲುಗಳ ಸಂಚಾರದ ಮೇಲಿನ ನಿರ್ಬಂಧಗಳು ಈಬ ಕೆಳಗಿನಂತಿವೆ ಎಂದು ಕೇಂದ್ರ ರೈಲ್ವೆಯ ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆಯು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.


ಕೆಳಕಂಡ ರೈಲುಗಳನ್ನು ಉಲ್ಲೇಖಿಸಿದಂತೆ ನಿಯಂತ್ರಿಸಲಾಗುತ್ತದೆ:

ರೈಲು ಸಂಖ್ಯೆ 11311 ಸೋಲಾಪುರ–ಹಾಸನ ಎಕ್ಸ್‌ಪ್ರೆಸ್ ಜೆಸಿಒ 05.06.2026 ರಂದು 45 ನಿಮಿಷಗಳ ಕಾಲ ನಿಯಂತ್ರಿಸಲಾಗುತ್ತದೆ.

ರೈಲು ಸಂಖ್ಯೆ 17308 ಬಾಗಲಕೋಟೆ–ಮೈಸೂರು ಬಸವಾ ಎಕ್ಸ್‌ಪ್ರೆಸ್ ಜೆಸಿಒ 05.06.2026 ರಂದು 45 ನಿಮಿಷಗಳ ಕಾಲ ನಿಯಂತ್ರಣದಲ್ಲಿರುತ್ತದೆ.

ರೈಲು ಸಂಖ್ಯೆ 18520 ಎಲ್‌ಟಿಟಿ ಮುಂಬೈ–ವಿಶಾಖಪಟ್ಟಣ ಎಕ್ಸ್‌ಪ್ರೆಸ್ ಜೆಸಿಒ 08.06.2026 ರಂದು 2 ಗಂಟೆಗಳ ಕಾಲ ನಿಯಂತ್ರಣದಲ್ಲಿರುತ್ತದೆ.

ರೈಲು ಸಂಖ್ಯೆ 01465 ಸೋಲಾಪುರ–ಕಲಬುರಗಿ ವಿಶೇಷ ಜೆಸಿಒ 08.06.2026 ರಂದು 1 ಗಂಟೆ 30 ನಿಮಿಷಗಳ ಕಾಲ ಮತ್ತು ರೈಲು ಸಂಖ್ಯೆ 16536 ಪಂಢರಪುರ–ಮೈಸೂರು ಗೋಲ್ಗುಂಬಜ್ ಎಕ್ಸ್‌ಪ್ರೆಸ್



ಜೆಸಿಒ 08.06.2026 ರಂದು 30 ನಿಮಿಷಗಳ ಕಾಲ ನಿಯಂತ್ರಣದಲ್ಲಿರುತ್ತದೆ. ರೈಲು ಸಂಖ್ಯೆ 11301 ಸಿಎಸ್‌ಎಂಟಿ ಮುಂಬೈ–ಕೆಎಸ್‌ಆರ್ ಬೆಂಗಳೂರು ಉದ್ಯಾನ ಎಕ್ಸ್‌ಪ್ರೆಸ್ ಜೆಸಿಒ 08.06.2026 ರಂದು 30 ನಿಮಿಷಗಳ ಕಾಲ ನಿಯಂತ್ರಣದಲ್ಲಿರುತ್ತದೆ. ರೈಲು ಸಂಖ್ಯೆ 16382 ಕನ್ಯಾಕುಮಾರಿ–ಪುಣೆ ಎಕ್ಸ್‌ಪ್ರೆಸ್ ಜೆಸಿಒ 09.06.2026 ರಂದು 1 ಗಂಟೆ 15 ನಿಮಿಷಗಳ ಕಾಲ ನಿಯಂತ್ರಿಸಲ್ಪಡುತ್ತದೆ. ರೈಲು ಸಂಖ್ಯೆ 11020 ಭುವನೇಶ್ವರ– ಸಿಎಸ್‌ಎಂಟಿ ಮುಂಬೈ ಎಕ್ಸ್‌ಪ್ರೆಸ್ ಜೆಸಿಒ 09.06.2026 ರಂದು 40 ನಿಮಿಷಗಳ ಕಾಲ ನಿಯಂತ್ರಿಸಲ್ಪಡುತ್ತದೆ.

ಕೆಲವು ರೈಲು ಮಾರ್ಗ ಬದಲಾವಣೆಗಳು ಇಂತಿದೆ. ರೈಲು ಸಂಖ್ಯೆ 57662 ವಿಜಯಪುರ–ರಾಯಚೂರು ಪ್ಯಾಸೆಂಜರ್ ಜೆಸಿಒ 05.06.2026 ರಿಂದ 10.06.2026 ರವರೆಗೆ ವಿಜಯಪುರ–ಹೋಟ್ಗಿ–ವಾಡಿ ಮೂಲಕ ಮತ್ತು ರೈಲು ಸಂಖ್ಯೆ 57661 ರಾಯಚೂರು–ವಿಜಯಪುರ ಪ್ಯಾಸೆಂಜರ್ ಜೆಸಿಒ 05.06.2026 ರಿಂದ 10.06.2026 ರವರೆಗೆ ವಾಡಿ–ಹೋಟ್ಗಿ–ವಿಜಯಪುರ ಮೂಲಕ ಮಾರ್ಗ ಬದಲಾವಣೆ ಮಾಡಲಾಗುತ್ತದೆ.

ಕೆಳಗಿನ ರೈಲುಗಳನ್ನು ನಿರ್ದಿಷ್ಟಪಡಿಸಿದಂತೆ ಮರುಹೊಂದಿಸಲಾಗುತ್ತದೆ. ರೈಲು ಸಂಖ್ಯೆ 16536 ಪಂಢರಪುರ–ಮೈಸೂರು ಗೋಲ್ಗುಂಬಜ್ ಎಕ್ಸ್‌ಪ್ರೆಸ್ ಜೆಸಿಒ 10.06.2026 ಅನ್ನು 15:20 ಗಂಟೆಗೆ 2 ಗಂಟೆ 20 ನಿಮಿಷಗಳ ಕಾಲ ಮತ್ತು ರೈಲು ಸಂಖ್ಯೆ 11301 ಸಿಎಸ್‌ಎಂಟಿ ಮುಂಬೈ–ಕೆಎಸ್‌ಆರ್ ಬೆಂಗಳೂರು ಉದ್ಯಾನ ಎಕ್ಸ್‌ಪ್ರೆಸ್ ಜೆಸಿಒ 10.06.2026 ಅನ್ನು 10:10 ಗಂಟೆಗೆ 2 ಗಂಟೆ 15 ನಿಮಿಷಗಳ ಕಾಲ ಮರುಹೊಂದಿಸಲಾಗುತ್ತದೆ.

ರೈಲು ಸಂಖ್ಯೆ 01465 ಸೋಲಾಪುರ–ಕಲಬುರಗಿ ಮತ್ತು ರೈಲು ಸಂಖ್ಯೆ 01466 ಕಲಬುರಗಿ–ಸೋಲಾಪುರ ದಿನಾಂಕ 10.06.2026ರಂದು ರದ್ದಾಗಿರುತ್ತವೆ.

ಈ ಸಂಚಾರ ನಿರ್ಬಂಧಗಳು ಮೂಲಸೌಕರ್ಯ ಮೇಲ್ದರ್ಜೆಗೇರಿಸುವಿಕೆಗಾಗಿ ಮತ್ತು ಸುರಕ್ಷತೆಗಾಗಿ ಅತ್ಯಗತ್ಯವಾಗಿದೆ. ಪ್ರಯಾಣಿಕರು ರೈಲ್ವೆಯಿಂದ ಉಂಟಾದ ಅನಾನುಕೂಲತೆಗಾಗಿ ಸಹಕರಿಸುವಂತೆ ವಿನಂತಿಸಲಾಗಿದೆ. ಮೇಲ್ಕಂಡ ನಿರ್ಬಂಧಗಳನ್ನು ಗಮನಿಸಿ ಅದಕ್ಕೆ ಅನುಗುಣವಾಗಿ ತಮ್ಮ ಪ್ರಯಾಣವನ್ನು ಯೋಜಿಸುವಂತೆ ವಿನಂತಿಸಲಾಗಿದೆ.

## ಶ್ರೀ ಶಾಂತಾದುರ್ಗಾ ದೇವಿಮಂತ್ರ ಪುಷ್ಪಾಂಜಲಿ ಕೃತಿ ಲೋಕಾರ್ಪಣೆ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಲೇಖಕಿ, ನಿವೃತ್ತ ಪ್ರಾಚಾರ್ಯೆ ಡಾ. ಸ್ಮಿತಾ ಜಯಂತ ನಾರ್ವೇಕರ್ ಅವರು ಹೊರ ತಂದಿರುವ ಭೂಮ್ತಾಯಿ ಶ್ರೀ ಶಾಂತಾದುರ್ಗಾ ದೇವಿ ಮಂತ್ರ ಪುಷ್ಪಾಂಜಲಿ ಕೃತಿಯು ಶ್ರೀ ಶಾಂತಾದುರ್ಗಾ ದೇವಸ್ಥಾನದ ಆವರಣದಲ್ಲಿ ಲೋಕಾರ್ಪಣೆಗೊಂಡಿತು.ಹಿರಿಯ ಅರ್ಚಕ ವಿಠ್ಠಲ ಭಟ್ಟ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಡಾ.ಸ್ಮಿತಾ ನಾರ್ವೇಕರ್ ಅವರ ದೈವಭಕ್ತಿ, ನಿಷ್ಠೆಯ ಫಲವಾಗಿ ಈ ಕೃತಿ ಮೂಡಿಬಂದಿದೆ ಎಂದರು. ಕೃತಿಯನ್ನು ಕೆ.ಎಲ್.ಇ ಅಂಕೋಲಾ ಸಮೂಹ ಸಂಸ್ಥೆಗಳ ಸಲಹಾ ಸಮಿತಿಯ ಸದಸ್ಯೆ ಡಾ. ಮಿನಲ್ ನಾರ್ವೇಕರ್ ಕೃತಿ ಬಿಡುಗಡೆಗೊಳಿಸಿ ಶುಭಕೋರಿದರು.ವಕೀಲ ಸುಭಾಸ ನಾರ್ವೇಕರ್ ಮಾತನಾಡಿ, ಶ್ರೀ ಶಾಂತಾದುರ್ಗೇಯ ಶ್ಲೋಕ, ಕವನಗಳ ಕೃತಿ ಇದುವರೆಗೂ ಲಭ್ಯವಿರಲಿಲ್ಲ. ಡಾ. ಸ್ಮಿತಾ ಜಯಂತ ನಾರ್ವೇಕರ್ ಅವರು ಇದನ್ನು ಪುಸ್ತಕ ರೂಪದಲ್ಲಿ ಹೊರ ತಂದಿರುವುದು ಭಕ್ತರಿಗೆ ಅನುಕೂಲವಾಗಲಿದೆ ಎಂದರು.ಪತ್ರಕರ್ತ ವಿಠ್ಠಲದಾಸ ಕಾಮತ ಮಾತನಾಡಿ, ಕೃತಿಕಾರರು ಉತ್ತಮ ಗಾಯಕರಾಗಿರುವ ಹಿನ್ನೆಲೆಯಲ್ಲಿ ಈ ಕೃತಿಯಲ್ಲಿ ಇರುವ ಶ್ಲೋಕ ಮತ್ತು ಕವನಗಳನ್ನು ಹಾಡುಗಳಾಗಿ ಸಿಡಿಯ ರೂಪದಲ್ಲಿ ಹೊರತರುವ ಕಾರ್ಯ ಕೃತಿ-ಕಾರರಿಂದ ಆಗಲಿ ಎಂದರು. ಪುರಸಭೆ ಮಾಜಿ ಅಧ್ಯಕ್ಷ ಭಾಸ್ಕರ ನಾರ್ವೇಕರ್, ದೇವಸ್ಥಾನದ ಧರ್ಮದರ್ಶಿ ಎನ್.ಬಿ.ಮಹಾಲೆ, ಅಶೋಕ ಮಹಾಲೆ, ಲೇಖಕ ವಿಘ್ನೇಶ್ವರ ಗುನಗಾ, ಅರ್ಚಕ ಗಣಪತಿ ಭಟ್ಟ, ಜಯಂತ ನಾರ್ವೇಕರ್ ಉಪಸ್ಥಿತರಿದ್ದರು.

ದಿನಕರ ಅಂಕೋಲೇಕರ್ ಪ್ರಾರ್ಥಿಸಿದರು. ಗಣೇಶ ನಾರ್ವೇಕರ್ ಸ್ವಾಗತಿಸಿದರು. ಲೇಖಕಿ ಡಾ. ಸ್ಮಿತಾ ಜಯಂತ ನಾರ್ವೇಕರ್ ಪ್ರಾಸ್ತಾವಿಕ ಮಾತನಾಡಿದರು. ಸಂಗೀತಾ ಬಾಂದೇಕರ್ ,ಶಾಂತಲಾ ಅರುಣ ನಾಡಕರ್ಣಿ, ವಿನಯಾ ಪ್ರಭು, ಗಾಯತ್ರಿ ಶೆಟ್ಟಿ, ಸೋನಿ ನಾಗ್ವೇಕರ್,ಗಣೇಶ ನಾಗ್ವೇಕರ್,ವಿನಯ ಫಾತರಪೇಕರ್ ಶುಶ್ರಾವ್ಯವಾಗಿ ಹಾಡಿದರು.

## ಜಿಲ್ಲಾ ನ್ಯಾಯಾಲಯದಲ್ಲಿ ವಿಶ್ವ ಪರಿಸರ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ವಿಶ್ವ ಪರಿಸರ ದಿನಾಚರಣೆ' ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಜೂ.05 ರಂದು ಬೆಳಿಗ್ಗೆ 09.30 ಗಂಟೆಗೆ ಜಿಲ್ಲಾ ನ್ಯಾಯಾಲಯದ ಸಂಕೀರ್ಣದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ವಸತಿಗೃಹ ಮುಂಭಾಗದಲ್ಲಿರುವ ಉದ್ಯಾನವನದಲ್ಲಿ ಸಸಿಗಳನ್ನು ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ತಿಳಿಸಿದ್ದಾರೆ.

## ಮೊಹರಂ ಹರಾಜು ರದ್ದು ಮಾಡಲು ಒತ್ತಾಯ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಪ್ರತಿ ವರ್ಷದಂತೆ ಈ ವರ್ಷವೂ ಕರೆಯುವ ಮೊಹರಂ ಹರಾಜು ಪ್ರಕ್ರಿಯೆ ರದ್ದು ಮಾಡುವಂತೆ ಒತ್ತಾಯಿಸಿ ಸೋಶಿಯಲ್ ಡೆಮಾಕ್ರೆಟಿಕ್ ಆಫ್ ಪಾರ್ಟಿ ಇಂಡಿಯಾ ವತಿಯಿಂದ ಪುರಸಭೆ ವ್ಯವಸ್ಥಾಪಕ ಸುರೇಶ ಹೊನ್ನಳ್ಳಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.ಪುರಸಭೆ ನೀಡಿದ ಟೆಂಡರ್‌ಗಳನ್ನು ದುರುಪಯೋಗಪಡಿಸಿಕೊಂಡು, ಟೆಂಡರ್‌ದಾರರು ಅಂಗಡಿಕಾರರಿಂದ ನಿಜವಾದ ಬಾಡಿಗೆಗಿಂತ ಮೂರು-ನಾಲ್ಕು ಪಟ್ಟು ಹೆಚ್ಚು ಹಣವನ್ನು ವಸೂಲಿಸುತ್ತಿದ್ದಾರೆ. ಈ ಶೋಷಣೆಯು ಅಂಗಡಿಕಾರರಿಗೆ ತೀವ್ರ ಆರ್ಥಿಕ ಸಂಕಷ್ಟವನ್ನು ಉಂಟುಮಾಡಿ, ಹಬ್ಬದ ಉತ್ಸಾಹವನ್ನು ಕುಗ್ಗಿಸುತ್ತಿದೆ. ಜನರ ಹಬ್ಬವಾಗಬೇಕಾದ ಮೊಹರಂ, ಲಾಭದಾಸೆಯ ವೇದಿಕೆಯಾಗುತ್ತಿರುವುದು ಅಂಗಡಿಕಾರರ ಹಕ್ಕುಗಳನ್ನು ಹಿಂಸಿಸುತ್ತಿದೆ ಟೆಂಡರ್‌ಗಳನ್ನು ತಕ್ಷಣ ರದ್ದುಪಡಿಸಿ ಅಂಗಡಿಗಳ ಹಂಚಿಕೆಯನ್ನು ನೇರವಾಗಿ ಪುರಸಭೆ ಮೂಲಕ ನ್ಯಾಯಸಮ್ಮತ ಮತ್ತು ಸಮಂಜಸ ದರದಲ್ಲಿ ನಿರ್ವಹಿಸಲು. ಅಂಗಡಿಕಾರರ ಶೋಷಣೆಯನ್ನು ತಡೆಯಲು ಪಾರದರ್ಶಕ ವ್ಯವಸ್ಥೆ ಜಾರಿಗೆ ತರಬೇಕು ಎಂದು ಮನವಿ ಪತ್ರ ಸಲ್ಲಿಸಿದರು.ಮುದಗಲ್ ಬ್ಲಾಕ್ ಅಧ್ಯಕ್ಷ ಫಾರೂಕ್ ಬೇಗ್, ಜಿಲ್ಲಾ ಉಪಾಧ್ಯಕ್ಷ ಎಂ ಡಿ ರಫಿ, ಪಾಷಾ ಕಡ್ಡಿಪುಡಿ, ನಾಸಿರ್ ಪಾಷಾ ಖಾಸಿಂ ಡೊಯಿ, ಇಬ್ರಾಹಿಂ ಹುಸೇನ್ ಭಾಷಾ ಹೈದರಾಬಾದಿ ಅಂಗಡಿ ಮಾಲೀಕರು ಸೇರಿದಂತೆ ಇನ್ನಿತರರಿದ್ದರು.

## ಅಗ್ನಿ ವೀರನಿಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

ದೇಶ ಸಂರಕ್ಷಣೆಗಾಗಿ ಸೈನಿಕರ ಸೇವೆ ಅಮೋಘವಾಗಿದೆದೇಶ ಸೇವೆಮಾಡಬೇಕು ಎಂದು ಧೈರ್ಯದಿಂದ ಮುನ್ನುಗ್ಗಿಮದ್ರಾಸನ ಲ್ಲಿ6ತಿಂಗಳತರಬೇತಿ ಪಡೆದು ಮರಳಿ ಯಲಬುರ್ಗಾಕ್ಕೆ ಆಗಮಿಸಿ ತಾಯಿತಂದೆಹಾಗು ಗುರು- ಹಿರಿಯರ ಆರ್ಶಿವಾದ ಪಡೆದು ಮತ್ತೆ ಜಮ್ಮು ಕಾಶ್ಮೀರದಲ್ಲಿ ಸೇವೆ ಮಾಡಲು ಮುಂದಾಗಿ,ದೇಶ ಸೇವೆಗೆ ಹೆಜ್ಜೆ ಇಟ್ಟ ನಮ್ಮ ಯಲಬುರ್ಗಾದ ಹೆಮ್ಮೆಯ ವೀರ ಪುತ್ರ ವಿಜಯಕುಮಾರಶಿವಕಲ್ಲಪ್ಪಸಾದರಖಾನ ಇವರ ಪರಿಶ್ರಮ ಇವರದೇಶಭಕ್ತಿ ಅಮೋಘವಾದದುಎಂದು ಶ್ರೀ ಏಳು ಕೋಟಿಯಮಲ್ಲಯ್ಯ ದೇವಸ್ಥಾನದ ಸಮಿತಿಯವರಾದಶಿವಕುಮಾರ ಭೂತೆ, ಶರಣಬಸಪ್ಪ ದಾನಕೈ ಅವರು ಮಾತನಾಡಿ ಶುಭಕೋರಿದರು.ನಂತರ ಶ್ರೀಏಳು ಕೋಟಿ ಮಲ್ಲಯ್ಯದೇವಸ್ಥಾನಸಮಿತಿಯ ಸರ್ವ ಸದಸ್ಯರು ಸನ್ಮಾನಿಸಿದರು. ಈ ವೇಳೆ ಫಕೀರಪ್ಪಗಾಣಗೇರ, ರಾಮಣ್ಣ ನೇರೆಗಲ್ಲ್,ತಿಪ್ಪಣ್ಣ ಉಪ್ಪಾರ, ಮಲ್ಲಪ್ಪ ಭೂತೆ, ಮಲ್ಲಿಕಾರ್ಜುನ ಸಾದರಖಾನ , ವಿಜಯ ಉಪ್ಪಾರ, ಬಸನಗೌಡ ಮಾಲಿಪಾಟೀಲ್,ಈಶಪ್ಪ, ಬಸವರಾಜ,ಶೇಖಪ್ಪ , ಶಿವಕಲ್ಲಪ್ಪ ಸಾದರಖಾನ ಸೇರಿದಂತೆ ಇತರರು ಇದ್ದರು.

## ನಮ್ಮ ಪ್ರದೇಶದಲ್ಲಿ ಯಾವುದೇ ಅಭಿವೃದ್ಧಿ ಕಾಮಗಾರಿಗಳು ನಡೆದಿಲ್ಲ ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಸಾರ್ವಜನಿಕರ ಆಕ್ರೋಶ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ವಿನಾಯಕನಗರ ದಲ್ಲಿ ಮೂಲಭೂತ ಅಭಿವೃದ್ಧಿ ಕಾಮಗಾರಿಗಳು ನಡೆಯದೆ ಇರುವುದಕ್ಕೆ ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಘಟನೆ ಗುರುವಾರ ಮುಂಜಾನೆ ನಡೆದಿದೆ. ವಾರ್ಡ್ ನಂ. 33ರ ನಿವಾಸಿಗಳು ರಸ್ತೆ, ಒಳಚರಂಡಿ, ಕುಡಿಯುವ ನೀರು ಹಾಗೂ ಬೀದಿ ದೀಪಗಳಂತಹ ಮೂಲಸೌಕರ್ಯ ಅಭಿವೃದ್ಧಿ ಕೆಲಸಗಳು ಹಲವು ವರ್ಷಗಳಿಂದ ನಿರ್ಲಕ್ಷ್ಯಕ್ಕೆ ಒಳಗಾಗಿವೆ ಎಂದು ಕಾರ್ಯಕರ್ತರು ಆರೋಪಿಸಿದ್ದಾರೆ.

ಸ್ಥಳೀಯರ ಪ್ರಕಾರ, ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಶಾಸಕರ ಪರವಾಗಿ ಕಾರ್ಯನಿರ್ವಹಿಸುವ ಪಿಎಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. ಜನರು ದೂರವಾಣಿ ಕರೆ ಮಾಡಿದರೂ ಫೋನ್ ಸ್ವೀಕರಿಸುವುದಿಲ್ಲ ಹಾಗೂ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಕೇಳಿದಾಗ ಸರಿಯಾದ ಉತ್ತರ ನೀಡುವುದಿಲ್ಲ ಎಂಬ ಆರೋಪ ಮಾಡಿದ್ದಾರೆ.

ಇನ್ನೂ ಕೆಲವರು, "ಅಭಿವೃದ್ಧಿ ಕೆಲಸಗಳಿಗೆ ಸಹಕಾರ ನೀಡುವ ಬದಲು ಪಿಎಗಳು ಕಮಿಷನ್ ದಂಧೆಗಳಲ್ಲಿ ತೊಡಗಿದ್ದಾರೆ. ಸಾಮಾನ್ಯ



ಜನರ ಸಮಸ್ಯೆಗಳ ಕಡೆ ಯಾರೂ ಗಮನ ಹರಿಸುತ್ತಿಲ್ಲ" ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ನಡುವೆ, ಕಾಂಗ್ರೆಸ್ ಪಕ್ಷದ ಮುಖ್ಯ ಕಚೇರಿಯಿಂದ ವಾರ್ಡ್ ನಂ. 33ರ ಅಲ್ಲಿಪುರ ಹಾಗೂ ವಿನಾಯಕನಗರ ಭಾಗದ ಬೂತ್ ಮಟ್ಟದ ಏಜೆಂಟ್ಸ್ ರನ್ನು ಆಯ್ಕೆ ಕುರಿತ ಪತ್ರಗಳು ಸಭೆ ಮಾಡುವುದಕ್ಕೆ ಕಳುಹಿಸಲಾಗಿತ್ತು.

ಆದರೆ ಸ್ಥಳೀಯರು "ನಮ್ಮ ಪ್ರದೇಶದಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳು ನಡೆದಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಬೂತ್ ಮಟ್ಟದ ಏಜೆಂಟ್ಸ್ ಆಯ್ಕೆ ನಮಗೆ ಬೇಡ" ಎಂದು ಹೇಳಿ ಆ ಪತ್ರಗಳನ್ನು ಹರಿದು ಹಾಕಿದ ಘಟನೆ ನಡೆದಿದೆ.

ಈ ಘಟನೆ ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದ್ದು, ಸ್ಥಳೀಯ ಆಡಳಿತ ಹಾಗೂ ಜನಪ್ರತಿನಿಧಿಗಳ ವಿರುದ್ಧ ಜನರ ಅಸಮಾಧಾನ ಮತ್ತೊಮ್ಮೆ ಹೊರಹೊಮ್ಮಿದಂತಾಗಿದೆ. ಸಾರ್ವಜನಿಕರು ತಕ್ಷಣ ಅಭಿವೃದ್ಧಿ ಕಾಮಗಾರಿಗಳನ್ನು ಆರಂಭಿಸಬೇಕು ಹಾಗೂ ಸ್ಥಳೀಯ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಒತ್ತಾಯಿಸಿದ್ದಾರೆ.

## ಕಮಲನಗರ ಸಾಮಾಜಿಕ ಪರಿಶೋಧನಾ ನಿರ್ದೇಶಕ ಸಿ.ಕೆ. ಮಲ್ಲಪ್ಪ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಸರ್ಕಾರದ ಪ್ರತಿಯೊಂದು ಯೋಜನೆಗಳ ಸೌಲಭ್ಯಗಳನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು. ಅರ್ಹ ಫಲಾನುಭವಿಗಳು ಇದರ ಸದ್ಬಳಕೆ ಮಾಡಿಕೊಂಡು ಆರ್ಥಿಕವಾಗಿ ಸಬಲರಾಗಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಾಮಾಜಿಕ ಪರಿಶೋಧನಾ ನಿರ್ದೇಶಕ ಸಿ.ಕೆ. ಮಲ್ಲಪ್ಪ ತಿಳಿಸಿದರು.

ತಾಲೂಕಿನ ಹೊಳಸಮುದ್ರ ಗ್ರಾಮ ಪಂಚಾಯತಿಗೆ ಇತ್ತೀಚೆಗೆ ಭೇಟಿ ನೀಡಿದ್ದ ಅವರು, ವಿವಿಧ ಯೋಜನೆಗಳಿಗೆ ಸಂಬಂಧಿಸಿದ ಕಡತಗಳು ಹಾಗೂ ದಾಖಲೆಗಳ ಸಮಗ್ರ ಪರಿಶೀಲನೆ ನಡೆಸಿ ಮಾತನಾಡಿದರು.ವಿವಿಧ ಯೋಜನೆಗಳ ಅನುಷ್ಠಾನ, ಅನುದಾನ ಬಳಕೆ, ಕಾಮಗಾರಿಗಳ ಪ್ರಗತಿ, ದಾಖಲಾತಿಗಳ ನಿರ್ವಹಣೆ ಮತ್ತು ಸಾಮಾಜಿಕ ಪರಿಶೋಧನಾ ವರದಿಗಳ ಕುರಿತು ಅವರು ಮಾಹಿತಿ ಪಡೆದುಕೊಂಡರು.

ಗ್ರಾಮಸಭೆಗೆ ಡಂಗುರ ಸಾರಿ: ಜನರಲ್ಲಿ ಜಾಗೃತಿ ಮೂಡಿಸಲು ಕರೆ



"ಸಾಮಾಜಿಕ ಪರಿಶೋಧನೆ ಮೂಲಕ ಸರ್ಕಾರದ ಯೋಜನೆಗಳ ಕುರಿತು ಗ್ರಾಮದ ಜನರಿಗೆ ವ್ಯಾಪಕ ಅರಿವು ಮೂಡಿಸಬೇಕು. ಗ್ರಾಮಸಭೆಯನ್ನು ಹಮ್ಮಿಕೊಂಡಾಗ ಗ್ರಾಮದಲ್ಲಿ ಡಂಗುರ ಸಾರುವುದರ ಮೂಲಕ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ನೋಡಿಕೊಳ್ಳಬೇಕು. ಇದರಿಂದ ಜನರಿಗೂ ಕೂಡ ಯೋಜನೆಗಳ ಬಗ್ಗೆ ನೇರ ಮಾಹಿತಿ ದೊ-ರೆಯುತ್ತದೆ," ಎಂದು ಸಿ.ಕೆ. ಮಲ್ಲಪ್ಪ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ವಿವಿಧ ಯೋಜನೆಗಳ ಕಡತಗಳ ಪರಿಶೀಲನೆ

ತಮ್ಮ ಭೇಟಿಯ ಅವಧಿಯಲ್ಲಿ ನಿರ್ದೇಶಕರು ಈ ಕೆಳಗಿನ ಪ್ರಮುಖ ಯೋಜನೆಗಳ ಲೆಕ್ಕಪತ್ರ ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದರು:ನರೇಗಾ (MGNREGA) ಯೋಜನೆ15 ನೇ ಹಣಕಾಸು ಆಯೋಗ ಹಾಗೂ ರಾಜ್ಯ ಹಣಕಾಸು ಆಯೋಗದ ಅನುದಾನಗಳು

ಸಮಗ್ರ ಶಿಕ್ಷಣ ಅಭಿಯಾನಮಧ್ಯಾಹ್ನ ಬಿಸಿಯೂಟ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಅನುದಾನ ವಹಿಗಳು ಮತ್ತು ಸಾಮಾಜಿಕ ಪರಿಶೋಧನೆಗೆ ಸಂಬಂಧಿಸಿದ ದಾಖಲೆಗಳು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ್ ಕೌಟಗೆ, ರಾಜ್ಯ ಸಂಪನ್ಮೂಲ ವ್ಯಕ್ತಿ ನರಸಾರೆಡ್ಡಿ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ದೇವಿದಾಸ, ತಾಲ್ಲೂಕು ಕಾರ್ಯಕ್ರಮ ವ್ಯವಸ್ಥಾಪಕ ಆನಂದ, ತಾಂತ್ರಿಕ ಸಂಯೋಜಕ ಅಮರ ಬಿರಾದಾರ, ತಾಂತ್ರಿಕ ಸಹಾಯಕರಾದ ಅರ್ಜುನ, ವಿನೋದ, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮಹದೇವ್ ರಂಗರಾವ್, ಗ್ರಾಮ ಪಂಚಾಯತಿ ಸದಸ್ಯರು, ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಸಮಾಜದ ಅಭಿವೃದ್ಧಿಗೆ ಶಿಕ್ಷಣವೇ ಮೂಲ ಆಧಾರ : ಗುಳುಗಣ್ಣನವರ್

• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ತಾಲೂಕಿನ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಸೋಂಪುರ ಗ್ರಾಮದ ಶರಣಬಸವೇಶ್ವರ ಪ್ರೌಢ ಶಾಲೆಯಲ್ಲಿ ಇಂದು ಆಯೋಜಿಸಲಾದ ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷರಾದ ನವೀನಕುಮಾರ ಗುಳಗಣ್ಣವರ ಅವರು ಎಂಟನೇ ತರಗತಿಯ ವಿದ್ಯಾರ್ಥಿನಿಯರಿಗೆ ಸೈಕಲ್‌ಗಳನ್ನು ವಿತರಿಸುವ ಮೂಲಕ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಿದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಸಮವಸ್ತ್ರಗಳು ಹಾಗೂ ನೋಟ್‌ಬುಕ್‌ಗಳನ್ನು ನೀಡಿ ಅವರ ಶೈಕ್ಷಣಿಕ ಪ್ರಗತಿಗೆ ಶುಭ ಹಾರೈಸಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಶಿಕ್ಷಣವು ವ್ಯಕ್ತಿಯ ಬದುಕನ್ನು ರೂಪಿಸುವ ಅತ್ಯಂತ ಶಕ್ತಿಯುತ ಸಾಧನವಾಗಿದ್ದು, ಸಮಾಜದ ಅಭಿವೃದ್ಧಿಗೆ ಶಿಕ್ಷಣವೇ ಮೂಲ ಆಧಾರ ಎಂದು ಹೇಳಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಸಹ ಉತ್ತಮ ಶಿಕ್ಷಣ ಪಡೆಯುವ ಮೂಲಕ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು. ಸರ್ಕಾರ ಹಾಗೂ ಸಮಾಜದಿಂದ ದೊರೆಯುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಪ್ರತಿಯೊಬ್ಬ ವಿದ್ಯಾರ್ಥಿಯೂ ಶಿಸ್ತು,



ಪರಿಶ್ರಮ ಮತ್ತು ಆತ್ಮವಿಶ್ವಾಸದಿಂದ ಶಿಕ್ಷಣದಲ್ಲಿ ಸಾಧನೆ ಮಾಡಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿನಿಯರಿಗೆ ಸೈಕಲ್ ವಿತರಿಸುವುದರಿಂದ ಅವರ ಶಾಲಾ ಹಾಜರಾತಿ ಹೆಚ್ಚಾಗುವುದಲ್ಲದೆ, ಶಿಕ್ಷಣದ ಮೇಲಿನ ಆಸಕ್ತಿ ಮತ್ತಷ್ಟು ವೃದ್ಧಿಯಾಗುತ್ತದೆ. ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕಿದ್ದು, ಶಾಲೆಗಳು ಜ್ಞಾನ ದೇಗುಲಗಳಾಗಿವೆ ಎಂದು ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾಗಿ ಸುಮಾರು 37 ವರ್ಷಗಳ ಕಾಲ ನಿಷ್ಠೆಯಿಂದ ಸೇವೆ ಸಲ್ಲಿಸಿ ನಿವೃತ್ತರಾದ ತಬರುದ್ದೀನ್ ನೂರಬಾಷ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಶಿಕ್ಷಣ ಕ್ಷೇತ್ರಕ್ಕೆ ಅವರು ನೀಡಿರುವ ಅಮೂಲ್ಯ ಕೊಡುಗೆಯನ್ನು ಸ್ಮರಿಸಿದ ನವೀನಕುಮಾರ ಈ ಗುಳಗಣ್ಣವರ ಅವರು, ಶಿಕ್ಷಕರ ಸೇವೆ ಸಮಾಜ ನಿರ್ಮಾಣದಲ್ಲಿ ಅತ್ಯಂತ ಮಹತ್ವದ್ದಾಗಿದ್ದು, ಅವರ ತ್ಯಾಗ ಮತ್ತು ಶ್ರಮ ಸದಾ ಸ್ಮರಣೀಯ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಮುತ್ತಯ್ಯ ಕಳ್ಳಿಮಠ, ಪ್ರಮುಖರಾದ ಸೋಮಶೇಖರಗೌಡ ಸೋಂಪುರ, ಕೆ.ಬಿ. ನಾಯ್ಕರ, ಶರಣಪ್ಪ ಕೋಳೂರ, ಶರಣಪ್ಪ ಅರಕೇರಿ, ನಿಜಾಮುದ್ದೀನ್ ನದಾಫ್, ಚನ್ನಪ್ಪ ಹಣವಾಳ, ಸಿದ್ದಪ್ಪ ಮಾಸ್ಟರ್ ಸಜ್ಜನ, ಮುಖ್ಯೋಪಾಧ್ಯಾಯರಾದ ಆರ್.ಬಿ. ಅಬ್ಬಿಗೇರಿ, ಯರೇಹಂಚಿನಾಳ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರಾದ ಟಿ. ಅಂಜನಪ್ಪ, ಕರಿಯಪ್ಪ ಹಳ್ಳಿಕೇರಿ, ವಿರೂಪಾಕ್ಷಪ್ಪ ಅಬ್ಬಿಗೇರಿ, ನಾಗರಾಜ ಉಮಚಿಗಿ, ಶರಣಪ್ಪಗೌಡ ಪಾಟೀಲ್ ಸೇರಿದಂತೆ ಶಾಲೆಯ ಶಿಕ್ಷಕರು, ಸಿಬ್ಬಂದಿ ವರ್ಗ, ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಶೀಘ್ರ ವಸತಿ ಕಾಮಗಾರಿ ಪೂರ್ಣಗೊಳಿಸಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ಗುಣಮಟ್ಟದಲ್ಲಿ ಶೀಘ್ರವೇ ವಸತಿ ಕಾಮಗಾರಿಗಳನ್ನ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಮಾಜಿ ಸಚಿವ ಕೆ ವೆಂಕಟೇಶ್ ಆದೇಶ ನೀಡಿದರು. ಪಟ್ಟಣದ ಪ್ರವಾಸ ಮಂದಿರದಲ್ಲಿ ಗುರುವಾರ ಕಳೆದ ಮೇ 30ರ ವಾರ್ತಾಭಾರತಿಯಲ್ಲಿ ಆದಿವಾಸಿಗಳ ವಸತಿ ಕಾಮಗಾರಿ ಪೂರ್ಣಗೊಳಿಸುವಂತೆ ಆಗ್ರಹ ಎಂಬ ಶಿರಸಿಕೆ ಅಡಿಯಲ್ಲಿ ವರದಿಯನ್ನು ಆಧರಿಸಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ತಾಲೂಕಿನ ಆದಿವಾಸಿಗಳ ಹಾಡಿಯಲ್ಲಿನ ಒಟ್ಟು 20 ಫಲಾನುಭವಿಗಳಿಗೆ ಕಳೆದ 4 ವರ್ಷಗಳಿಂದ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮತಿ ಗುತ್ತಿಗೆ ಪಡೆದು ಕಾಮಗಾರಿ ಪೂರ್ಣ ಮಾಡದೆ ವಿಳಂಬ ಮಾಡುತ್ತಿರುವುದರಿಂದ ಆದಿವಾಸಿಗಳ ಮುಖಂಡ ಜೆಡಿ ಜಯಪ್ಪ ಮತ್ತು ಮುತ್ತು ಸೇರಿದಂತೆ ಹಲವರರು ವೆಂಕಟೇಶ್



ರವರಿಗೆ ಇರುವ ಸಮಸ್ಯೆಯನ್ನು ವಿವರಿಸಿದ್ದರು.

ಸ್ಥಳದಲ್ಲಿದ್ದ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತಯ ಸಹಾಯಕ ಇಂಜಿನಿಯರ್ ಸುಗಂಧರಾಜ್ ಈಗಾಗಲೇ ಸ್ಥಳಗಳಲ್ಲಿ ಹೆಂಚುಗಳನ್ನು ಇಳಿಸಲಾಗಿದ್ದು ಈ ತಿಂಗಳ ಅಂತ್ಯದಲ್ಲಿ ಎಲ್ಲಾ ಮನೆಗಳ ಕಾಮಗಾರಿಗಳನ್ನು ಪೂರ್ಣಗೊಳಿಸಿ ಅವರಿಗೆ ಅಷ್ಟೊಂತರ ಮಾಡಲಾಗುವುದು ಎಂದು ಒಪ್ಪಿಕೊಂಡರು. ಈ ತಿಂಗಳ ಅಂತ್ಯದೊಳಗೆ ಮನೆಗಳ ಕಾಮಗಾರಿಗಳನ್ನು ಪೂರ್ಣಗೊಳಿಸಿದಿದ್ದರೆ ಹುಣಸೂರು ಕಚೇರಿಯ ಎದುರು ಹೋರಾಟ ನಡೆಸಬೇಕಾಗುತ್ತದೆ ಎಂದು ಸುಗಂಧರಾಜ್ ಗೆ ಎಚ್ಚರಿಕೆ ನೀಡಿದರು. ಎಲ್ಲಾ ಕಾಮಗಾರಿಯನ್ನು ಆರಂಭಿಸುವ ಮೊದಲು ಆಯಾಯ ಮತ್ತು ಫಲಾನುಭವಿಗಳು ಕಾಮಗಾರಿಯನ್ನು ಮಾಡಿಕೊಳ್ಳುವುದಾಗಿ ಒಪ್ಪಿಕೊಂಡರೆ ಅವರವರುಗಳೇ ಪೂರ್ಣಗೊಳಿಸಿಕೊಳ್ಳಲು ನನ್ನದೇ ಯಾವುದೇ ಅಭ್ಯಂತರವಿಲ್ಲ ಗುಣಮಟ್ಟದಲ್ಲಿ ಎಲ್ಲ ಕಾಮಗಾರಿಗಳನ್ನು ಮಾಡಿಕೊಳ್ಳುವುದಾದರೆ ಬೇರೆಯವರಿಗೆ ನೀಡುವುದಿಲ್ಲ ಎಂದು ಮಾಜಿ ಸಚಿವ ವೆಂಕಟೇಶ್ ಸ್ಪಷ್ಟಪಡಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಎನ್ ಬಿ ಚಂದ್ರಶೇಖರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಮುಖಂಡರುಗಳು ಹಾಜರಿದ್ದರು.

## ಬಸಾಪುರ ಕೆರೆ ಖಾಸಗಿಯವರ ಸ್ವತ್ತಲ್ಲ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ನಗರ ಪಕ್ಕದ ಬಸಾಪುರ ಕೆರೆ ಭೇಟಿಗೆ ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳೊಂದಿಗೆ ನಾನು ಹೋದಾಗ ಬಲ್ಡೋಟ ಸೆಕ್ಯೂರಿಟಿ ಸಿಬ್ಬಂದಿ ಅಡ್ಡಗಟ್ಟಿದ್ದಾರೆ. ಅಲ್ಲದೆ 112 ನಂಬರಿಗೆ ಕರೆ ಮಾಡಿ ಪೊಲೀಸರನ್ನು ಕರೆಸಿ ಕೆರೆಯಿಂದ ಹೊರ ಹಾಕಿ ಅವಮಾನಿಸಲು ಪ್ರಯತ್ನ ಮಾಡಿದ್ದು ಖಂಡನೀಯ ಎಂದು ರಾಜ್ಯ ಸಮಿತಿ ಗೌರವಾಧ್ಯಕ್ಷ ಚಾಮರಸ ಮಾಲಿ ಪಾಟೀಲ ಅವರು ಅಸಮಾಧಾನ ಹೊರಹಾಕಿದರು. ಇಲ್ಲಿನ ಜಿಲ್ಲಾಡಳಿತ ಕಾನೂನು, ಕೋರ್ಟ್ ಆದೇಶ ಉಲ್ಲಂಘಿಸಿರುವ ಕಂಪನಿ ಪರವಾಗಿ ನಿಲ್ಲಬಾರದು. ಕಾರ್ಖಾನೆಯ ವಶಕ್ಕೆ ಕೆರೆ ಒಪ್ಪಿಸಿದ ಕ್ರಮವು ಬಹಿರಂಗ ಕಾನೂನು ಮತ್ತು ಹೈಕೋರ್ಟ್ ಆದೇಶದ ಉಲ್ಲಂಘನೆಯಾಗಿದೆ. ಇದೊಂದು ಎಗ್ಗಿಲ್ಲದ ಅಧಿಕಾರ ದುರುಪಯೋಗದ ಪರಮಾವಧಿಯಾಗಿದೆ ಎಂದು ಧರಣಿಯಲ್ಲಿ ಮಾತನಾಡಿ ಆಕ್ರೋಶ ಹೊರಹಾಕಿದರು. ನೂತನ ಮುಖ್ಯಮಂತ್ರಿ ಗದ್ದುಗೆ ಏರಿದ ಡಿ.ಕೆ. ಶಿವಕುಮಾರ ಅವರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಬಲ್ಡೋಟ ಅತಿಕ್ರಮಣದಿಂದ ಬಸಾಪುರ ಕೆರೆಯನ್ನು ರೈತರ ಜಾನುವಾರು ನೀರು ಕುಡಿಯಲು ಶೀಘ್ರವಾಗಿ ಮುಕ್ತಗೊಳಿಸಬೇಕು ಎಂದು ಆಗ್ರಹಿಸಿದರು. 217ನೇ ದಿನದ ಬಲ್ಡೋಟ ತೊಲಗಿಸಿ ಕೊಪ್ಪಳ ಉಳಿಸಿ



ಹೋರಾಟದ ಧರಣಿಯಲ್ಲಿ ಪ್ರಧಾನ ಸಂಚಾಲಕರಾದ ಅಲ್ಲಮಪ್ರಭು ಬೆಟ್ಟದೂರು, ಜೆ. ಮಲ್ಲಿಕಾರ್ಜುನ ಸಿರಿಗೇರಿ, ಪ್ರಕಾಶಕ ಡಿ.ಎಂ.ಬಡಿಗೇರ, ಸಂಚಾಲಕ ಮಲ್ಲಿಕಾರ್ಜುನ ಬಿ. ಗೋನಾಳ, ರವಿ ಕಾಂತನವರ, ಶಿವಾನಂದಯ್ಯ ಬೀಳಗಿಮಠ, ರಾಜಶೇಖರ ಏಳುಬಾವಿ, ಇಂಜಿನಿಯರ್ ವಿನಯ ಸಜ್ಜನ, ಉಮೇಶ ಗಣಪಾ ಕುಣಿಕೇರಿ, ಬಸವರಾಜ ಪೂಜಾರ ಕಾಸನಕಂಡಿ, ಮಖಬುಲ್ ರಾಯಚೂರು, ಮಹಾದೇವಪ್ಪ ಮಾವಿನಮಡು, ಹಳ್ಳೆರಾವ್ ಎಂ.ಜ್ಯೋಶಿ, ಶರಣು ಶೆಟ್ಟರ್, ವಿನೋದ ಕಿನ್ನಾಳ, ಕನಕರಾಯ ಕೆ.ಬಿ, ಹನುಮಂತರಾವ್, ರುದ್ರಪ್ಪ ಭಂಡಾರಿ, ಶಿವಪ್ಪ ಜಲ್ಲಿ, ವಿಜಯ ಮಹಾಂತೇಶ ಹಟ್ಟಿ, ಅಭಿಜಿತ್ ಅಂಡಗಿ, ಲಕ್ಷ್ಮವ್ವ ಆಡಿನ, ಸುಮಾ ಕಮ್ಮಾರ, ಶಶಿಕಲಾ ಹೊಸಮನಿ, ಕನಕಮ್ಮ ಹೊಸಮನಿ, ಗಂಗಮ್ಮ ಕುರುಗೋಡು, ರತ್ನಮ್ಮ ದೊಡ್ಡಮನಿ ಪಾಲ್ಗೊಂಡರು.

## ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.04-ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯದಿಂದ 2026-27ನೇ ಸಾಲಿಗೆ ರಾಷ್ಟ್ರಾದ್ಯಂತ "ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ"ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ತಿಳಿಸಿದ್ದಾರೆ. ಕಲಬುರಗಿ ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ ಪರಿಸರ ಸಂರಕ್ಷಣೆ, ಕಲೆ ಮತ್ತು ಸಂಸ್ಕೃತಿ ಮತ್ತು ನೂತನ ಆವಿಷ್ಕಾರಗಳನ್ನು ಮಾಡಿ ಉತ್ತಮ ಸಾಧನೆ ಮಾಡಿದ 5 ವರ್ಷ ಮೇಲ್ಪಟ್ಟ ಹಾಗೂ 18 ವರ್ಷದೊಳಗಿನ ಆಸಕ್ತ ಮಕ್ಕಳು <https://awards.gov.in> ವೆಬ್‌ಸೈಟ್‌ಗೆ ಸಂಪರ್ಕಿಸಿ ಆನ್‌ಲೈನ್ ಮೂಲಕ 2026ರ ಜೂನ್ 30 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸದರಿ ವೆಬ್‌ಸೈಟ್‌ನ್ನು, ಕಲಬುರಗಿ ಜಿಲ್ಲಾ ಮಕ್ಕಳ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472-243219 ಗೆ ಸಂಪರ್ಕಿಸಲು ಕೋರಲಾಗಿದೆ.

## ಖಂಡ್ರೆಗೆ ಸಚಿವ ಸ್ಥಾನ: ಪಟಾಕಿ ಸಿಡಿಸಿ ಸಂಭ್ರಮ



•ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ನೇತೃತ್ವ ನೂತನ ಕಾಂಗ್ರೆಸ್ ಸರ್ಕಾರದಲ್ಲಿ ಶಾಸಕ ಈಶ್ವರ ಖಂಡ್ರೆ

ಅವರಿಗೆ ಬುಧವಾರ ಮಧ್ಯಾಹ್ನದ ವೇಳೆಗೆ ಸಚಿವ ಸ್ಥಾನ ಖಚಿತ ಆಗುತ್ತಿದ್ದಂತೆ ಅವರ ಬೆಂಬಲಿಗರು ಗಾಂಧಿ ವೃತ್ತದಲ್ಲಿ ಸೇರಿ ಪಟಾಕಿ ಸಿಡಿಸಿ, ಜಯಘೋಷ ಕೂಗಿ ಸಂಭ್ರಮಿಸಿದರು.

## ನಾರದಗಡ್ಡೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಭೇಟಿ



• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 04: ರಾಯಚೂರು ಜಿಲ್ಲಾ ಕೇಂದ್ರದಿಂದ ಸುಮಾರು 35 ಕಿ.ಮೀ. ದೂರದಲ್ಲಿರುವ ಐತಿಹಾಸಿಕ, ಪೌರಾಣಿಕ ಮತ್ತು ಪ್ರಾಕೃತಿಕ ಮಹತ್ವಹೊಂದಿರುವ ನಾರದಗಡ್ಡೆಗೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಜೂನ್ 03ರ ಬುಧವಾರ ದಂದು ಭೇಟಿ ನೀಡಿದರು.ಈ ವೇಳೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮಾತನಾಡಿ, ನಾರದಗಡ್ಡೆಯು ಪ್ರಾಕೃತಿಕ ಮಹತ್ವಹೊಂದಿರುವ ವಿಶಿಷ್ಟತಾಣವಾಗಿದೆ. ಇಲ್ಲಿ ಇರುವ ಶ್ರೀ ಚನ್ನಬಸವೇಶ್ವರ ದೇವಸ್ಥಾನ, ನಾರದ ಮುನಿಗಳು ತಪಸ್ಸು ಮಾಡಿದ ನೆಲವೆಂಬ ನಂಬಿಕೆಗೆ ಸಾಕ್ಷಿಯಂತೆ ಉಳಿದಿದೆ. ಈ ಸ್ಥಳಕ್ಕೆ ಕರ್ನಾಟಕ, ಮಹಾರಾಷ್ಟ್ರ, ಆಂಧ್ರಪ್ರದೇಶ, ತೆಲಂಗಾಣ ಮತ್ತು ಗೋವಾದ ಪ್ರವಾಸಿಗರು ನಾರದಗಡ್ಡೆಗೆ ಭೇಟಿ ನೀಡುತ್ತಾರೆ. ನಾರದಗಡ್ಡೆಯಲ್ಲಿ ಅಗತ್ಯ ಮೂಲಭೂತು ಸೌಕರ್ಯಗಳನ್ನು ಒದಗಿಸಲು ಅಗತ್ಯ ಕ್ರಮವಹಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸ್ಥಳದಲ್ಲೇ ಸೂಚಿಸಿದರು.

ನಾರದಗಡ್ಡೆಯ ಬ್ರೀಜ್ ನಿಂದ ಕುರುವಕೂಲ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಕೂಡಲೇ ಸುಧಾರಿಸಬೇಕು. ಅಲ್ಲದೆ ನಾರದಗಡ್ಡೆಯಲ್ಲಿ ಇರುವ ಹಳೆ ಬಿಲ್ಡಿಂಗ್ ತೆರವುಗೊಳಿಸಿ, ಹೊಸ ಬಿಲ್ಡಿಂಗ್ ನಿರ್ಮಾಣ ಮಾಡಲು ಅಗತ್ಯ ಕ್ರಮವಹಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ರಾಯಚೂರು ಸಿಪಿಐ ನಿಂಗಪ್ಪ, ಲೋಕೋಪಯೋಗಿ ಇಲಾಖೆಯ ಇಇ ವೆಂಕಟೇಶ ಗಲಗ ಸೇರಿದಂತೆ ವಿವಿಧ ಅಧಿಕಾರಿಗಳು, ಸಿಬ್ಬಂದಿಗಳು, ಸಾರ್ವಜನಿಕರು ಇದ್ದರು.

## ರಾಯಚೂರು ಭಾರತ ವನ ಯೋಜನೆಗೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜೂ 04 : ಭಾರತ ಸರ್ಕಾರದ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಜೂನ್ 04ರ ಗುರುವಾರ ದಂದು ರಾಯಚೂರು ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಡಳಿತ, ಎಸ್‌ಪಿಎಮ್‌ಸಿಐಎಲ್ ಸಂಸ್ಥೆಯ ಸಾಮಾಜಿಕ ಕಳಕಳಿಯ (ಸಿಎಸ್‌ಆರ್) ಸಹಯೋಗದೊಂದಿಗೆ ಜೂನ್ 05ರ ವಿಶ್ವ ಪರಿಸರ ದಿನಾಚರಣೆ–2026ರ ಅಂಗವಾಗಿ (ವಿಶೇಷ ಹಸಿರು ಅಭಿಯಾನ ಅಂಗವಾಗಿ) ತಾಯಿಯ ಹೆಸರಿನಲ್ಲಿ ಒಂದು ಮರ ಕಾರ್ಯಕ್ರಮದಡಿ ರಾಯಚೂರು ಭಾರತ ವನ ಯೋಜನೆಗೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಸಸಿಗಳನ್ನು ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ವಿದ್ಯಾರ್ಥಿಗಳೊಂದಿಗೆ ಗಿಡಮರಗಳ ನೆಡುವುದರ ಮಹತ್ವ ಕುರಿತು ಸಂವಾದ ನಡೆಸಿದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮಾತನಾಡಿ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯ ಮಹತ್ವಾಕಾಂಕ್ಷೆ ಜಿಲ್ಲೆಯ ಪ್ರಗತಿ ಪರಿಶೀಲನೆ ಸಭೆಯನ್ನು ಹಣಕಾಸು ಸಚಿವರು ನಡೆಸಿದ್ದಾರೆ. ಮುಂದಿನ ದಿನಗಳಲ್ಲಿ ರಾಯಚೂರು ಜಿಲ್ಲೆಯು ಮಹತ್ವಾಕಾಂಕ್ಷೆ ಜಿಲ್ಲೆಯ ಪಟ್ಟಿಯಿಂದ ಆದಷ್ಟು ಬೇಗನೆ ಹೊರ ಬರಲಿದೆ ಎಂದರು. ಭಾರತ ವನ ಯೋಜನೆಯಡಿ ಒಟ್ಟು 60,000 ಸ್ಥಳೀಯ ಜಾತಿಯ ಸಸಿಗಳನ್ನು ನೆಡಲಾಗುತ್ತಿದೆ. ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ 10,000 ಸಸಿಗಳು ಹಾಗೂ ರಾಯಚೂರು ಮಹಾನಗರ ಪಾಲಿಕೆಯ ಘನ ತ್ಯಾಜ್ಯ ನಿರ್ವಹಣಾ ಘಟಕ ಪ್ರದೇಶದಲ್ಲಿ 50,000 ಸಸಿಗಳನ್ನು ನೆಡಲಾಗುತ್ತದೆ ಎಂದರು.

ಪರಿಸರ ಸಮತೋಲನವನ್ನು ಕಾಪಾಡಲು ಒಟ್ಟು ಭೌಗೋಳಿಕ ವಿಸ್ತೀರ್ಣದ ಕನಿಷ್ಠ 30 ಶೇಕಡಾ ಭಾಗ ಅರಣ್ಯಾವರಣ ಹೊಂದಿರಬೇಕೆಂಬ ರಾಷ್ಟ್ರೀಯ ಗುರಿ ಇದ್ದರೂ, ರಾಯಚೂರು ಜಿಲ್ಲೆಯ ಅರಣ್ಯಾವರಣವು 2 ಶೇಕಡಾಕ್ಕಿಂತಲೂ ಕಡಿಮೆ ಇದೆ. ಇದರ ಪರಿಣಾಮವಾಗಿ ಭೂಮಿಯ ಉಷ್ಣತೆ ಹೆಚ್ಚಳ, ಮಣ್ಣಿನ ಫಲವತ್ತತೆ ಕುಸಿತ, ಭೂಗರ್ಭ ಜಲಮಟ್ಟ ಇಳಿಕೆ, ಜೀವ ವೈವಿಧ್ಯತೆಯ ನಷ್ಟ ಹಾಗೂ ಹವಾಮಾನ ವೈಪರೀತ್ಯಗಳಂತಹ ಸಮಸ್ಯೆಗಳು ಹೆಚ್ಚಾಗುತ್ತಿವೆ. ಈ ಹಿನ್ನೆಲೆಯಲ್ಲಿ ಭಾರತ ವನ ಯೋಜನೆ ರಾಯಚೂರು ಜಿಲ್ಲೆಯ ಪರಿಸರ ಭವಿಷ್ಯಕ್ಕೆ ಹೊಸ ಆಶಾಕಿರಣವಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಗ್ರೀನ್ ಹೀರೋ ಆಫ್ ಇಂಡಿಯಾದ ಡಾ.ರಾಧಕೃಷ್ಣ ನಾಯರ್, ಹಣಕಾಸು ಸಚಿವಾಲಯದ ಕಾರ್ಯದರ್ಶಿ ಸಂಜಯ್ ಲೋಹಿಯಾ, ಆಪ್ತ ಕಾರ್ಯದರ್ಶಿ ಅನಿರುದ್ಧ ಶ್ರವಣ್, ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಅಧ್ಯಕ್ಷ ಶಾಜಿ ಕೃಷ್ಣನ್, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಲಿನ್ ಅತುಲ್. ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹೊಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ. ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮಾ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಸಿಂಧನೂರು ವಿಶೇಷ ಭೂ ಸ್ವಾಧೀನ ಅಧಿಕಾರಿ ಶೃತಿ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು.

## ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಜೂ 05ರಂದು ವಿಶ್ವ ಪರಿಸರ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 04 : ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯಾಂಗ ಇಲಾಖೆ, ಜಿಲ್ಲಾಡಳಿತ, ಅರಣ್ಯ ಇಲಾಖೆ ಹಾಗೂ ಜಿಲ್ಲಾ ವಕೀಲರ ಸಂಘ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಸಸಿಗಳನ್ನು ನೆಡುವ ಕಾರ್ಯಕ್ರಮವನ್ನು ನಗರದ ನೂತನ ನ್ಯಾಯಾಲಯಗಳ ಕಟ್ಟಡದ ಆವರಣದಲ್ಲಿ ಮೇ.05ರ ಬೆಳಿಗ್ಗೆ 9.30ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ರಾಯಚೂರಿನ 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಮತಿ ಮಾಲಾ ಎನ್.ಡಿ. ಅವರು ಉದ್ಘಾಟನೆ ನೆರವೇರಿಸುವರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ್ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ರಾಯಚೂರಿನ ಪ್ರಾದೇಶಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಸುರೇಶ ಬಾಬು, ಕುಟುಂಬ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಕಾಂತ್.ಎಸ್.ವಿ, ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್, ಸಿ.ಜೆ.ಎಂ. ನ್ಯಾಯಾಲಯದ ಪ್ರಧಾನ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಮತಿ ಬಿ.ಟಿ. ಅನ್ನಪೂರ್ಣೇಶ್ವರಿ, ಜೆ.ಎಂ.ಎಫ್.ಸಿ ನ್ಯಾಯಾಲಯದ 1ನೇ ಹೆಚ್ಚುವರಿ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ.ಶಂಕರಪ್ಪ ಮಾಲಶೆಟ್ಟಿ, ಜೆ.ಎಂ.ಎಫ್.ಸಿ ನ್ಯಾಯಾಲಯದ 2ನೇ ಹೆಚ್ಚುವರಿ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಸಾಗರ್ ಗುರುಗೌಡ ಪಾಟೀಲ್, ಜೆ.ಎಂ.ಎಫ್.ಸಿ. 3ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ.ಚನ್ನಬಸಪ್ಪ ಆರ್. ಕೂಡಿ, ವಲಯ ಅರಣ್ಯ ಅಧಿಕಾರಿ ರಾಜೇಶ ನಾಯಕ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯು ಪ್ರಕಟಣೆಯಲ್ಲಿ ತಿಳಿಸಿದೆ.

## ಸಿಎಂ ಆಗಿ ಡಿಕೆಶಿ,ಡಿಸಿಎಂ ಆಗಿ ಪರಂ ಪ್ರಮಾಣ ಸಿಹಿ ಹಂಚಿ ಸಂಭ್ರಮಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ಜೂ.04:ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಗಳಾಗಿ ಜಿ.ಪರಮೇಶ್ವರ್ ರವರ ಉಪ ಮುಖ್ಯಮಂತ್ರಿಗಳಾಗಿ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ನಗರದ ಬಸ್ ನಿಲ್ದಾಣದಲ್ಲಿ ಕಾಂಗ್ರೆಸ್ ಮುಖಂಡರು ಬಾದಮಿ ಹಾಲು ಹಾಗೂ ಲಾಡು ಹಂಚಿ ಸಂಭ್ರಮಾಚರಣೆ ಮಾಡಿದರು.ಹುಣಸೂರು ನಗರದ ಬಸ್ ನಿಲ್ದಾಣದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಸ್ನೇಹಜೀವಿ ಎಚ್ ಪಿ ಮಂಜುನಾಥ್ ಅಭಿಮಾನಿ ಬಳಗದವರು ಸಾರ್ವಜನಿಕರಿಗೆ ಬಾದಾಮಿ ಹಾಲು ಹಾಗೂ ಉದ್ಯಮಿ ನಾಡಪ್ಪನಹಳ್ಳಿ ರಾಜು ಶಿವರಾಜೇಗೌಡರು 20 ಸಾವಿರ ಲಾಡು ಹಂಚಿ ಪಟಾಕಿ ಸಿಡಿಸಿ ಜಯ ಘೋಷಣೆಗಳನ್ನು ಮೊಳಗಿಸಿ ಸಂಭ್ರಮಿಸಿದರು.

ಮಾಜಿ ಶಾಸಕ ಎಚ್ ಪಿ ಮಂಜುನಾಥ್ ಲಾಡು ವಿತರಿಸಿ ಮಾತನಾಡಿನೂತನ ಮುಖ್ಯಮಂತ್ರಿಗಳಾದ ಡಿ. ಕೆ.ಶಿವಕುಮಾರ್ ಅವರ ನೇತೃತ್ವದಲ್ಲಿ ರಾಜ್ಯದಲ್ಲಿ ಉತ್ತಮ ಕೆಲಸ ಕಾರ್ಯಗಳು ಆಗುವ ಮೂಲಕ ರಾಜ್ಯವು ಅಭಿವೃದ್ಧಿ ಪಥದತ್ತ ಸಾಗಲಿದೆ ಇದಲ್ಲದೆ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ಜಾರಿಗೊಳಿಸಿದ ಗ್ಯಾರಂಟಿ ಯೋಜನೆಗಳನ್ನು ಮತ್ತಷ್ಟು ಬಲಿಷ್ಠಗೊಳಿಸುವ ನಿಟ್ಟಿನೊಂದಿಗೆ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ಸಂಕಲ್ಪದೊಂದಿಗೆ ರಾಜ್ಯದಲ್ಲಿ ಭಾರತ್ ಜೋಡೊ 10 ಸಾವಿರ ಯುವ ಸಂಘಟನೆ ಸ್ಥಾಪನೆಗೆ ಒತ್ತು ನೀಡುವುದರೊಂದಿಗೆ ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಸಂಕಲ್ಪ ತೊಟ್ಟಿದ್ದಾರೆ ಎಂದು ತಿಳಿಸಿದರು. ಈ ವೇಳೆ ತಾ. ಕುರುಬ ಸಮಾಜದ ಅಧ್ಯಕ್ಷರಾದ ಡಿಕೆ ಕುನ್ನೇಗೌಡರು, ತಾಲೂಕು ಗ್ಯಾರಂಟಿ ಅನುಸ್ತಾನ ಸಮಿತಿ ಅಧ್ಯಕ್ಷ ಕಲ್ಕುಣಿಕೆ ರಾಘು, ಯುವಉದ್ಯಮಿಗಳಾದ ನಾಡಪ್ಪನಹಳ್ಳಿ ರಾಜ ಶಿವರಾಜ್ ಗೌಡ, ಕೋಡಿ ಟಿ ಕೃಷ್ಣ, ಕಾಂಕ್ರೇಟ್ ರಾಜು, ಅಕ್ರಮ ಸಕ್ರಮ ಸಮಿತಿ ಸದಸ್ಯ ಕುಮಾರ್, ನಗರ ಸಭೆ ಮಾಜಿ ಸದಸ್ಯ ಯೋಗೇಶ್,

ಮುಖಂಡರುಗಳಾದ ಪಟೇಲ್ ಮಹೇಶ್, ಮಂಜು, ಬಾಬಾಣ್ಣ, ಕ್ರೇಜಿ ಮಹೇಶ್, ಪುಟ್ಟರಾಜ್ , ರೇಣುಕಾ, ನೇತ್ರಾವತಿ, ಯುವ ಕಾಂಗ್ರೆಸ್ ಅಧ್ಯಕ್ಷರಾದ ಪೈಸಾಲ್, ದರ್ಶನ್, ಸೇರಿದಂತೆ ನೂರಾರು ಅಭಿಮಾನಿಗಳು ಹಾಜರಿದ್ದರು.

## ವಿದ್ಯಾರ್ಥಿ ಉಚಿತ/ರಿಯಾಯಿತಿ ಬಸ್‌ಪಾಸ್‌ಗಳ ವಿತರಣಾ ಕಾರ್ಯ ಪ್ರಾರಂಭ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ. 04:ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗ–2 ರಿಂದ 2026–27ನೇ ಸಾಲಿಗೆ ಈಗಾಗಲೇ ಮೇ 29 ರಿಂದ ವಿದ್ಯಾರ್ಥಿ ಉಚಿತ/ ರಿಯಾಯಿತಿ ಬಸ್‌ಪಾಸ್‌ಗಳ ವಿತರಣಾ ಕಾರ್ಯ ಪ್ರಾರಂಭವಾಗಿದ್ದು, ವಿದ್ಯಾರ್ಥಿಗಳು ಸೇವಾಸಿಂಧು URL-sevasindhu.karnataka.gov.in ಪೋರ್ಟಲ್‌ದಲ್ಲಿ ಮೂಲಕ ಆನ್‌ಲೈನ್‌ದಲ್ಲಿ ಅರ್ಜಿ ಸಲ್ಲಿಸಿ, ಅನುಮೋದನೆ ಎಸ್.ಎಮ್.ಎಸ್. ಬಂದ ನಂತರ ಕಲಬುರಗಿ ನಗರದ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ಘಟಕ ವ್ಯಾಪ್ತಿಯ ಕರ್ನಾಟಕ–1/ ಗ್ರಾಮ–1 ಕೌಂಟರ್‌ಗಳಲ್ಲಿ ಬೆಳಿಗ್ಗೆ 8 ರಿಂದ ರಾತ್ರಿ 7 ಗಂಟೆಯವರೆಗೆ ವಿದ್ಯಾರ್ಥಿಗಳು ಬಸ್‌ಪಾಸ್‌ನ ಪ್ರಿಂಟ್‌ನ್ನು ಪಡೆದುಕೊಳ್ಳಬೇಕೆಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗ–02ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ. ಘಟಕದ ವ್ಯಾಪ್ತಿ, ಪಾಸ್ ವಿತರಣೆ ಮಾಡಲುಗುರುತಿಸಿದ ಅಧಿಕೃತ ಕೆ–1ಸೆಂಟರ್ ವಿಳಾಸ, ಸಂಪರ್ಕಿಸಬೇಕಾದವರ ಮೊಬೈಲ್ ಸಖ್ಯೆ ಹಾಗೂ ಘಟಕ ವ್ಯವಸ್ಥಾಪಕರ ಮೊಬೈಲ್ ಸಂಖ್ಯೆಯ ವಿವರ ಇಂತಿದೆ. ಕಲಬುರಗಿ ಘಟಕ–2: ಕೆ–1ಸೆಂಟರ್ ಎಮ್.ವ್ಹಿ.ಎನ್. ಸೆಂಟರ್ ವಿಧಾನಸೌಧ, ಕಲಬುರಗಿ–585102 ಹಾಗೂ ಮೊಬೈಲ್ ಸಂಖ್ಯೆ ಶ್ರೀಕಾಂತ–6361792160 ಹಾಗೂ ಕೆ–1 ಸೆಂಟರ್ ಮಹಾನಗರ ಪಾಲಿಕೆ ಹಿಂದುಗಡೆ, ಪಬ್ಲಿಕ್ ಗಾರ್ಡನ್ ಹತ್ತಿರ, ಕಲಬುರಗಿ–585102 ಮತ್ತು ಮೊಬೈಲ್ ಸಂಖ್ಯೆ ವಿಶಾಲ–9036421188 ಹಾಗೂ ಘಟಕ ವ್ಯವಸ್ಥಾಪಕರ ಮೊಬೈಲ್ ಸಂ–ಖ್ಯೆ–7760992114 ಇರುತ್ತದೆ.

## 8.50 ಕೋ॰ ಅಭಿವೃದ್ಧಿ ಕಾಮಗಾರಿಗೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ಸಿದ್ದರಾಮಯ್ಯ ಸರ್ಕಾರ ಗ್ಯಾರಂಟಿ ಯೋಜನೆಗಳ ಹೊಡೆತಕ್ಕೆ ಸಿಕ್ಕು ಅನುದಾನದ ಕೊರತೆ ಎದುರಿಸಿತ್ತು. ಈಗ ಡಿ. ಕೆ ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿದ್ದು, ಗ್ಯಾರಂಟಿಗಳೊಂದಿಗೆ ಅಭಿವೃದ್ಧಿಗೂ ಅನುದಾನ ನೀಡುವಂತಾಗಲಿ. ತಾಲೂಕಿನಲ್ಲಿ ಅಭಿವೃದ್ಧಿಗೂ ಸಹಕರಿಸುತ್ತಾರೆ ಎಂಬ ವಿಶ್ವಾಸವಿದೆ. ಎಂದು ಶಾಸಕಜಿ.ಡಿ.ಹರೀಶ್ ಗೌಡ, ತಿಳಿಸಿದ್ದಾರೆ

ಓನಗರ ವ್ಯಾಪ್ತಿಯ ಹಳೆಯ ಮೈಸೂರು–ಬಂಟ್ವಾಳ ರಾಜ್ಯ ಹೆದ್ದಾರಿ (88)ಯನ್ನು ಲೋಕೋಪಯೋಗಿ ಇಲಾಖೆ ವತಿಯಿಂದ 7 ಕೋಟಿ ರೂ.ಗಳ ವೆಚ್ಚದಡಿ ಅಭಿವೃದ್ಧಿ ಕಾಮಗಾರಿಗೆ ಸೇರಿದಂತೆ ಒಟ್ಟು 8.50 ಕೋಟಿ ರೂ.ಗಳ ಕಾಮಗಾರಿಗೆ ಶಾಸಕ ಜಿ.ಡಿ.ಹರೀಶ ಗೌಡ ಗುದ್ದಲಿ ಪೂಜೆ ನೆರವೇರಿಸಿದರು.

ನಗರದ ಹಳೆಯ ಬಸ್ ನಿಲ್ದಾಣದ ಬಳಿ ಕಾಮಗಾರಿಗೆ ಬುಧವಾರ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ನಗರದ ಅರಸು ಪುತ್ಥಳಿಯಿಂದ ಆರಂಭಗೊಂಡು ಹಳೆಯ ಸೇತುವೆವರೆಗೆ (ಆಯ್ದ ಭಾಗಗಳಲ್ಲಿ) 4.7 ಕಿ.ಮೀ. ಉದ್ದದ ರಸ್ತೆಯು ಚತುಷ್ಪಥ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸಿ ರಸ್ತೆಯ ಎರಡೂ ಕಡೆಗಳಲಿ ನೀರು ಸರಾಗವಾಗಿ ಹರಿಯುವಂತಾಗಲು ಸಿಸಿ ಚರಂಡಿ ನಿರ್ಮಿಸಲಾಗುವುದು ಎಂದರು.

ರಾಜ್ಯಕ್ಕೆನೂತನ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರು ಪದಗ್ರಹಣ ಮಾಡಿದ್ದು, ಮುಂದಿನ ದಿನಗಳಲಿ ಹುಣಸೂರಿನ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವರು ಎಂಬ ವಿಶ್ವಾಸವಿದೆ. ಈ ಹಿಂದಿನ ಸಿದ್ದರಾಮ್ಯಯ ಸರ್ಕಾರದಲ್ಲಿ ನೀರಾವರಿ ಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರು 110 ಕೋಟಿ ರೂ.ಗಳ ಅನುದಾನವನ್ನು ನೀರಾವರಿ ಯೋಜನಗಳಿಗಾಗಿ ನೀಡಿದ್ದರು. ಈ ಪೈಕಿ ಕಟ್ಟೆಮಳಲವಾಡಿ ನಾಲೆ ಅಭಿವೃದ್ಧಿಗೆ 38 ಕೋಟಿ ರೂ.ಗಳು ಮತ್ತು ಮರೂರು ಬ್ರಾಂಚ್ ಒಡಕಟ್ಟೆ ನಾಲೆ ಅಭಿವೃದ್ಧಿಗೆ 92 ಕೋಟಿ ರೂ. ಮೀಸಲಿದ್ದು, ಮುಂದಿನ ತಿಂಗಳಿನಲ್ಲಿ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದರು.

ಗೋಂಧಳಿ ಸಮುದಾಯ ಭವನ ನಿರ್ಮಾಣಕ್ಕೆ 20 ಲಕ್ಷ ರೂ.ಗಳು, ನಗರದ ಗಾಣಿಗ ಸಮಾಜದ ಸಮುದಾಯ ಭವನಕ್ಕೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಸಂಸದರ ನಿಧಿಯಿಂದ 20 ಲಕ್ಷ ರೂ.ಗಳು ಮಂಜೂರಾಗಿದ್ದು, ಕಾಮಗಾರಿ ಆರಂಭಿಸಲಾಗುವುದು. ಮುಂದಿನ ದಿನಗಳಲ್ಲಿ ತಾಲೂಕಿನಲಿ ಪ್ರತಿದಿನ ಹೊಸ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗುವುದು. ತಾಲೂಕಿನ ಜೀವನದಿ ಲಕ್ಷ್ಮಣತೀರ್ಥ ನದಿ ಶುದ್ಧೀಕರಣಕ್ಕೆ ಸರ್ಕಾರದ ಮುಂದೆ ಪ್ರಸ್ತಾವನೆ ಇದ್ದು, ಈ ಅವಧಿಯಲ್ಲೇ ಯೋಜನೆ ಪೂರ್ಣಗೊಳಿಸುವ ವಿಶ್ವಾಸ ಹೊಂದಿದ್ದೇನೆ ಎಂದರು.

ಹೂ ಮಾರಾಟಗಾರರಿಗೆ ಮಳಿಗೆ ನಿರ್ಮಾಣ: ನಗರದ ಹಳೆ ಬ ನಿಲ್ದಾಣದ ಮುಂಭಾಗದಲ್ಲಿ ವ್ಯಾಪಾರ ನಡಸುತ್ತಿರುವ ಹೂ ಮಾರಾಟಗಾರರಿಗೆ ಶಾಸಕರ ನಿಧಿಯಿಂದ 10 ಲಕ್ಷ ರೂ.ಗಳ ವೆಚ್ಛದಡಿ ಶಾಶ್ವತ ಮಳಿಗೆಗಳನ್ನು ನಿರ್ಮಾಣಕ್ಕೂ ಶಾಸಕ ಜಿ.ಡಿ.ಹರೀಗೌಡ ಗುದ್ದಲಿ ಪೂಜೆ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷ ಎಂ.ಬಿ.ಸುರೇಂದ್ರ, ಪ್ರಧಾನ ಕಾರ್ಯದರ್ಶಿ ಸತೀಕುಮಾರ್ , ನಗರಸಭೆ ಮಾಜಿ ಅಧ್ಯಕ್ಷ ಮಾಲಿಕ್ ಪಾಷ, ಗಣೇಶ್ ಕುಮಾರಸ್ವಾಮಿ ಸದಸ್ಯರಾದ ಕೃಷ್ಣರಾಜ ಗುಪ್ತ, ಹರೀಶ್, ಮಾಜಿ ಜಿಪಂ ಸದಸ್ಯರು, ಫಜಲುಲ್ಲಾ, ಗುರುಗಳಾದ ಇಷ್ಟಾಕ್ ಶಿರಾಜ್ ಪಾಷಾ , ಸಮೀವುಲ್ಲಾ ಅಸ್ವಾಳು ಕೆಂಪೇಗೌಡ, ಪೌರಾಯುಕ್ತೆ ಎಂ.ಮಾನಸ, ಎಇಇ ಯತೀಶ್ ಹಾಗೂ ಹೂವಿನ ವ್ಯಾಪಾರಸ್ಥರು ಮುಂತಾದವರು ಹಾಜರಿದ್ದರು.

## ಶಾಲಾ ಮಕ್ಕಳಿಗೆ ಪುಸ್ತಕ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ನಗರದ ಕನಕ ಭವನದಲ್ಲಿ ಕಾವೇರಿ ಮಲ್ಟಿ ಸ್ಪೆಷಲಿಸ್ಟ್ ಆಸ್ಪತ್ರೆ ಡಾ॥ ಲೋಹಿತ್ ಪಿ.ಎಸ್ ರವರ 43 ನೇ ಹುಟ್ಟು ಹಬ್ಬದ ಪ್ರಯುಕ್ತ ಹಮ್ಮಿಕೊಂಡಿರುವ ಕಾರ್ಯಕ್ರಮ ಮೋದೂರು ಗ್ರಾಮದ ಬಸವೇಶ್ವರ ದೇವಸ್ಥಾನಕ್ಕೆ ಭೇಟಿ ನಂತರ ಶಾಲೆ ಮಕ್ಕಳಿಗೆ ಪುಸ್ತಕ ವಿತರಣೆ ಕಾರ್ಯಕ್ರಮ ಹಾಗೂ ತರಿಕಲ್ ರಾಜುರವರು ದೇವರಾಜ್ ಅರಸು ಸಾರ್ವಜನಿಕ ಆಸ್ಪತ್ರೆಯ ಒಳರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಮತ್ತು ದೇವರಾಜ್ ಅರಸು ರವರ ಪುತ್ತಳಿಗೆ ಪುಷ್ಪ ನಮನವನ್ನು ಸಲ್ಲಿಸಿ ಕನಕ ಭವನದಲ್ಲಿ ಉತ್ತಮ ಅಂಕಗಳನ್ನು ಪಡೆದ, ಟಛಿ ಮತ್ತು ಔಣಛಿ 400 ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ಮತ್ತು ಗೌರವದನ ವಿತರಣೆ ಮತ್ತು 100 ಸಂಖ್ಯೆ ರಂಗ ಕಲಾವಿದರು ಅವರನ್ನು ಗೌರವಿಸಿ ಸನ್ಮಾನ ಕಾರ್ಯಕ್ರಮ ನೆರವೇರಿಸಲಾಯಿತು ಈ ಸಮಾರಂಭದ ಕಾರ್ಯಕ್ರಮಕ್ಕೆ ದಿವ್ಯ ಸನಿಧ್ಯ ವಹಿಸಿದ ಪರಮ ಪೂಜ್ಯ ಜಡಿ ಶಿವಾನಂದಪುರಿ ಮಹಾಸ್ವಾಮೀಜಿಗಳು, ಕಾಗಿನೆಲೆ ಮಹಾಸಂಸ್ಥಾನ ಕನಕ ಗುರು ಪೀಠ ಶಾಖಾಮಠ ಕೆ.ಆರ್. ನಗರ, ಗುರುಲಿಂಗ ಜಂಗಮದೇವರ ಮಠ ಗಾವಡಗೆರೆ ಪರಮಪೂಜ್ಯ ನಟರಾಜ ಸ್ವಾಮೀಜಿಗಳು; ಉಕ್ಕಿನ ಕಂತೆ ಮಾಧಹಳ್ಳಿ ಮಠದ ಪರಮ ಪೂಜ್ಯ ಸಾಂಬಸದಾಶಿವ ಸ್ವಾಮೀಜಿಗಳು.ಹಾಗೂ ಈ ಕಾರ್ಯಕ್ರಮದ ಉದ್ಘಾಟಕರಾದ ಹುಣಸೂರು ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಜಿ.ಡಿ. ಹರೀಶ್ ಗೌಡ್ರು, ಮಾಜಿ ನಗರ ನಗರಸಭೆ ಅಧ್ಯಕ್ಷರಾದ ಗಣೇಶ್ ಕುಮಾರಸ್ವಾಮಿ,ಕನ್ನಡ ಚಲನಚಿತ್ರ ಖ್ಯಾತ ನಟರಾದ ಶ್ರೀ ಅಭಿಜಿತ್ ಕುಮಾರ್ ಮಹಾದೇವಯ್ಯ ಕೆ ಗಣಪತಿ ತರಿಕಲ್ ರಾಜು ರಾಯನಹಳ್ಳಿ ಉದಯ್ ದೊಡ್ಡಣ್ಣ ಮೌರ್ಯ ಡಾ. ಲೋಹಿತ್ ಅಭಿಮಾನಿ ಬಳಗದ ಯುವಕರು ಯಜಮಾನರು ಗ್ರಾಮಸ್ಥರು ಎಲ್ಲಾ ಸ್ಥಳೀಯ ಸಂಸ್ಥೆಯ ಮುಖಂಡರು ಕಾರ್ಯಕ್ರಮದ ಕೇಂದ್ರ ಬಿಂದು, ಸಹಸ್ರಾರು ಸಂಖ್ಯೆಯಲ್ಲಿ ಡಾ. ಲೋಹಿತ್ ರವರ ಅಭಿಮಾನಿಗಳು ಹಾಜರಿದ್ದರು

## ಜೂ. 20 ರಿಂದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ: ಜಿಲ್ಲಾಧಿಕಾರಿ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ



ಜೂ.4: ಭಾರತ ಚುನಾವಣಾ ಆಯೋಗದ ಆದೇಶದಂತೆ ಜಿಲ್ಲೆಯಲ್ಲಿ ಜೂನ್ 20 ರಿಂದ ಅಕ್ಟೋಬರ್ 7 ರ ವರೆಗೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (SIR) ಪ್ರಕ್ರಿಯೆ ನಡೆಯಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಕೆ.ಲಕ್ಷಿ ್ಮಪ್ರಿಯಾ ತಿಳಿಸಿದ್ದಾರೆ.

ವಿಶೇಷ ಸಮಗ್ರ ಪರಿಷ್ಕರಣೆಗೆ ಅರ್ಹತಾ ದಿನಾಂಕ 01.10.2026 ಆಗಿದ್ದು, ಪೂರ್ವ ತಯಾರಿ, ತರಬೇತಿ ಮತ್ತು ಮುದ್ರಣವು ಜೂನ್ 20 ರಿಂದ 29 ರ ವರೆಗೆ, ಮತಗಟ್ಟೆ ಅಧಿಕಾರಿಯಿಂದ ಮನೆ – ಮನೆ ಭೇಟಿ ಕಾರ್ಯವು ಜೂನ್ 30 ರಿಂದ ಜುಲೈ 29 ರ ವರೆಗೆ, ಮತಗಟ್ಟೆಗಳ ಪುನರ್ ವಿಂಗಡಣೆ ಕಾರ್ಯ (Rationalization) ಜುಲೈ 29 ರಂದು ನಡೆಯಲಿದ್ದು, ಕರಡು ಮತದಾರರ ಪಟ್ಟಿಯನ್ನು ಆಗಸ್ಟ್ 5 ರಂದು ಪ್ರಕಟಿಸಲಾಗುವುದು. ಆಗಸ್ಟ್ 5 ರಿಂದ ಸೆಪ್ಟಂಬರ್ 4 ರ ವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದ್ದು, ಸೂಚನೆ ಹಂತ /ಹಕ್ಕು ಮತ್ತು ಆಕ್ಷೇಪಣೆಗಳ ವಿಲೇವಾರಿಗಳನ್ನು ಆಗಸ್ಟ್ 5 ರಿಂದ ಅಕ್ಟೋಬರ್ 3 ರ ವರೆಗೆ ಕೈಗೊಂಡು, ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 7 ರಂದು ಪ್ರಕಟಿಸಲಾಗುವುದು.

ಮತದಾರರ ಪಟ್ಟಿ ವಿಶೇಷ ಸಮಗ್ರಪರಿಷ್ಕರಣೆಕಾರ್ಯಕ್ಕಾಗಿ ಜಿಲ್ಲೆಯಲ್ಲಿ 6 ಮತದಾರರ ನೋಂದಣಾಧಿಕಾರಿಗಳು, 12 ಸಹಾಯಕ ಮತದಾರರ ನೋಂದಣಾಧಿಕಾರಿಗಳು, 1445 ಮತಗಟ್ಟೆ ಮಟ್ಟದ ಅಧಿಕಾರಿಗಳು (BLO) ಹಾಗೂ 144 ಬಿಎಲ್‌ಒ ಮೇಲ್ವಿಚಾರಕರನ್ನು ನೇಮಿಸಲಾಗಿದೆ. ಅಲ್ಲದೇ ಸದರಿ ಪ್ರಕ್ರಿಯೆಗೆ ಜಿಲ್ಲಾ ಮಟ್ಟದಲ್ಲಿ ನೋಡಲ್ ಅಧಿಕಾರಿಗಳನ್ನು, ವಿಧಾನಸಭಾ ಕ್ಷೇತ್ರವಾರು ನೋಡಲ್ ಅಧಿಕಾರಿಗಳನ್ನು ಹಾಗೂ ಹೋಬಳಿ ಮಟ್ಟದಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಈಗಾಗಲೇ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳು ಭೂತ ಮಟ್ಟದ ಏಜೆಂಟರನ್ನು ನೇಮಕ ಮಾಡಿರುತ್ತಾರೆ. ಜಿಲ್ಲೆಯಲ್ಲಿ ಇಲ್ಲಿಯವರೆಗೆ ಒಟ್ಟು 12,30,185 ಮತದಾರರಿದ್ದು, ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ನಡೆಯುತ್ತಿದ್ದು, ಪೂರ್ವ ತಯಾರಿಗಾಗಿ ಮತದಾರರ ವಿವರಗಳನ್ನು ಹೋಲಿಸಿ ಶೇ.92.11% (ಮ್ಯಾಪಿಂಗ್ ಮಾಡಿದ್ದು) ಖಚಿತಪಡಿಸಿಕೊಳ್ಳಲಾಗಿದೆ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಆರಂಭವಾಗುವವರೆಗೆ ಮ್ಯಾಪಿಂಗ್ ಪ್ರಕ್ರಿಯೆ ಮುಂದುವರೆಯಲಿದೆ.

# ಬಳ್ಳಾರಿ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಆರಂಭ: ನಾಗೇಂದ್ರ ಪ್ರಸಾದ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಬಳ್ಳಾರಿ ಜಿಲ್ಲಾದ್ಯಂತ 2026ರ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯಾಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.ನಗರದ ನೂತನ ಜಿಲ್ಲಾಡಳಿತ ಭವನದ ವಿಸಿ ಹಾಲ್‌ನಲ್ಲಿ ಗುರುವಾರ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ಅರ್ಹ ನಾಗರಿಕನೂ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವುದು ಎಷ್ಟು ಮುಖ್ಯವೋ, ಅಷ್ಟೇ ಜವಾಬ್ದಾರಿಯುತವಾಗಿ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳುವುದು ಅಗತ್ಯವಾಗಿದೆ. ಅರ್ಹ ಮತದಾರರು ಯಾರೂ ಪಟ್ಟಿಯಿಂದ ಹೊರಗುಳಿಯದಂತೆ ಮತ್ತು ದೋಷರಹಿತ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಉದ್ದೇಶದಿಂದ ಪ್ರಕ್ರಿಯೆ ನಡೆಯಲಿದೆ ಎಂದು ತಿಳಿಸಿದರು.*ಮನೆ ಮನೆಗೆ ಖುದ್ದಾಗಿ ಬಿಎಲ್‌ಒ ಭೇಟಿ: ವಿಶಿಷ್ಟ ಪ್ರಕ್ರಿಯೆ*ಜಿಲ್ಲೆಯಲ್ಲಿ 2026ರ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆಯ ಅಂಗವಾಗಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಪ್ರತಿಯೊಬ್ಬ ಮತದಾರರ ಮನೆ ಮನೆಗೂ ಕಡ್ಡಾಯವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಪ್ರತಿ ವರ್ಷ ಜನವರಿ 1ರಂದು ಮತದಾರರ ಪಟ್ಟಿಯನ್ನು ಪ್ರಕಟಿಸುತ್ತೇವೆ. ತದನಂತರ ಹೆಸರು ಸೇರ್ಪಡೆ (ನಮೂನೆ 6), ಕೈಬಿಡುವುದು (ನಮೂನೆ 7), ಸ್ಥಳಾಂತರ (ನಮೂನೆ 8) ಮತ್ತು ತಿದ್ದುಪಡಿ ಪ್ರಕ್ರಿಯೆಗಳು ನಿರಂತರವಾಗಿ ನಡೆಯುತ್ತವೆ. ಇದು ಸಾಮಾನ್ಯವಾಗಿದ್ದು, ಪ್ರಸಕ್ತ ನಡೆಯುತ್ತಿರುವ 'ವಿಶೇಷ ಸಮಗ್ರ ಪರಿಷ್ಕರಣೆ'(ಫೇಸ್–3) ಇದಕ್ಕಿಂತ ಸಂಪೂರ್ಣ ಭಿನ್ನವಾಗಿದೆ ಎಂದು ತಿಳಿಸಿದರು.

ಸಾಮಾನ್ಯ ಪರಿಷ್ಕರಣೆಯಲ್ಲಿ ಮನೆ ಮನೆಗೆ ಹೋಗುವುದಿಲ್ಲ. ಈ ವಿಶೇಷ ಅಭಿಯಾನದಲ್ಲಿ ನಮ್ಮ ಬೂತ್ ಮಟ್ಟದ ಅಧಿಕಾರಿಗಳು 1/1/2025ರ ಮತದಾರರ ಪಟ್ಟಿಯಲ್ಲಿರುವ ಪ್ರತಿಯೊಬ್ಬ ಮತದಾರರ ಮನೆಗೂ ಖುದ್ದಾಗಿ ಭೇಟಿ ನೀಡಿ, ವಿವರಗಳನ್ನು ಪರಿಶೀಲಿಸಿ ದೃಢೀಕರಿಸಲಿದ್ದಾರೆ ಎಂದು ವಿವರಿಸಿದರು.

ಜೂನ್ 30 ರಿಂದ ಜುಲೈ 21ರ ವರೆಗೆ ಬಿಎಲ್‌ಒಗಳು ಪ್ರತೀ ಮನೆ ಮನೆಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಂದರ್ಭದಲ್ಲಿ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯಿಂದ ನೀಡಿರುವ ಎರಡು ಪುಟಗಳ 'ಎನ್ಯುಮರೇಷನ್ ಫಾರ್ಮ್' (ನೋಂದಣಿ ನಮೂನೆ) ಅನ್ನು ಪ್ರತಿಯೊಬ್ಬ ಮತದಾರರಿಗೂ ತಲುಪಿಸಲಾಗುತ್ತದೆ. ಈ ಬಾರಿ ಇಂಗ್ಲೀಷ್ ಜೊತೆಗೆ ಕನ್ನಡದಲ್ಲೂ ಈ ಫಾರ್ಮ್ ಲಭ್ಯವಿರಲಿದೆ. ಮತದಾರರಿಂದ ಈ ಎರಡು ಫಾರ್ಮ್ಗಳನ್ನು ಭರ್ತಿ ಮಾಡಿಸಿಕೊಂಡು, ಅದರಲ್ಲಿ ಒಂದನ್ನು ಬಿಎಲ್‌ಒ ವಾಪಸ್ ಪಡೆದರೆ, ಮತ್ತೊಂದಕ್ಕೆ ಸ್ವೀಕೃತಿ ಸಹಿ ಹಾಕಿ ಮತದಾರರ ಕೈಗೆ ನೀಡಲಿದ್ದಾರೆ. ಹೆಸರು ಬಿಟ್ಟು ಹೋಗಿರುವ ಅಥವಾ ತಪ್ಪುಗಳಾಗಿರುವ ಕುರಿತು ಮತದಾರರು ಆಕ್ಷೇಪಣೆ ಅವಧಿಯಲ್ಲಿ ಈ ಸ್ವೀಕೃತಿ ಪತ್ರದೊಂದಿಗೆ ಕ್ಲೈಮ್ ಮಾಡಬಹುದಾಗಿದೆ. ಬಿಎಲ್‌ಒ ಆಪ್ ಮೂಲಕ ಇಆರ್‌ಒ (ಮತದಾರರ ನೋಂದಣಾಧಿಕಾರಿ) ಅವರಿಗೆ ವಿವರಗಳನ್ನು ಸಲ್ಲಿಸುವ ಸಂಪೂರ್ಣ ಜವಾಬ್ದಾರಿಯನ್ನು ಬಿಎಲ್‌ಒಗಳಿಗೆ ವಹಿಸಲಾಗಿದೆ ಎಂದರು.

ಚುನಾವಣಾ ಆಯೋಗವು ಪ್ರಜಾ ಪ್ರಾತಿನಿಧ್ಯ ಕಾಯ್ದೆ (ಆರ್.ಪಿ.ಆಕ್ಟ್) ಸೆಕ್ಷನ್ 21ರಡಿ ಈ ವಿಶೇಷ ಪರಿಷ್ಕರಣೆಗೆ ಚಾಲನೆ ನೀಡಿದ್ದು, ಕರ್ನಾಟಕದಲ್ಲಿ ಸದ್ಯ 3ನೇ ಹಂತದ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಈ ಬಾರಿಯ ಪರಿಷ್ಕರಣೆಗೆ 1/10/2026 ಅನ್ನು ಅರ್ಹತಾ ದಿನಾಂಕವಾಗಿ ನಿಗದಿಪಡಿಸಲಾಗಿದೆ. ಅಂದರೆ, ಈ ದಿನಾಂಕ–ಕ್ಕೆ 18 ವರ್ಷ ತುಂಬುವ ಪ್ರತಿಯೊಬ್ಬ ನಾಗರಿಕನೂ ಮತದಾರರ ಪಟ್ಟಿಗೆ ಹೆಸರು ಸೇರಿಸಲು ಅರ್ಹನಾಗಿರುತ್ತಾನೆ ಎಂದರು.

ಪರಿಷ್ಕರಣೆ ವೇಳಾಪಟ್ಟಿ:

ಅಧಿಕಾರಿಗಳ ಅಂತಿಮ ಹಂತದ ತರಬೇತಿ ಮುಕ್ತಾಯ: ಜೂನ್ 20, 2026 ರಿಂದ ಜೂನ್ 29, 2026.

ಬಿಎಲ್‌ಒಗಳ ಮನೆ ಮನೆ ಭೇಟಿ ಮತ್ತು ಸಮೀಕ್ಷೆ: ಜೂನ್ 30, 2026 ರಿಂದ ಜುಲೈ 21, 2026.ಹೆಚ್ಚುವರಿ ಮತಗಟ್ಟೆಗಳ ಮರುಹಂಚಿಕೆ): ಜುಲೈ 29, 2026.

ಪರಿಷ್ಕೃತ ಕರಡು ಮತದಾರರ ಪಟ್ಟಿ ಪ್ರಕಟಣೆ: ಆಗಸ್ಟ್ 5, 2026.

ಹಕ್ಕುಗಳು ಮತ್ತು ಆಕ್ಷೇಪಣೆಗಳ ಸಲ್ಲಿಕೆ ಅವಧಿ: ಆಗಸ್ಟ್ 5, 2026 ರಿಂದ ಸೆಪ್ಟೆಂಬರ್ 4, 2026.ನೋಟಿಸ್ ಅವಧಿ ಮತ್ತು ಇತ್ಯರ್ಥ: ಆಗಸ್ಟ್ 5, 2026 ರಿಂದ ಅಕ್ಟೋಬರ್ 3, 2026.ಅಂತಿಮ ಮತದಾರರ ಪಟ್ಟಿ ಅಧಿಕೃತ ಪ್ರಕಟಣೆ: ಅಕ್ಟೋಬರ್ 7, 2026 ।

*ದಾಖಲೆಯ ಶೇ 97.68 ರಷ್ಟು ಮ್ಯಾಪಿಂಗ್ ಯಶಸ್ವಿ:*ಈ ಬಾರಿ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಹಾಗೂ ವ್ಯವಸ್ಥಿತ ಮ್ಯಾಪಿಂಗ್ ಪ್ರಕ್ರಿಯೆಯನ್ನು ಅಳವಡಿಸಿಕೊಳ್ಳಲಾಗಿದ್ದು, ಜಿಲ್ಲೆಯಲ್ಲಿ ದಾಖಲೆಯ ಯಶಸ್ಸು ಸಿಕ್ಕಿದೆ. ಕಳೆದ 2002ರ ಮತದಾರರ ಪಟ್ಟಿಯನ್ನು ಇಂದಿನ ಪಟ್ಟಿಯೊಂದಿಗೆ ಹೋಲಿಸಿ ಮ್ಯಾಪಿಂಗ್ ಮಾಡುವ ಮಹತ್ವದ ಕಾರ್ಯವನ್ನು ಚುನಾವಣಾ ವಿಭಾಗ ಹಮ್ಮಿಕೊಂಡಿತ್ತು. ಈ ಪ್ರಕ್ರಿಯೆಯಡಿ ಜಿಲ್ಲೆಯ 2025ರ ಪಟ್ಟಿಯ ಅನ್ವಯ ಇರುವ ಒಟ್ಟು 12,28,958 ಮತದಾರರ ಪೈಕಿ ಬರೋಬ್ಬರಿ 12,00,463 (ಶೇ 97.68 ರಷ್ಟು) ಜನರನ್ನು ಯಶಸ್ವಿಯಾಗಿ ಪತ್ತೆ ಹಚ್ಚಿ, ಅವರ ಕುಟುಂಬದವರೊಂದಿಗೆ ಕೊಂಡಿ ಕಲ್ಪಿಸುವ ಕೆಲಸ ಯಶಸ್ವಿಯಾಗಿದೆ. ಇನ್ನೂ ಮ್ಯಾಪ್ ಆಗದೇ ಉಳಿದಿರುವ 28,495 ಮತದಾರರನ್ನು ಪತ್ತೆ ಹಚ್ಚಲು ಮುಂದಿನ ದಿನಗಳಲ್ಲಿ ವಿಶೇಷ ಕಾರ್ಯಾಚರಣೆ ಹಮ್ಮಿಕೊಳ್ಳಲಾಗುವುದು ಎಂದರು.

*ದಾಖಲೆ ಪತ್ರಗಳ ಕಡ್ಡಾಯವಿಲ್ಲ: ಸರಳ ಪ್ರಕ್ರಿಯೆ*

ಬಿಎಲ್‌ಒಗಳು ಸಾರ್ವಜನಿಕರಿಂದ ಭರ್ತಿ ಮಾಡಿದ ಫಾರ್ಮ್ಗಳನ್ನು ಸಂಗ್ರಹಿಸುವಾಗ ಯಾವುದೇ ರೀತಿಯ ಪೂರಕ ದಾಖಲಾತಿಗಳನ್ನು ಕೇಳುವುದಿಲ್ಲ. ಮತದಾರರು ನೀಡುವ ಅರ್ಜಿ ಅಪೂರ್ಣವಾಗಿದ್ದರೂ ಸಹ, ಬಿಎಲ್‌ಒಗಳೇ ಅದಕ್ಕೆ ಅಗತ್ಯವಿರುವ ಸಹಾಯವನ್ನು ಸ್ಥಳದಲ್ಲೇ ಮಾಡಲಿದ್ದಾರೆ. ಅರ್ಜಿದಾರರ ಹೆಸರು ಮತ್ತು ಸಹಿ ಇದ್ದರೆ ಸಾಕು, ಅದನ್ನು ಸ್ವೀಕರಿಸಲಾಗುತ್ತದೆ ಎಂದು ಸ್ಪಷ್ಟಪಡಿಸಿದರು.

ಒಂದು ವೇಳೆ ಸಲ್ಲಿಕೆಯಾಗುವ ಅರ್ಜಿಗಳು ಅಪೂರ್ಣವಾಗಿದ್ದಲ್ಲಿ, ಅಂತಹ ಸಾರ್ವಜನಿಕರಿಗೆ ಇಆರ್‌ಒ ವತಿಯಿಂದ ನೋಟಿಸ್ ಜಾರಿ ಮಾಡಲಾಗುತ್ತದೆ. ಅಪೂರ್ಣ ಮಾಹಿತಿ ಇರುವವರು ಸೂಕ್ತ ದಾಖಲೆಗಳೊಂದಿಗೆ ಪೂರ್ಣ ಮಾಹಿತಿ ನೀಡಿದ ಬಳಿಕವಷ್ಟೇ ಆಕ್ಷೇಪಣೆ ಹಾಗೂ ಹಕ್ಕುಗಳ ಪ್ರಕ್ರಿಯೆಯಡಿ ಅದನ್ನು ಇತ್ಯರ್ಥಪಡಿಸಲಾಗುವುದು. ಬಿಎಲ್‌ಒ ಭೇಟಿ ನೀಡಿದಾಗ ಸಾರ್ವಜನಿಕರ ಮನೆ ಬೀಗ ಹಾಕಿದ್ದರೆ, ಅಧಿಕಾರಿಗಳು ಸಮಾನ ಕಾಲಾವಧಿಯ ಅಂತರದಲ್ಲಿ ಕನಿಷ್ಠ 3 ಬಾರಿ ಆ ಮನೆಗೆ ಕಡ್ಡಾಯವಾಗಿ ಭೇಟಿ ನೀಡಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.

*ಹೆಚ್ಚುವರಿ ಮತಗಟ್ಟೆಗಳ ಸ್ಥಾಪನೆ:*

ಯಾವುದಾದರೂ ಒಂದು ಮತದಾನದ ಭಾಗದಲ್ಲಿ ಮತದಾರರ ಸಂಖ್ಯೆ 1,200 ಕ್ಕಿಂತ ಹೆಚ್ಚಾದರೆ, ಅಲ್ಲಿ ಮತದಾನ ಸುಲಭಗೊಳಿಸಲು ಹೆಚ್ಚುವರಿಯಾಗಿ ಒಂದು 'ಆಕ್ಸಿಲರಿ ಪೋಲಿಂಗ್ ಸ್ಟೇಷನ್' ಸ್ಥಾಪಿಸಲಾಗುವುದು. ಈ ಮತಗಟ್ಟೆಗಳ ಮರುಹಂಚಿಕೆ ಅಥವಾ ರ್ಯಾಷನಲೈಜೇಶನ್ ಪ್ರಕ್ರಿಯೆಯನ್ನು ಜುಲೈ 29 ರ ಒಳಗಾಗಿ ಪೂರ್ಣಗೊಳಿಸಲಾಗುವುದು ಎಂದರು.

ಚುನಾವಣಾ ಪ್ರಕ್ರಿಯೆಯಲ್ಲಿ ಸಂಪೂರ್ಣ ಪಾರದರ್ಶಕತೆ ಕಾಯ್ದುಕೊಳ್ಳುವುದು ಮುಖ್ಯ ಉದ್ದೇಶ. ಈ ನಿಟ್ಟಿನಲ್ಲಿ ಪ್ರಮುಖ ರಾಜಕೀಯ ಪಕ್ಷಗಳು, ಅವರು ನೇಮಿಸುವ ಬೂತ್ ಮಟ್ಟದ ಏಜೆಂಟರು ಹಾಗೂ ಮಾಧ್ಯಮಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು, ಪ್ರಕ್ರಿಯೆಯ ಪ್ರತಿಯೊಂದು ಹಂತದ ಬಗ್ಗೆಯೂ ವಿಸ್ತೃತ ಮಾಹಿತಿ ನೀಡಲಾಗುವುದು ಎಂದು ತಿಳಿಸಿದರು.

ಮತದಾರರಲ್ಲಿ ಜಾಗೃತಿ ಮೂಡಿಸಲು ಜಿಲ್ಲಾ ಪಂಚಾಯತ್ ಸಿಇಒ ನೇತೃತ್ವದಲ್ಲಿ ವ್ಯಾಪಕ ಸ್ವೀಪ್ ಕಾರ್ಯಕ್ರಮ ಪ್ರಚಾರ ಹಮ್ಮಿಕೊಳ್ಳಲಾಗುವುದು. ಕರಡು ಪಟ್ಟಿ ಪ್ರಕಟವಾದ ನಂತರ ಪಟ್ಟಿಯನ್ನು ಗ್ರಾಮ ಪಂಚಾಯತಿ ಕಚೇರಿಗಳು, ತಾಲೂಕು ಪಂಚೇತಿ ಇಒ ಕಚೇರಿ ಹಾಗೂ ಸ್ಥಳೀಯ ನಗರಾಡಳಿತ ಸಂಸ್ಥೆಗಳ ಮುಖ್ಯಸ್ಥರ ಕಚೇರಿಗಳಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಚುರಪಡಿಸಲಾಗುವುದು ಎಂದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ, ವಿವಿಧ ನಮೂನೆಗಳು ಮತ್ತು ವೇಳಾಪಟ್ಟಿಯ ಹೆಚ್ಚಿನ ವಿವರಗಳಿಗಾಗಿ ಸಾರ್ವಜನಿಕರು ಬಳ್ಳಾರಿ ಜಿಲ್ಲೆಯ ಅಧಿಕೃತ ವೆಬ್‌ಸೈಟ್ https://ballari.nic.in/ ಅಥವಾ ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳ ವೆಬ್‌ಸೈಟ್ https://ceo.karnataka.gov.in/en ಗೆ ಭೇಟಿ ನೀಡಬಹುದಾಗಿದೆ.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಜಿಪಂ ಉಪಕಾರ್ಯದರ್ಶಿ ಶಶಿಕಾಂತ್ ಶಿವಪೂರೆ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಆಹಾರ ನಾಗರಿಕರ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಕೆ.ಆರ್.ದೇವರಾಜ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಕೆ.ಎಂ.ಸೋಮಸುಂದರ್ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಮತದಾರರ ಪಟ್ಟಿ ಪರಿಷ್ಕರಣೆಯ ಗಣತಿದಾರರಿಗೆ ಸಹಕರಿಸಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಕೊಪ್ಪಳ ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಹಿನ್ನೆಲೆಯಲ್ಲಿ 2026ರ ಜೂನ್ 30 ರಿಂದ ಜುಲೈ 29ರವರೆಗೆ ಮನೆಮನೆಗೆ ಭೇಟಿ ನೀಡಲಿರುವ ಗಣ–ತಿದಾರರಿಗೆ ಅಗತ್ಯ ಮಾಹಿತಿ ನೀಡಿ ಸಹಕಾರ ನೀಡಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ ಅವರು ಕೊಪ್ಪಳ ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದರು.ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯದ ಬಗ್ಗೆ ಕೊಪ್ಪಳ ಜಿಲ್ಲೆಯ ಮಾಧ್ಯಮ ಪ್ರತಿನಿಧಿಗಳೊಂದಿಗೆ ಜೂನ್ 04ರಂದು ನಡೆದ ಸಂವಾದ ಬಳಿಕ ಅವರು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಮತದಾರರ ಪಟ್ಟಿಯಿಂದ ಯಾವುದೇ ಅರ್ಹ ಮತದಾರರು ಬಿಟ್ಟುಹೋಗಬಾರದು ಎಂಬುದೇ ಈ ಮತದಾರರ ಪಟ್ಟಿ ಪರಿಷ್ಕರಣೆಯ ಪ್ರಮುಖ ಉದ್ದೇಶವಾಗಿದೆ ಎಂಬುದಾಗಿ ಭಾರತ ಚುನಾವಣಾ ಆಯೋಗವು ಸ್ಪಷ್ಟಪಡಿಸಿದೆ ಎಂದು ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಿದರು.

ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯದಲ್ಲಿ ರಾಜಕೀಯ ಪಕ್ಷಗಳಿಂದ ನೇಮಕಗೊಂಡ ಬಿಎಲ್ ಎಗಳು ಸಹ ಭಾಗಿಯಾಗುತ್ತಾರೆ. ಅವರಿಗೂ ಸಹ ಜನತೆ ಸಹಕಾರ ನೀಡಬೇಕು ಎಂದು ಕೋರಿದರು.

ಉದ್ದೇಶಪೂರ್ವಕವಾಗಿಯೇ ಮತದಾರರ ಪಟ್ಟಿ ಪರಿಷ್ಕರಣೆ ಮಾಡಲಾಗುತ್ತದೆ ಎಂದು ಯಾರಿಂದಲೂ ದೂರುಗಳು ಬರಬಾರದು ಎಂದು ಈ ಪರಿಷ್ಕರಣಾ ಕಾರ್ಯದಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಂದ ನೇಮಕಗೊಂಡ ಬಿಎಲ್ ಇ ಗಳು ಸಹ ಭಾಗಿಯಾಗಿ ಅವರಿಂದ ಸಲಹೆ ಸೂಚನೆಗೆ ಅವಕಾಶ ಕಲ್ಪಿಸಲಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಅಪರಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಪಂ ಉಪ ಕಾರ್ಯದರ್ಶಿ ಟಿ ಕೃಷ್ಣಮೂರ್ತಿ ಇದ್ದರು.

# ಜೂ 25ರ ವರೆಗೆ ಅವಧಿ ವಿಸ್ತರಣೆ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ. 04 : ಸಾರ್ವಜನಿಕ ಉಪಯೋಗಕ್ಕಾಗಿ ಕಾಯ್ದಿರಿಸಿದ ನಾಗರಿಕ ಸೌಲಭ್ಯ ನಿವೇಶನಗಳನ್ನು ಗುತ್ತಿಗೆ ಆಧಾರದ ಮೇಲೆ ಹಂಚಿಕೆ ಮಾಡುವ ಅಧಿಸೂಚನ ಅವಧಿ ವಿಸ್ತರಿಸಿದೆ ಎಂದು ಬೀದರ ನಗರಾಭಿವೃದ್ಧಿ ಪ್ರಾಧಿಕಾರ ಆಯುಕ್ತರು ಅವರು ತಿಳಿಸಿದ್ದಾರೆ.ಸಾರ್ವಜನಿಕ ಉಪಯೋಗಕ್ಕಾಗಿ ಕಾಯ್ದಿರಿಸಿದ ನಾಗರೀಕ ಸೌಲಭ್ಯ ನಿವೇಶನಗಳನ್ನು ಗುತ್ತಿಗೆ ಆಧಾರದ ಮೇಲೆ ಹಂಚಿಕೆ ಮಾಡುವ ಸಂಬಂಧ ಈ ಅಧಿಸೂಚನೆಯಲ್ಲಿ ನಿಗಧಿಪಡಿಸಿದ ಸಿ.ಎ ನಿವೇಶನಗಳ ಫಾರಂ ವಿತರಣೆ ಮತ್ತು ಅವುಗಳನ್ನು ಭರ್ತಿ ಮಾಡಿ ಸಲ್ಲಿಸುವ ಅವಧಿಯು 2026ರ ಮೇ 22 ರಂದು ಮುಕ್ತಾಯಗೊಂಡಿರುತ್ತದೆ. ತದನಂತರ ಸಾರ್ವಜನಿಕರ ಬೇಡಿಕೆ ಅನುಸಾರ ಈ ಸಿ.ಎ ನಿವೇಶನಗಳ ಫಾರಂ ಮತ್ತು ಫಾರಂ–ಗಳನ್ನು ಪಡೆದು ಮತ್ತು ಸದರಿ ಫಾರಂಗಳು ಭರ್ತಿ ಮಾಡಿ ದಾಖಲೆಗಳೊಂದಿಗೆ 2026ರ ಜೂನ್ 25 ರಂದು ಪ್ರಾಧಿಕಾರಕ್ಕೆ ಸಲ್ಲಿಸಲು ಅವಧಿಯನ್ನು ವಿಸ್ತರಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ. 12 ರಂದು ವಿಶ್ವ ಬಾಲಕಾರ್ಮಿಕರ ಪದ್ಧತಿ ವಿರೋಧಿ ದಿನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.04:ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಮಕ್ಕಳ ಸಹಾಯವಾಣಿ–1098/112, ಜಿಲ್ಲಾ ಸ್ವಯಂ ಸೇವಾ ಸಂಸ್ಥೆಗಳ ಒಕ್ಕೂಟ ಇವುಗಳ ಸಂಯುಕ್ತಾಶ್ರಯದಲ್ಲಿ "ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ" ಕಾರ್ಯಕ್ರಮವನ್ನು ಜೂನ್ 12 ರಂದು ಶುಕ್ರವಾರ ಬೆಳಿಗ್ಗೆ 10.30 ಗಂಟೆಗೆ ಕಲಬುರಗಿ ನಗರದ ಎಸ್.ಬಿ. ದೇವಸ್ಥಾನ ರಸ್ತೆಯಲ್ಲಿರುವ ಸೇಂಟ್ ಮೇರಿ ಪದವಿ ಪೂರ್ವ ವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಕಲಬುರಗಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರಾದ ಇಕ್ರಮ ಶರೀಫ್ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಎಸ್. ಸಂಕನೂರ್, ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ವಿಶ್ವರಾಧ್ಯ ಇಜೇರಿ, ದೈವಾನುಗ್ರಹ ಮಾತೆಯ ಪ್ರಧಾನಾಲಯದ ಮುಖ್ಯ ಗುರುಗಳು ಹಾಗೂ ಸೇಂಟ್ ಮೇರಿ ಪದವಿ ಪೂರ್ವ ಕಾಲೇಜಿನ ಪ್ರಂಶುಪಾಲರಾದ ಫಾದರ್ ಜೋಸೆಫ್ ಪ್ರವೀಣ ಅವರು ಉಪಸ್ಥಿತರಿರುವರು.

ಕಲಬುರಗಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತ ಡಾ. ವೆಂಕಟೇಶ ಎ. ಶಿಂಧಿಹಟ್ಟಿ, ಕಲಬುರಗಿ ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತ ಮಹಮ್ಮದ್ ಬಷೀರ್ ಅನ್ಸಾರಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಶರಣಪ್ಪ ಆರ್. ಹಳಿಮನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕಿ ಶಂಕ್ರೇಮ್ಮಾ ಢವಳಗಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ವಿ. ಪಾಟೀಲ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘದ ಕಾರ್ಯಕಾರಿ ಸಮಿತಿಯ ಸದಸ್ಯ ಶಿವಕುಮಾರ ರೇಷ್ಮೆ, ಜಿಲ್ಲಾ ಸ್ವಯಂ ಸೇವಾ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ಮಸ್ತಾನ್ ಬಿರಾದಾರ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಬುರಗಿ ಮಾರ್ಗದರ್ಶಿ ಸಂಸ್ಥೆಯ ನಿರ್ದೇಶಕರಾದ ಆನಂದರಾಜ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಳ್ಳೂವರು.

ಜಾಥಾಕ್ಕೆ ಚಾಲನೆ: "ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ"ದ ಅಂಗವಾಗಿ ಅಂದು ಬೆಳಿಗ್ಗೆ 10 ಗಂಟೆಗೆ ಕಲಬುರಗಿ ನಗರದ ಸರ್ದಾರ ವಲ್ಲಭಭಾಯಿ ಪಟೇಲ್ ವೃತ್ತದಿಂದ ಸೇಂಟ್ ಮೇರಿ ಶಾಲೆಯವರೆಗೆ ಹಮ್ಮಿಕೊಳ್ಳಲಾಗಿದ್ದ ಜಾಥಾಕ್ಕೆ ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ಚಾಲನೆ ನೀಡುವರು.

ಬೆಂಗಳೂರಿನ ಕಾರ್ಮಿಕ ಆಯುಕ್ತರ ನಿರ್ದೇಶನದಂತೆ ಜೂನ್ 12ರಂದು "ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಅಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ಜಿಲ್ಲೆಯ ಎಲ್ಲಾ ಸರ್ಕಾರಿ ಇಲಾಖೆಗಳು/ ಕಚೇರಿಗಳು, ಶಾಲಾ–ಕಾಲೇಜುಗಳಲ್ಲಿ, ಗ್ರಾಮ, ತಾಲೂಕು, ಜಿಲ್ಲಾ ಪಂಚಾಯತಿಯ ಅಧ್ಯಕ್ಷರುಗಳು, ಸದಸ್ಯರುಗಳು, ಅಧಿಕಾರಿಗಳು, ಸಿಬ್ಬಂದಿಗಳು, ಅಂಗನವಾಡಿ ಕಾರ್ಯಕರ್ತರು, ಶಾಲಾ ಕಾರ್ಯಕರ್ತರು "ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ "ಪ್ರಮಾಣ ವಚನ" ವನ್ನು ಸ್ವೀಕರಿಸಬೇಕೆಂದು ಕಲಬುರಗಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರಾದ ಇಕ್ರಮ ಶರೀಫ್ ಅವರು ತಿಳಿಸಿದ್ದಾರೆ.

# ನಾಲ್ವಡಿ ಕೃಷ್ಣರಾಜ ಒಡೆಯರರ 142ನೇ ಜಯಂತಿ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಭಾರತೀಯ ಜನತಾ ಪಾರ್ಟಿ ವತಿಯಿಂದ ಹುಣಸೂರು ಗ್ರಾಮಾಂತರ ಮತ್ತು ನಗರ ಮಂಡಲ ವತಿಯಿಂದ ಆಧುನಿಕ ಮೈಸೂರಿನ ನಿರ್ಮಾತೃ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ರವರ 142 ನೇ ಹುಣಸೂರು ಟೌನ್ ತಾಲೂಕ ಪಂಚಾಯಿತಿ ಮುಂಭಾಗದಲ್ಲಿ ಅನ್ನ ಸಂತರ್ಪಣೆ ಮತ್ತು ಸಿಹಿ ಹಂಚುವ ಮೂಲಕ ಸರಳವಾಗಿ ಆಚರಣೆ ಮಾಡಲಾಯಿತು ಈ ಒಂದು ಕಾರ್ಯಕ್ರಮದಲ್ಲಿ ಗ್ರಾಮಾಂತರ ಅಧ್ಯಕ್ಷರಾದ ಕಾಂತರಾಜು ನಗರಾಧ್ಯಕ್ಷರು ನಾರಾಯಣ ಜಿಲ್ಲಾ ಉಪಾಧ್ಯಕ್ಷರು ಗಣೇಶ್ ಕುಮಾರಸ್ವಾಮಿ ಹಿರಿಯರಾದಂತಹ ನಾಗರಾಜ್ ಮಲ್ಲಾಡಿ ನಗರಸಭಾ ಸದಸ್ಯರು ವಿವೇಕ್ ಸುರೇಶ್ ಬಾಬಣ್ಣ ನಾಗಣ್ಣಗೌಡ ಹನುಗೂಡು ಮಂಜುನಾಥ್ ಶಿವಕುಮಾರ್ ಸೂರ್ಯ ಕುಮಾರ್ ಸತೀಶ್ ರವಿಕುಮಾರ್ ಮುದ್ದು ರಾಮ್ ಉಮೇಶ್ ಸುರೇಶ್ ವೆಂಕಟೇಶ ಗೋವರ್ಧನ್

ರಾಘವೇಂದ್ರ ಕಮಲಮ್ಮ ಯಶೋದಮ್ಮ ಮೀನಾಕ್ಷಿ ಮತ್ತು ಪಕ್ಷದ ಎಲ್ಲಾ ಕಾರ್ಯಕರ್ತ ಬಂಧುಗಳು ಉಪಸ್ಥಿತರಿದ್ದರು

# ಕೆಸರುಮಯವಾದ ರಸ್ತೆ ವಾಹನ ಸಂಚಾರಕ್ಕೆ ಸಂಚಕಾರ

• ಮಲ್ಲಮ್ಮ ನುಡಿ ವಾರ್ತೆಗೋಕರ್ಣ



ಇಲ್ಲಿಯ ಸಮೀಪದ ತಲಗೇರಿ ಮಾರ್ಗವಾಗಿ ಗಂಗಾವಳಿಗೆ ತೆರಳುವ ರಸ್ತೆಯಲ್ಲಿ ಮಳೆ ಸುರಿದ ಪರಿಣಾಮ ಇಡೀ ರಸ್ತೆ ಕೆಸರು ಮಣ್ಣಿನಿಂದ ಕೂಡಿದ್ದು, ಈ ರಸ್ತೆಯ ಮೂಲಕ ಸಂಚರಿಸಲು ದ್ವಿಚಕ್ರ ವಾಹನ ಹಾಗೂ ಪಾದಚಾರಿಗಳು ಹಿಂದೆ ಸರಿಯುವಂತಾಗಿದೆ.

ದ್ವಿಚಕ್ರ ವಾಹನ ಮತ್ತು ಪಾದಚಾರಿಗಳು ತೆರಳುವ ಸಂದರ್ಭದಲ್ಲಿ ಬಾರಿ ವಾಹನ ಬಂದರೆ ಇಡೀ ಮೈ ಕೆಸರುಮಯವಾಗುವ ಆತಂಕವಿದೆ. ಅಷ್ಟರಮಟ್ಟಿಗೆ ಆಗಿ ಕೆಸರಿನ ನೀರು ಆವರಿಸಿಕೊಂಡಿದೆ. ಇಲ್ಲಿ ಗುಡ್ಡವಿದ್ದು ಪ್ರತಿವರ್ಷ ಬೇಸಿಗೆಯಲ್ಲಿ ಮಣ್ಣು ತೆಗೆದು ಸಾಗಾಟ ಮಾಡಲಾಗುತ್ತದೆ. ಹೀಗಾಗಿ ಟಿಪ್ಪರ್‌ಗಳು ಇಲ್ಲಿಂದ ತೆರಳುವಾಗ ಅಲ್ಪ ಸ್ವಲ್ಪ ಬಿದ್ದ ಮಣ್ಣು ಬೇಸಿಗೆಯಲ್ಲಿ ಧೂಳು ಹಾರಿಸಿದರೆ, ಮಳೆಗಾಲದಲ್ಲಿ ರಸ್ತೆಯೇ ರಾಡಿಯಾಗುತ್ತದೆ.

ಈ ಬಗ್ಗೆ ಸ್ಥಳೀಯ ಗ್ರಾಮ ಪಂಚಾಯಿತಿಯವರು ಕೂಡ ಯಾವುದೇ ಕ್ರಮ ಕೈಗೊಂಡಿಲ್ಲ. ಹೀಗಾಗಿ ಈ ಮಾರ್ಗದಿಂದ ಸಂಚರಿಸುವವರು ಸುತ್ತುಬಳಸಿ ಬರಬೇಕಾಗಿದೆ. ಹಾಗೇ ಈ ರಸ್ತೆಗೆ ಹೊಂದಿಕೊಂಡು ಎರಡು ಶಾಲೆಗಳಿವೆ. ಕೆಲವೊಮ್ಮೆ ಪಾಕರು ಅನಿವಾರ್ಯವಾಗಿ ಈ ರಸ್ತೆಯ ಮೂಲಕವೇ ತಮ್ಮ ಮಕ್ಕಳನ್ನು ಕರೆತಂದುಬಿಡುವುದು. ನಂತರ ಮನೆಗೆ ಕರೆದುಕೊಂಡು ಹೋಗಬೇಕಾದ ಅನಿವಾರ್ಯತೆಯೂ ಇದೆ. ಹೀಗಾಗಿ ಸಂಬಂಧಪಟ್ಟವರು ತಕ್ಷಣ ಕ್ರಮಕೈಗೊಳ್ಳುವಂತೆ ಸ್ಥಳೀಯರು ಆಗ್ರಹಿಸಿದ್ದಾರೆ.

# ಪದವಿ ಕೋರ್ಸ್ ಪ್ರವೇಶಾತಿ ಜೂ. 27ರ ವರೆಗೆ ವಿಸ್ತರಣೆ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಬಿಎ, ಬಿ.ಎಸ್ಸಿ, ಬಿ.ಕಾಂ ಪದವಿ ಕೋರ್ಸುಗಳ ಮೊದಲ ಸೆಮಿಸ್ಟರಗೆ ದಂಡ ರಹಿತವಾಗಿ ಪ್ರವೇಶ ಪಡೆದುಕೊಳ್ಳಲು ಈ ಹಿಂದೆ ಕರ್ನಾಟಕ ವಿಶ್ವವಿದ್ಯಾಲಯ ನಿಗದಿಪಡಿಸಿದ್ದ ಮೇ.30 ರ ಗಡುವನ್ನು, ಜೂನ್ 27 ರವರೆಗೆ ವಿಸ್ತರಣೆಮಾಡಿ ಕವಿವಿ ಕುಲಸಚಿವರು ಅಧಿಸೂಚನೆ ಪ್ರಕಟಿಸಿದ್ದಾರೆ. ಈ ಕುರಿತು ಇತ್ತೀಚಿಗೆ ಕವಿವಿ ವ್ಯಾಪ್ತಿಯ ಅನುದಾನಿತ ಮತ್ತು ಅನುದಾನ ರಹಿತ ಪದವಿ ಕಾಲೇಜುಗಳ ಪ್ರಾಚಾರ್ಯರ ಸಂಘದ ವತಿಯಿಂದ ಕುಲಪತಿಗಳಿಗೆ ಮನವಿ ಸಲ್ಲಿಸಲಾಗಿತ್ತು. ರೂ.2000 ದಂಡ ಸಹಿತವಾಗಿ ಪ್ರವೇಶ ಪಡೆದುಕೊಳ್ಳಲು ಜುಲೈ 11, ಹಾಗೂ ವಿಶೇಷ ದಂಡ ಶುಲ್ಕ ರೂ.6000 ಸಂದಾಯ ಮಾಡಿ ಪ್ರವೇಶ ಪಡೆಯಲು ಜುಲೈ 13 ಕೊನೆಯ ದಿನವಾಗಿದೆ ಎಂದು ಕರ್ನಾಟಕ ವಿಶ್ವ ವಿದ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

# ಸಡಿಲ ಹತ್ತಿ ಬೀಜ ಮಾರಾಟ: ಪ್ರಕರಣ ದಾಖಲು



**ಗುರುಮಠಕಲ್:** ತಾಲೂಕಿನ ಮಲ್ಲಾಪುರ ಗ್ರಾಮದಲ್ಲಿ ಅನಧಿಕೃತವಾಗಿ ಸಡಿಲ ಹತ್ತಿ ಬೀಜಗಳನ್ನು ಮಾರಾಟ ಮಾಡುತ್ತಿದ್ದ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಗುರುಮಠಕಲ್ ಪೊಲೀಸ್ ಠಾಣೆಯಲ್ಲಿ ಗುರುವಾರ ಪ್ರಕರಣ ದಾಖಲಾಗಿದೆ.

ಕೃಷಿ ಇಲಾಖೆಯ ಅಧಿಕಾರಿಗಳ ಪರಿಶೀಲನೆ ವೇಳೆ ಸಡಿಲವಾಗಿ ಮಾರಾಟಕ್ಕೆ ಇಡಲಾಗಿದ್ದ ಹತ್ತಿ ಬೀಜಗಳನ್ನು ವಶಪಡಿಸಿಕೊಳ್ಳಲಾಗಿದೆ. ಈ ಸಂಬಂಧ ಶ್ರೀನಿವಾಸ್ ಬಂಟು ಎಂಬುವವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ 1955ರ ಕಲಂ 3 ಮತ್ತು 7 ಹಾಗೂ ಬೀಜ ನಿಯಮಗಳು 1968ರ ನಿಯಮ 3(1) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ದಾಳಿಯ ಸಂದರ್ಭದಲ್ಲಿ ಸುಮಾರು 53.72 ಕೆ.ಜಿ. ಹತ್ತಿ ಬೀಜ ವಶಪಡಿಸಿಕೊಳ್ಳಲಾಗಿದ್ದು, ಅದರ ಅಂದಾಜು ಮೌಲ್ಯ ₹1.02 ಲಕ್ಷ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೃಷಿ ಇಲಾಖೆಯ ಅಧಿಕಾರಿಗಳ ದೂರಿನ ಮೇರೆಗೆ ಗುರುಮಠಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಹೆಚ್ಚಿನ ತನಿಖೆ ಮುಂದುವರಿದಿದೆ. ರೈತರು ಪ್ರಮಾಣೀಕೃತ ಮತ್ತು ಅಧಿಕೃತ ಮಾರಾಟ ಕೇಂದ್ರಗಳಿಂದ ಮಾತ್ರ ಬೀಜಗಳನ್ನು ಖರೀದಿಸಬೇಕು ಎಂದು ಅಧಿಕಾರಿಗಳು ಮನವಿ ಮಾಡಿದ್ದಾರೆ.

# ದ್ವೇಷ ಭಾಷಣ ಆರೋಪ: ಮಾಜಿ ಶಾಸಕ ರೇವೂರ್ ವಿರುದ್ಧ ಎಫ್ಐಆರ್



**ಕಲಬುರಗಿ:** ದ್ವೇಷ ಭಾಷಣ ಮಾಡಿದ ಆರೋಪದ ಮೇಲೆ ಬಿಜೆಪಿ ಮಾಜಿ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮಾಜಿ ಅಧ್ಯಕ್ಷ ದತ್ತಾತ್ರೇಯ ಪಾಟೀಲ್ ರೇವೂರ್ ಅವರ ವಿರುದ್ಧ ಎಫ್ಐಆರ್ ದಾಖಲಾಗಿದೆ.

ಪ್ರಚೋದನಕಾರಿ, ದ್ವೇಷಪೂರಿತ ಮತ್ತು ಕೋಮು ಸೌಹಾರ್ದತೆ ಕೆಡಿಸುವ ನಿಟ್ಟಿನಲ್ಲಿ ಭಾಷಣ ಮಾಡಿದ್ದಾರೆ ಎಂದು ಸಾಮಾಜಿಕ ಕಾರ್ಯಕರ್ತ, ಖಮರ್ ಕಾಲೋನಿ ನಿವಾಸಿ ಅಜಗರ್ ಹುಸೇನ್ ತಂದೆ ಯುಸೂಫ್ ಹುಸೇನ್ ಅವರು ಸ್ಟೇಷನ್ ಬಜಾರ್ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ದೂರಿನ ಅನ್ವಯ ರೇವೂರ್ ವಿರುದ್ಧ ಎಫ್ಐಆರ್ ದಾಖಲಾಗಿದೆ.

ಇತ್ತೀಚೆಗೆ ಆಳಂದ ಲಾಡ್ಲೆ ಮಶಾಕ್ ಗಲಾಟೆ ಕೇಸ್ ವಾಪಸ್ ಪಡೆದ ಸರ್ಕಾರದ ವಿರುದ್ಧ ಬಿಜೆಪಿ ಹೋರಾಟ ನಡೆಸಿತ್ತು. ವೇದಿಕೆ ಕಾರ್ಯಕ್ರಮದಲ್ಲಿ ಭಾಷಣ ಮಾಡಿದ್ದ ದತ್ತಾತ್ರೇಯ ಪಾಟೀಲ್ ರೇವೂರ್, ಮಾಜಿ ಸಚಿವ ದಿ.ಖಮರುಲ್ ಇಸ್ಲಾಂ ಕಲಬುರ್ಗಿಯನ್ನು ಮಿನಿ ಪಾಕಿಸ್ತಾನ್ ಮಾಡಲು ಮುಂದಾಗಿದ್ದರು. ಹಾಗಾಗಿಯೆ ಚುನಾವಣೆಯಲ್ಲಿ ಖಮರುಲ್ ಇಸ್ಲಾಂ ಸೋಲನ್ನ ಅನುಭವಿಸಿದ್ದರು ಎಂದು ಹೇಳಿದ್ದರು. ಈ ಸಂಬಂಧ ಮಾಜಿ ಶಾಸಕರ ವಿರುದ್ಧ ಎಫ್ಐಆರ್ ದಾಖಲಾಗಿದೆ. ಅಪಾರ ಸಂಖ್ಯೆಯ ಕಾರ್ಯಕರ್ತರು ಸ್ಟೇಷನ್ ಬಜಾರ್ ಪೋಲಿಸ್ ಠಾಣೆ ಮುಂದೆ ಸೇರಿ ರೇವೂರ್ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಆದಾಗ್ಯೂ, ಹಿಂದೂ ಸಂಘಟನೆಗಳ ಕಾರ್ಯಕರ್ತರು ಹಾಗೂ ಬಿಜೆಪಿಯವರು ಪ್ರಕರಣ ದಾಖಲಾತಿಗೆ ಆಕ್ರೋಶ ಹೊರಹಾಕಿದ್ದಾರೆ.

# ರಸ್ತೆಯಲ್ಲಿ ನೀರು, ಎಚ್ಚರಗೊಳ್ಳದ ಪುರಸಭೆ



**ಅಂಕೋಲಾ:** ಪಟ್ಟಣದಲ್ಲಿ ಗುರುವಾರ ಮಧ್ಯಾಹ್ನದಿಂದ ಸಣ್ಣ ಪ್ರಮಾಣದಲ್ಲಿ ಮಳೆ ಆರಂಭಗೊಂಡಿದ್ದು ಆರಂಭದಲ್ಲಿಯೇ ಮಳೆನೀರು ರಸ್ತೆಯಲ್ಲಿ ನಿಲ್ಲುವಂತಾಗಿದೆ. ದೊಡ್ಡ ವಾಹನ ಸಂಚರಿಸಿದರೆ ಅಕ್ಕಪಕ್ಕದಲ್ಲಿ ಸಂಚರಿಸುವ ಇತರೆ ವಾಹನದವರಿಗೆ, ಪಾದಚಾರಿಗಳಿಗೆ ನೀರು ಸಿಡಿಯುವಂತಾಗಿದೆ. ಆರಂಭದಲ್ಲಿಯೇ ಪುರಸಭೆ ಇನ್ನು ಜಾಗೃತಗೊಳ್ಳಬೇಕಾಗಿದೆ.

ಪಟ್ಟಣದ ಪ್ರಮುಖ ರಸ್ತೆಯಾಗಿರುವ ಡಾ. ದಿನಕರ ದೇಸಾಯಿ ತಗ್ಗು ರಸ್ತೆಯಲ್ಲಿ ನೀರು ನಿಂತುಕೊಂಡಿದೆ. ಹೀಗಾಗಿ ಇಲ್ಲಿ ಸಂಚರಿಸುವವರು ತುಸು ಆಸುಪಾಸು ನೋಡಿ ಚಲಿಸಬೇಕಾಗಿದೆ. ದ್ವಿಚಕ್ರ ವಾಹನ ಹಾಗೂ ಪಾದಚಾರಿಗಳು ಸಂಚರಿಸುವ ಸಮಯದಲ್ಲಿ ಬಸ್ ಹಾಗೂ ಇತರೆ ಭಾರಿ ವಾಹನ ಬಂದರೆ ನೀರು ಸಿಡಿಯುತ್ತದೆ. ಹೀಗಾಗಿ ಪುರಸಭೆಯವರು ಎಲ್ಲಿ ನೀರು ನಿಂತಿದೆಯೋ ಆ ರಸ್ತೆಗಳ ಚರಂಡಿಗಳನ್ನು ತಕ್ಷಣ ದುರಸ್ಥಿಗೊಳಿಸಬೇಕಾಗಿದೆ.

ಮೇ ಅಂತ್ಯದ ಸಮಯದಲ್ಲಿ ಪುರಸಭೆಯವರು ಗಟಾರದ ತ್ಯಾಜ್ಯ ತೆಗೆಯುವ ಕಾರ್ಯಕ್ಕೆ ಕೈ ಹಾಕಿದ್ದರು. ಗಟಾರ ಸ್ವಚ್ಛಗೊಳಿಸಿದ ಕಾರ್ಮಿಕರು ಅದನ್ನು ಒಣಗಲು ರಸ್ತೆಯಲ್ಲಿಯೇ ತ್ಯಾಜ್ಯವನ್ನು ಹಾಕಿದ್ದರು. ಆದರೆ ಕೆಲವು ಭಾಗದಲ್ಲಿ ಹಲವು ದಿನ ಕಳೆದರೂ ಅದನ್ನು ತೆರವುಗೊಳಿಸುವ ಪ್ರಯತ್ನ ಮಾಡದೇ ಇರುವುದು. ಮಳೆ ಬಂದ ನಂತರ ಮತ್ತೆ ಮಣ್ಣು ಗಟಾರಕ್ಕೆ ಸೇರುವಂತಾಗಿದೆ. ಇನ್ನಾದರೂ ಪುರಸಭೆಯವರು ಜಾಗೃತಗೊಳ್ಳಬೇಕು. ಇಲ್ಲದಿದ್ದರೆ ಪ್ರಮುಖ ರಸ್ತೆಯ ಮೇಲೆ ನೀರು ನಿಂತು ವಾಹನಗಳಿಗೆ ಹಾಗೂ ಪಾದಚಾರಿಗಳಿಗೆ ಸಮಸ್ಯೆ ಉಂಟಾಗಲಿದೆ.

# ನಿವೇಶನ, ಹಕ್ಕುಪತ್ರಕ್ಕಾಗಿ ಡಿಸಿ ಕಚೇರಿವರೆಗೆ ಜಾಥಾ: ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ನಿವೇಶನ ರಹಿತ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ, ಗುನ್ನಳ್ಳಿ ಆಶ್ರಯ ನಿವೇಶನಗಳಿಗೆ ರಸ್ತೆ, ವಿದ್ಯುತ್ ಹಾಗೂ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವುದು ಮತ್ತು ಭಾಗ್ಯನಗರ ಪಟ್ಟಣ ಪಂಚಾಯಿತಿ ವ್ಯಾಪ್ತಿಯ 19ನೇ ವಾರ್ಡಿನ ಅಲೆಮಾರಿ ಸಿಂದೊಳ್ಳು ಸಮುದಾಯದ ಕುಟುಂಬಗಳಿಗೆ ನಿವೇಶನ ಒದಗಿಸುವಂತೆ ಒತ್ತಾಯಿಸಿ ವಸತಿ ನಿರಾಶ್ರಿತ ಹೋರಾಟ ಸಮಿತಿಯ ನೇತೃತ್ವದಲ್ಲಿ ಗುರುವಾರ ಜಿಲ್ಲಾಧಿಕಾರಿ ಕಚೇರಿವರೆಗೆ ಜಾಥಾ ನಡೆಸಿ ಮನವಿ ಸಲ್ಲಿಸಲಾಯಿತು.

ಈ ಕುರಿತು ಸಮಿತಿಯ ಮುಖಂಡರು ಮಾತನಾಡಿ, 2023ರ ನವೆಂಬರ್ 15ರಿಂದ ವಿವಿಧ ಇಲಾಖೆಗಳು ಹಾಗೂ ನಗರಸಭೆಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಇದುವರೆಗೆ ಯಾವುದೇ ಶಾಶ್ವತ ಪರಿಹಾರ ದೊರೆತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಬೆಳಿಗ್ಗೆ 10.20ಕ್ಕೆ ವಿವಿಧ ದಲಿತ ಪರ, ಪ್ರಗತಿಪರ, ಕನ್ನಡ ಪರ ಹಾಗೂ ಅಲೆಮಾರಿ ಸಂಘಟನೆಗಳ ಮುಖಂಡರು ಹಾಗೂ ನಿರಾಶ್ರಿತ ಕುಟುಂಬಗಳು ಸೇರಿ ಅಶೋಕ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಜಾಥಾ ನಡೆಸಿದರು.









ಭಾಗ್ಯನಗರ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಗಾಂಧಿನಗರ, ಸಿದ್ದೇಶ್ವರ ನಗರ, ಕಾಳಿದಾಸ ನಗರ, ಕೂಗಮ್ಸ್ ನಗರ ಸೇರಿದಂತೆ ಸುಮಾರು 40 ಕುಟುಂಬಗಳಿಗೆ ನಿವೇಶನ ಮತ್ತು ಹಕ್ಕುಪತ್ರ ನೀಡಬೇಕು. ಕುವೆಂಪುನಗರದ ಸುಮಾರು 20 ಕುಟುಂಬಗಳಿಗೆ ಫಾರ್ಮ್ ಸಂಖ್ಯೆ ಮಂಜೂರು ಮಾಡಬೇಕು. ಅಲ್ಲದೆ ಗುನ್ನಳ್ಳಿ ಆಶ್ರಯ ನಿವೇಶನದ ಕಾಮಗಾರಿ ಪೂರ್ಣಗೊಳಿಸಿ, ಆಯ್ಕೆಯಾದ ಫಲಾನುಭವಿಗಳಿಗೆ ತ್ವರಿತವಾಗಿ ಹಕ್ಕುಪತ್ರ ಹಾಗೂ ನಿವೇಶನ ಹಂಚಿಕೆ ಮಾಡಬೇಕು ಎಂದು ಒತ್ತಾಯಿಸಿದರು.

ಮೂರು ವರ್ಷಗಳಿಂದ ಕಾಯುತ್ತಿರುವ ಬಡ ಮತ್ತು ನಿರಾಶ್ರಿತ ಕುಟುಂಬಗಳಿಗೆ ಆಶ್ರಯ ಕಲ್ಪಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ ಹಾಗೂ ನಗರಸಭೆ ತುರ್ತು ಕ್ರಮ ಕೈಗೊಳ್ಳಬೇಕು. ಆಶ್ರಯ ಕಾಲೋನಿಗಳಲ್ಲಿ ಅರ್ಹರು ಹಾಗೂ ಅನರ್ಹರ ಕುರಿತು ಸಮಗ್ರ ಪರಿಶೀಲನೆ ನಡೆಸಿ, ಮೊದಲ ಹಂತದಲ್ಲಿ ಕುವೆಂಪುನಗರದಿಂದಲೇ ಪ್ರಾರಂಭಿಸಬೇಕು ಎಂದು ಆಗ್ರಹಿಸಿದರು.

ಈ ಬೇಡಿಕೆಗಳ ಈಡೇರಿಕೆಗೆ ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಅಧ್ಯಕ್ಷ ಚಂದ್ರಕಾಂತ್ ಕಾದ್ರೊಳ್ಳಿ, ಕರ್ನಾಟಕ ರಕ್ಷಣಾ ಯುವ ಪಡೆ ವೇದಿಕೆಯ ರಾಜ್ಯಾಧ್ಯಕ್ಷ ನಿಂಗು ಜಿ.ಎಸ್. ಬೇಡಿಕಲ್, ಆರ್. ವಿಜಯಕುಮಾರ್, ಕರುನಾಡು ಯುವ ಪ್ರಜಾ ವೇದಿಕೆಯ ಸಂಸ್ಥಾಪಕಿ ಶ್ರೀಮತಿ ಬಿಬಿಜಾನ್, ರಾಜ್ಯಾಧ್ಯಕ್ಷ ರಾಜು ಹೊಂಬಳ, ಕರ್ನಾಟಕ ರಾಜ್ಯ ಎಸ್‌ಸಿ–ಎಸ್‌ಟಿ ಅಲೆಮಾರಿ ಬುಡಕಟ್ಟು ಮಹಾಸಭೆಯ ಜಿಲ್ಲಾ ಅಧ್ಯಕ್ಷ ಸಂಜಯ್ ದಾಸ್ ಕೌಜಗೇರಿ, ಮೇಧಾರ್ ಸಂಘಟನೆ ಹಾಗೂ ಕರ್ನಾಟಕ ರಕ್ಷಣಾ ವೇದಿಕೆಯ ಎಚ್. ಶಿವರಾಮಗೌಡ ಸೇರಿದಂತೆ ಜಿಲ್ಲೆಯ ಹಲವು ಸಂಘಟನೆಗಳ ಮುಖಂಡರು ಬೆಂಬಲ ವ್ಯಕ್ತಪಡಿಸಿದ್ದಾರೆ.

ಬೇಡಿಕೆಗಳನ್ನು ಈಡೇರಿಸುವ ಕುರಿತು ಜಿಲ್ಲಾಡಳಿತದಿಂದ ಅಧಿಕೃತ ಆದೇಶ ಹೊರಬರುವವರೆಗೆ ಧರಣಿ ಮತ್ತು ಸತ್ಯಾಗ್ರಹ ಮುಂದುವರಿಯಲಿದೆ ಎಂದು ಹೋರಾಟಗಾರರು ಎಚ್ಚರಿಕೆ ನೀಡಿದ್ದಾರೆ.

# ಪರಿಷ್ಕೃತ ವೇತನ ಜಾರಿಗಾಗಿ ಎಐಯುಟಿಯುಸಿಯಿಂದ ಮನವಿ ಪತ್ರ ಸಲ್ಲಿಕೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಎಐಯುಟಿಯುಸಿ ನೇತೃತ್ವದಲ್ಲಿ ವಸತಿ ನಿಲಯಗಳ ಕಾರ್ಮಿಕರು, ಬಳ್ಳಾರಿ ವೈದ್ಯಕೀಯ ಕಾಲೇಜು ಹಾಗೂ ಸಂಶೋಧನಾ ಕೇಂದ್ರದ ಕಾರ್ಮಿಕರಿಂದ, ವೇತನ ಹೆಚ್ಚಳ ಪರಿಷ್ಕರಣೆಯನ್ನು ಜಾರಿಗೊಳಿಸುವಂತೆ ಒತ್ತಾಯಿಸಿ, ಸಂಬಂಧಪಟ್ಟ ಸಮಾಜ ಕಲ್ಯಾಣ , ಪರಿಶಿಷ್ಟ ವರ್ಗ , ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಇಲಾಖೆಗಳ ಜಿಲ್ಲಾ ಅಧಿಕಾರಿಗಳು ಹಾಗೂ ಬಿ.ಎಂ.ಸಿ.ಆರ್. ಸಿ ನಿರ್ದೇಶಕರಿಗೆ ಮನವಿ ಸಲ್ಲಿಸಲಾಯಿತು. ಎಲ್ಲಾ ಅಧಿಕಾರಿಗಳು ಪರಿಷ್ಕೃತ ವೇತನ ಜಾರಿಗೊಳಿಸಲು ಕೂಡಲೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಎಐಯುಟಿ–ಯುಸಿ ಜಿಲ್ಲಾ ಅಧ್ಯಕ್ಷರಾದ ಎ. ದೇವದಾಸ್ ಮಾತನಾಡುತ್ತಾ "ತೀವ್ರ ಸಂಕಷ್ಟದಲ್ಲಿರುವ ಕಾರ್ಮಿಕ ವರ್ಗಕ್ಕೆ ವೇತನ ಹೆಚ್ಚಿಸುವಂತೆ ಎಐಯುಟಿಯುಸಿ ಅನೇಕ ಬಾರಿ ಸ್ವತಂತ್ರವಾಗಿ ಹಾಗೂ ಇತರ ಕಾರ್ಮಿಕ ಸಂಘಗಳೊಂದಿಗೆ ಸೇರಿ ಜಂಟಿ ಹೋರಾಟ ಹಾಗೂ ಬೆಳಗಾವಿ ಅಧಿವೇಶನ ಸಂದರ್ಭದಲ್ಲಿ ಬೃಹತ್ ಹೋರಾಟ ನಡೆಸಿದೆ. ಇಂದಿನ ಬೆಲೆ ಏರಿಕೆ ಮತ್ತು ಹೆಚ್ಚುತ್ತಿರುವ ಜೀವನ ವೆಚ್ಚಕ್ಕೆ ಅನುಗುಣವಾಗಿ ಕಾರ್ಮಿಕರಿಗೆ ಕನಿಷ್ಠ 36,000 ವೇತನ ನಿಗದಿಪಡಿಸಬೇಕೆಂದು ಕಾರ್ಮಿಕ ಸಂಘಟನೆಗಳು ನಿರಂತರವಾಗಿ ಒತ್ತಾಯಿಸುತ್ತಾ ಬಂದಿದ್ದವು. ಆದರೆ ಮಾಲೀಕ ವರ್ಗವು ಇದಕ್ಕೆ ತೀವ್ರ ಅಡ್ಡಿಪಡಿಸುತ್ತಲೆ ಇತ್ತು. ಮಾಲೀಕ ವರ್ಗದ ಒತ್ತಡಕ್ಕೆ ಮಣಿದಿದ್ದ ಸರ್ಕಾರವು ಆದೇಶ ಜಾರಿ ಮಾಡಲು ಮೀನಾಮೇಷ ಎಣಿಸುತ್ತಿತ್ತು. ಇದನ್ನು ಪ್ರತಿಭಟಿಸಿ ಕಾರ್ಮಿಕ ಸಂಘಟನೆಗಳ ಜಂಟಿ ವೇದಿಕೆಯು ಇದೇ ಮೇ 27 ರಂದು ರಾಜ್ಯಾದ್ಯಂತ ತೀವ್ರ ಸ್ವರೂಪದ ಹೋರಾಟಕ್ಕೆ ಕರೆ ನೀಡಿತ್ತು. ಹೋರಾಟದ ತೀವ್ರತೆಯನ್ನು ಅರಿತ ಸರ್ಕಾರವು ಕೊನೆಗೂ ಮಣಿದು, ಈ ಆದೇಶವನ್ನು ಹೊರಡಿಸಿದೆ ಎಂದರು. ಇದು ಕಾರ್ಮಿಕರ ಹೋರಾಟದ ಶಕ್ತಿಗೆ ಸಿಕ್ಕ ಪ್ರತಿಫಲವಾಗಿದೆ". ಎಂದರು



ಎಐಯುಟಿಯುಸಿ ಜಿಲ್ಲಾ ಕಾರ್ಯದರ್ಶಿ ಡಾ. ಪ್ರಮೋದ್ ಮಾತನಾಡುತ್ತಾ "ಸರ್ಕಾರದ ಈ ಆದೇಶ ಕೇವಲ ಕಾಗದದ ಮೇಲಿದ್ದರೆ ಸಾಲದು. ಎಲ್ಲಾ ಸರ್ಕಾರಿ ಇಲಾಖೆಗಳಲ್ಲಿ, ಅನುಸೂಚಿತ ಉದ್ಯಮಗಳ ಮಾಲೀಕರು ಈ ಪರಿಷ್ಕೃತ ಕನಿಷ್ಠ ವೇತನವನ್ನು ವಿಳಂಬಗೊಳಿಸದೆ ತಕ್ಷಣದಿಂದಲೇ ಜಾರಿಗೊಳಿಸಬೇಕು. ಯಾವುದೇ ಕಾರಣಕ್ಕೂ ಮಾಲೀಕ ವರ್ಗದ ಒತ್ತಡಕ್ಕೆ ಮಣಿಯದೆ, ಈ ಆದೇಶವನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವಂತೆ ಮಾಡಲು ಕಾರ್ಮಿಕರು ಸದಾ ಜಾಗರೂಕರಾಗಿರಬೇಕು ಮತ್ತು ಒಗ್ಗಟ್ಟಿನಿಂದ ನಿಲ್ಲಬೇಕು." ಎಂದು ಕರೆ ನೀಡಿದರು.

ನಿಯೋಗದಲ್ಲಿ ಎಐಯುಟಿಯುಸಿ ಜಿಲ್ಲಾ ಉಪಾಧ್ಯಕ್ಷರಾದ ಶಾಂತ, ಜಂಟಿ ಕಾರ್ಯದರ್ಶಿ ಸುರೇಶ್. ಜಿ, ಮುಖಂಡರಾದ ಕಿರಣ್ ಕುಮಾರ್, ಚೇತನ್, ಮುರಳಿ ಕೃಷ್ಣ, ಹುಲಗಪ್ಪ, ಚಿಟ್ಟಮ್ಮ, ಪಾರ್ವತಿ, ಲಕ್ಷ್ಮಿ ದೇವಿ, ಮುಂತಾದವರು ಭಾಗವಹಿಸಿದ್ದರು.

# ಭೀಕರ ರಸ್ತೆ ಅಪಘಾತ: ಮೈನ್ಸ್ ಲಾರಿಗೆ ಸಿಲುಕಿ ದಾರುಣ ಸಾವು

• ಮಲ್ಲಮ್ಮ ನುಡಿ ವಾರ್ತೆ ಸಂಡೂರು

ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ನಂದಿಹಳ್ಳಿ ರಸ್ತೆಯಲ್ಲಿ ಗುರುವಾರ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ತಂದೆ ಮತ್ತು ಮಗ ಸ್ಥಳದಲ್ಲೇ ಮೃತಪಟ್ಟಿರುವ ದುರ್ಘಟನೆ ನಡೆದಿದೆ. ಈ ಘಟನೆ ಸ್ಥಳೀಯರಲ್ಲಿ ತೀವ್ರ ಆಕ್ರೋಶ ಮತ್ತು ದುಃಖಕ್ಕೆ ಕಾರಣವಾಗಿದೆ.

ಮೃತರನ್ನು ಬೆಳ್ಳಿ ನಾಗರಾಜ್ (45) ಹಾಗೂ ಅವರ ಪುತ್ರ ದುರ್ಗೇಶ್ (22) ಎಂದು ಗುರುತಿಸಲಾಗಿದೆ. ಇಬ್ಬರೂ ಬೈಕ್‌ನಲ್ಲಿ ಸಂಡೂರಿನಿಂದ ನಂದಿಹಳ್ಳಿ ಕಡೆಗೆ ತೆರಳುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ.

ಪ್ರತ್ಯಕ್ಷದರ್ಶಿಗಳ ಮಾಹಿತಿ ಪ್ರಕಾರ, ವೇಗವಾಗಿ ಬಂದ ಮೈನ್ಸ್ ಲಾರಿಯೊಂದು ಬೈಕ್‌ಗೆ ಡಿಕ್ಕಿ ಹೊಡೆದಿದ್ದು, ಬಳಿಕ ಇಬ್ಬರ ಮೇಲೆಯೇ ಹರಿದ ಪರಿಣಾಮ ತಂದೆ–ಮಗ ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅಪಘಾತದ ತೀವ್ರತೆಗೆ ಬೈಕ್ ಸಂಪೂರ್ಣ ಜಖಂಗೊಂಡಿದ್ದು, ಮೃತದೇಹಗಳು ರಸ್ತೆಯಲ್ಲೇ ಬಿದ್ದಿದ್ದ ದೃಶ್ಯ ಕಂಡುಬಂದಿದೆ.




ಘಟನೆಯ ಸುದ್ದಿ ತಿಳಿಯುತ್ತಿದ್ದಂತೆಯೇ ಸಂಡೂರು ಪೊಲೀಸ್ ಠಾಣೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ.

ಅಪಘಾತಕ್ಕೆ ಮೈನ್ಸ್ ಲಾರಿ ಚಾಲಕನ ಅಜಾಗರೂಕ ಮತ್ತು ನಿರ್ಲಕ್ಷ್ಯದ ಚಾಲನೆಯೇ ಕಾರಣ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಸಂಡೂರು ಪೊಲೀಸರು ಲಾರಿ ಚಾಲಕನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

ಈ ದುರ್ಘಟನೆಯಿಂದ ಬೆಳ್ಳಿ ನಾಗರಾಜ್ ಅವರ ಕುಟುಂಬದಲ್ಲಿ ಆಕ್ರಂದನ ಮುಗಿಲು ಮುಟ್ಟಿದ್ದು, ಬಂಧು–ಬಳಗ ಮತ್ತು ಗ್ರಾಮಸ್ಥರು ಕಂಬನಿ ಮಿಡಿದಿದ್ದಾರೆ. ಇತ್ತೀಚಿನ ದಿನಗಳಲ್ಲಿ ಸಂಡೂರು ಭಾಗದಲ್ಲಿ ಮೈನ್ಸ್ ಲಾರಿಗಳ ಅತಿವೇಗ ಹಾಗೂ ನಿರ್ಲಕ್ಷ್ಯದ ಚಾಲನೆಯಿಂದ ಅಪಘಾತಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

# ಕೆಆರ್‌ಎಸ್ ಪಕ್ಷದ ಲಂಚಮುಕ್ತ ಅಭಿಯಾನ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಕೊಪ್ಪಳ ಜಿಲ್ಲೆ ಕಾರಟಗಿ ತಾಲೂಕಿನ ಪೊಲೀಸ್ ಠಾಣೆ ಮತ್ತು ಪುರಸಭೆಯಲ್ಲಿ ಇಂದು ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದ ವತಿಯಿಂದ "ಲಂಚಮುಕ್ತ ಕರ್ನಾಟಕ" ಅಭಿಯಾನವನ್ನು ಹಮ್ಮಿಕೊಳ್ಳಲಾಯಿತು.

ಸಾರ್ವಜನಿಕರಿಗೆ ಸರ್ಕಾರಿ ಕಚೇರಿಗಳಲ್ಲಿ ಯಾವುದೇ ಕೆಲಸಕ್ಕಾಗಿ ಲಂಚ ನೀಡುವ ಅಥವಾ ಪಡೆಯುವ ಪರಿಸ್ಥಿತಿ ನಿರ್ಮಾಣವಾಗಬಾರದು. ಸರ್ಕಾರಿ ಸೇವೆಗಳು ಪಾರದರ್ಶಕವಾಗಿ ಮತ್ತು ಸಮಯಕ್ಕೆ ಸರಿಯಾಗಿ ದೊರೆಯಬೇಕು ಎಂಬ ಉದ್ದೇಶದಿಂದ ಕೆಆರ್‌ಎಸ್ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ಪೊಲೀಸ್ ಠಾಣೆ ಮತ್ತು ಪುರಸಭೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆಆರ್ ಎಸ್ ಪಕ್ಷದ ಯುವ ಮುಖಂಡ ನಿರುಪಾದಿ ಕೆ ಗೊಮರ್ಸಿ ಅವರು ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಭ್ರಷ್ಟಾಚಾರ ಮತ್ತು ಲಂಚದ ಹಾವಳಿಯಿಂದ ಸಾಮಾನ್ಯ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ. ಜನಸಾಮಾನ್ಯರ ಹಕ್ಕಿನ ಸೇವೆಗಳನ್ನು ಪಡೆಯಲು ಅನಗತ್ಯ ವಿಳಂಬ ಹಾಗೂ ಹಣದ ಬೇಡಿಕೆಗಳು ಕಂಡುಬರುತ್ತಿವೆ. ಇಂತಹ ದುಷ್ಪ್ರವೃತ್ತಿಗಳನ್ನು ತಡೆಯಲು ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.













ಪೊಲೀಸ್ ಠಾಣೆಯಲ್ಲಿ ದೂರುಗಳ ಸ್ವೀಕಾರ, ತನಿಖೆ ಹಾಗೂ ಸಾರ್ವಜನಿಕರೊಂದಿಗೆ ನಡೆದುಕೊಳ್ಳುವ ವಿಚಾರದಲ್ಲಿ ಪಾರದರ್ಶಕತೆ ಕಾಪಾಡಬೇಕು. ಪುರಸಭೆಯಲ್ಲಿ ತೆರಿಗೆ, ಖಾತೆ, ಪರವಾನಗಿ, ಕುಡಿಯುವ ನೀರು ಹಾಗೂ ಇತರೆ ನಾಗರಿಕ ಸೇವೆಗಳನ್ನು ಯಾವುದೇ ಲಂಚವಿಲ್ಲದೆ ಒದಗಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಯಿತು ಹಾಗೂ ಕೆಆರ್‌ಎಸ್ ಪಕ್ಷವು ರಾಜ್ಯಾದ್ಯಂತ ಲಂಚಮುಕ್ತ ಅಭಿಯಾನವನ್ನು ಮುಂದುವರಿಸಲಿದ್ದು, ಭ್ರಷ್ಟಾಚಾರದ ವಿರುದ್ಧ ಜನಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕೆಆರ್‌ಎಸ್ ಪಕ್ಷದ ರಾಜ್ಯ ರೈತ ಘಟಕದ ಕಾರ್ಯದರ್ಶಿ ಕನಕಪ್ಪ ಉಡೆಜಾಲಿ ಕೊಪ್ಪಳ ಜಿಲ್ಲಾ ಸಂಚಾಲಕರಾದ ಗಣೇಶ್ ಅಮೃತ್, ಉಮೇಶ್ ಕುಮಾರ್ ಸಾರಂಗಿ, ಮೈನುದ್ದೀನ್, ಶಾಮಿದ ಅಲಿ ಹುಲಿ ಹೈದರ್, ಹನುಮಂತಪ್ಪ , ಹನುಮೇಶ್, ಅಮಾಂತಪ್ಪ ಜೂಲ್ ಕುಂಟೆ, ಸೇರಿದಂತೆ ಸ್ಥಳೀಯ ಘಟಕದ ಪದಾಧಿಕಾರಿಗಳು, ಕಾರ್ಯಕರ್ತರು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

## ರೈತರ ಹೆಸರಿನಲ್ಲಿ ಭ್ರಷ್ಟಾಚಾರ: ಬಿಎಸ್‌ಪಿ ಆರೋಪ



**ಬಸವಕಲ್ಯಾಣ:** ಇಲ್ಲಿನ ಬಹುಜನ ಸಮಾಜ ಪಕ್ಷದ ತಾಲೂಕ ಅಧ್ಯಕ್ಷರಾದ ಶಂಕರ ಫುಲೆ ಅವರ ನೇತೃತ್ವದಲ್ಲಿ ಕೃಷಿ ಇಲಾಖೆ ಸಹಾಯಕ ನಿರ್ದೇಶಕರಿಗೆ ತಾಲೂಕಿನ ರೈತರ ಹೆಸರಲ್ಲಿ ಭ್ರಷ್ಟಾಚಾರ ಮಾಡಿದವರ ವಿರುದ್ಧ ಸೂಕ್ತ ಕಾನೂನ ಕ್ರಮ ಜರುಗಿಸಿ ರೈತರಿಗೆ ನ್ಯಾಯ ಒದಗಿಸಬೇಕು ಎಂದು ಬಹುಜನ ಸಮಾಜ ಪಕ್ಷದ ತಾಲ್ಲೂಕು ಅಧ್ಯಕ್ಷರಾದ ಶಂಕರ್ ಫುಲೆ ಮನವಿ ಸಲ್ಲಿಸಿದರು.

ರೈತರು ನಮ್ಮ ದೇಶದ ಮೊದಲನೆ ಸ್ಥಂಬ ಎಂದು ಪ್ರತಿಯೊಬ್ಬರು ಹೇಳತ್ತಾರೆ ಆದರೆ ರೈತರಿಗೆ ಮೋಸ ಮಾಡುವುದು ಯಾವ ನ್ಯಾಯವೆ? ಈ ವಿಷಯ ಗಂಭೀರವಾಗಿ ಪರಿಶೀಲಿಸಿ ತಪ್ಪಿತಸ್ಥರ ವಿರೋಧ ಕಾನೂನ ಕ್ರಮ ಕೈಗೊಂಡು ಅವರಿಗೆ ಕೆಲಸದಿಂದ ಅಮಾನತ್ತು ಮಾಡಬೇಕೆಂದು ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ತಾಲೂಕ ಸಂಯೋಜಕರಾದ ದತ್ತು ಸುತಾಣೆ.ಮಕ್ಬುಲ ಸಾಬ. ಉಪಾಧ್ಯಕ್ಷರಾದ ರಮೇಶ ರಾಠೋಡ. ಪ್ರಧಾನ ಕಾರ್ಯದರ್ಶಿ ರವಿ ಉದಾತ. ಕಾರ್ಯದರ್ಶಿ ಮಹಾದೇವ ಗಾಯಕವಾಡ ಹಾರಕೂಡ. ಗ್ರಾಮ ಘಟಕ ಅಧ್ಯಕ್ಷರಾದ ದಿಲೀಪ ಸಿರೋಳೆ ಹಾರಕೂಡ. ಗ್ರಾಮ ಘಟಕ ಉಪಾಧ್ಯಕ್ಷರಾದ ಪ್ರಶಾಂತ ಗುಡ್ಡೆ ಹಾರಕೂಡ. ಗ್ರಾಮ ಘಟಕ ಪ್ರಧಾನ ಕಾರ್ಯದರ್ಶಿಗಳಾದ ಸಾಗರ ಯಮಹಾನ ಹಂದ್ರಳ (ಆರ್). ಗ್ರಾಮ ಘಟಕ ಅಧ್ಯಕ್ಷರು ಮಾರುತಿ ಮೇಕಲೆ. ರಾಹುಲ ವಾಗಮಾರೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಯಾವುದೇ ಹುದ್ದೆ ನಿರ್ವಹಿಸುವ ಸಾಮರ್ಥ್ಯ ಖಂಡ್ರೆಯವರಿಗಿದೆ: ಶ್ರೀ



**ಬೆಂಗಳೂರು:** ಯಾರೂ ಬಯಸದ ಅರಣ್ಯ ಖಾತೆಯಲ್ಲಿ ಹೇಗೆ ಕೆಲಸ ಮಾಡಬಹುದು ಎಂಬುದನ್ನು ನಿರೂಪಿಸಿದ ಈಶ್ವರ ಖಂಡ್ರೆ ಅವರು ಯಾವುದೇ ಹುದ್ದೆ ನೀಡಿದರೂ ನಿಭಾಯಿಸುವ ಸಮರ್ಥರಾಗಿದ್ದಾರೆ ಎಂದು ತುಮಕೂರು ಸಿದ್ದಗಂಗಾಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿ ಅಭಿಪ್ರಾಯಪಟ್ಟಿದ್ದಾರೆ.

ನೂತನವಾಗಿ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ ಈಶ್ವರ ಬಿ ಖಂಡ್ರೆ ಅವರ ಅಧಿಕೃತ ನಿವಾಸಕ್ಕೆ ಆಗಮಿಸಿ ಆಶೀರ್ವದಿಸಿದ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಕೊಟ್ಟ ಕುದುರೆಯನೇರಲರಿಯದವ ವೀರನೂ ಅಲ್ಲ ಧೀರನೂ ಅಲ್ಲ ಎಂದು ಅಲ್ಲಮಪ್ರಭು ಹೇಳಿದ್ದಾರೆ. ಆದರೆ ಈಶ್ವರ ಖಂಡ್ರೆ ಅವರು ವೀರರು, ಶೂರರು ಆಗಿದ್ದು, ಅರಣ್ಯ ಸಚಿವರಾಗಿ ತಮ್ಮ ಸಾಮರ್ಥ ಸಾಬೀತು ಪಡಿಸಿದ್ದಾರೆ ಎಂದರು.

ಈಗ ಡಿ.ಕೆ. ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಸಚಿವರಾಗಿರುವ ಅವರು ನಾಡಿನ ಜನತೆಯ ಒಳಿತಿಗಾಗಿ ಇನ್ನೂ ಉತ್ತಮವಾಗಿ, ದಕ್ಷತೆಯಿಂದ ಕಾರ್ಯ ನಿರ್ವಹಿಸಲಿದ್ದಾರೆ ಎಂಬ ವಿಶ್ವಾಸವನ್ನು ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿ ವ್ಯಕ್ತಪಡಿಸಿದರು.

ಯಾವುದೇ ಜನಪ್ರತಿನಿಧಿಗೆ ಜನಹಿತವೇ ಮುಖ್ಯ. ಲಿಂಗೈಕ್ಯ ಭೀಮಣ್ಣ ಖಂಡ್ರೆ ಅವರೂ ಜನಪರವಾಗಿದ್ದರು. ಈಶ್ವರ ಖಂಡ್ರೆ ಅವರು ಅದೇ ಪರಂಪರೆಯನ್ನು ಮುಂದುವರಿಸಿಕೊಂಡು ಬಂದಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಮಳೆ, ಬೆಳೆ ಆಗಲಿ, ಸರ್ಕಾರ ಉತ್ತಮವಾಗಿ ಕಾರ್ಯ ನಿರ್ವಹಿಸಲಿ ನಾಡಿನ ಜನರೆಲ್ಲರಿಗೂ ಒಳಿತಾಗಲಿ ಎಂದು ಶ್ರೀಗಳು ಹಾರೈಸಿದರು. ಈ ಸಂದರ್ಭದಲ್ಲಿ ಈಶ್ವರ ಖಂಡ್ರೆ ಅವರ ಧರ್ಮಪತ್ನಿ ಡಾ. ಗೀತಾ ಖಂಡ್ರೆ ಮತ್ತಿತರರು ಹಾಜರಿದ್ದರು.

## ಪತ್ನಿಯನ್ನು ಕೊಂದ ಪತಿ ಬಂಧನ

ಬಳ್ಳಾರಿ: ನಗರದ ಕೌಲ್‌ಬಜಾರ್ ಪರೋಟಮ್ಮ ಗುಡಿ ಹತ್ತಿರದ ನಿವಾಸಿ ಆಫ್ರಿನ್ ಬಾನು ಹತ್ಯೆ ಪ್ರಕರಣದಲ್ಲಿ ಪತಿ ನೂರ್ ಅಹ್ಮದ್‌ನನ್ನು ಪೊಲೀಸರು ಬಂಧಿಸಿದ್ದಾರೆ. ಎಂಟು ತಿಂಗಳು ಮಗುವನ್ನು ಹೊಂದಿದ್ದ ಅಫ್ರಿನ್ ಬಾನು ಅವರನ್ನು ಆಕೆಯ ಪತಿ ನೂರ್ ಅಹಮ್ಮದ್ ಕೊಲೆ ಮಾಡಿರುವ ಆರೋಪ ಎದುರಿಸುತ್ತಿದ್ದಾನೆ.



ಇವರಿಬ್ಬರು ಪ್ರೀತಿಸಿ ಮದುವೆ ಆಗಿದ್ದರು. ದಾಂಪತ್ಯ ಕಲಹದ ಹಿನ್ನೆಲೆಯಲ್ಲಿ ಆಫ್ರಿನ್ ಬಾನು ಗಂಡನ ಮನೆ ಬಿಟ್ಟು ಕೆಲಕಾಲದಿಂದ ತವರು ಮನೆಯಲ್ಲಿ ವಾಸಿಸುತ್ತಿದ್ದರು. ಕಳೆದ ಮೇ 21ರಂದು ತನ್ನ ಹುಟ್ಟುಹಬ್ಬದ ನೆಪದಲ್ಲಿ ಪತ್ನಿಯ ಮನೆಗೆ ಬಂದಿದ್ದ ನೂರ್ ಅಹ್ಮದ್, ಕುಟುಂಬ ಸದಸ್ಯರೊಂದಿಗೆ ಕೇಕ್ ಕತ್ತರಿಸಿ ಸಂಭ್ರಮಿಸಿದ್ದಾನೆ. ಬಳಿಕ ಪತ್ನಿಯನ್ನು ಊಟಕ್ಕೆ ಕರೆದುಕೊಂಡು ಹೋಗಿದ್ದಾನೆ. ಆದರೆ ಆಫ್ರಿನ್ ಬಾನುಳನ್ನು ತಿರುಗಿ ಮನೆಗೆ ಕಳಿಸಿಲ್ಲ. ಆಗ ತವರು ಮಹಿಳಾ ಪೊಲೀಸ್ ಠಾಣೆಯಲ್ಲಿ ನಾಪತ್ತೆ ದೂರು ದಾಖಲಿಸಿದ್ದರು. ತನಿಖೆ ಆರಂಭಿಸಿದ ಪೊಲೀಸರಿಗೆ ತಾಲೂಕಿನ ವೇಣಿವೀರಾಪುರದ ಜಮೀನು ಒಂದರಲ್ಲಿ ಆಫ್ರಿನ್ ಬಾನು ಅವರ ಮೃತದೇಹ ಪತ್ತೆಯಾಗಿದೆ. ಪ್ರಕರಣದ ತನಿಖೆಯ ವೇಳೆ ದೊರೆತ ಸಾಕ್ಷ್ಯಾಧಾರಗಳ ಆಧಾರದಲ್ಲಿ ನೂರ್ ಅಹ್ಮದ್‌ನನ್ನು ಪೊಲೀಸರು ಬಂಧಿಸಿದ್ದಾರೆ. ಮೃತಳ ಕುಟುಂಬಸ್ಥರು ಪ್ರಕರಣದಲ್ಲಿ ಪತಿ ಮಾತ್ರವಲ್ಲದೆ ಆತನ ಕುಟುಂಬ ಸದಸ್ಯರು ಆಫ್ರಿನ್ ಬಾನುಗೆ ಕಿರುಕುಳ ನೀಡಲಾಗುತ್ತಿತ್ತು ಎಂದು ಆರೋಪಿಸಿದ್ದಾರೆ.

# ಶೇಂಗಾಕ್ಕೆ ರಾಷ್ಟ್ರೀಯ ಬ್ರ್ಯಾಂಡ್ ರೂಪಿಸುವ ಸಂಕಲ್ಪ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಮಹಿಳೆಯರ ಸ್ವಾವಲಂಬನೆ ಹಾಗೂ ರೈತರ ಆದಾಯ ಹೆಚ್ಚಳವೇ ಕೇಂದ್ರ ಸರ್ಕಾರ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ಪ್ರಮುಖ ಸಂಕಲ್ಪವಾಗಿದೆ ಎಂದು ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಬದ್ದೇಪಲ್ಲಿ ಗ್ರಾಮದಲ್ಲಿ ನಾಬಾರ್ಡ್ ಹಾಗೂ ಕೇಂದ್ರ ಕೃಷಿ ಸಹಕಾರ ಇಲಾಖೆಯ ಸಹಯೋಗದಲ್ಲಿ ಎಂ.ಪಿ.ಎಲ್‌ಎಡಿಎಸ್ ಯೋಜನೆಯಡಿ ಸ್ಥಾಪಿಸಲಾದ 'ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರ'ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

"ಚಿತ್ತೂರು ಎಂದರೆ ಮಾವಿನ ಹಣ್ಣು ಎನ್ನುವಂತೆ, ಯಾದಗಿರಿ ಎಂದರೆ ಶೇಂಗಾ ಎಂದು ದೇಶಾದ್ಯಂತ ಗುರುತಾಗಬೇಕು. ಇಲ್ಲಿನ ಶೇಂಗಾಕ್ಕೆ ಜಿಐ ಮಾನ್ಯತೆ ದೊರಕುವಂತೆ ಮಾಡಿ ರೈತರ ಆದಾಯವನ್ನು ದ್ವಿಗುಣಗೊಳಿಸುವುದು ನಮ್ಮ ಗುರಿಯಾಗಿದೆ" ಎಂದು ಹೇಳಿದರು. ಈ ಕೇಂದ್ರದಲ್ಲಿ ಶೇಂಗಾ ಸಂಸ್ಕರಣೆ, ಪ್ಯಾಕಿಂಗ್ ಹಾಗೂ ಬ್ರ್ಯಾಂಡಿಂಗ್ ಕುರಿತು ತರಬೇತಿ ನೀಡಲಾಗುವುದು. ಗ್ರಾಮೀಣ ಮಹಿಳೆಯರು ಸ್ವಸಹಾಯ ಸಂಘಗಳ ಮೂಲಕ




ಉದ್ಯಮಿಗಳಾಗಿ ಬೆಳೆದು, ಶೇಂಗಾ ಚಿಕ್ಕಿ, ಶೇಂಗಾ ಎಣ್ಣೆ ಹಾಗೂ ಶೇಂಗಾ ಬೆಣ್ಣೆ ಉತ್ಪಾದಿಸಿ ನೇರ ಮಾರುಕಟ್ಟೆ ತಲುಪಬೇಕು. ಇದರಿಂದ ಮಹಿಳೆಯರಿಗೆ ಆರ್ಥಿಕ ಸ್ವಾತಂತ್ರ್ಯ ದೊರೆಯಲಿದೆ ಎಂದು ತಿಳಿಸಿದರು. ಯಾದಗಿರಿ ಜಿಲ್ಲೆ ಶಿಕ್ಷಣ, ಆರೋಗ್ಯ ಹಾಗೂ ತಲಾ ಆದಾಯದ ವಿಷಯದಲ್ಲಿ ಇನ್ನೂ ಹಿಂದುಳಿದಿರುವುದು ನೋವು ತಂದಿದೆ. ಆದರೆ ಇಲ್ಲಿನ ರೈತರು ಮತ್ತು ಮಹಿಳೆಯರು ಪರಿಶ್ರಮಿಗಳು. ಅವರಿಗೆ ಸೂಕ್ತ ತರಬೇತಿ, ಸಂಸ್ಕರಣಾ ಘಟಕಗಳು ಹಾಗೂ ಮಾರುಕಟ್ಟೆ ಸಂಪರ್ಕ ಕಲ್ಪಿಸಿದರೆ ಮುಂದಿನ ಐದು ವರ್ಷಗಳಲ್ಲಿ ಯಾದಗಿರಿ ಅಭಿವೃದ್ಧಿ ಹೊಂದಿದ ಜಿಲ್ಲೆಗಳ ಸಾಲಿಗೆ ಸೇರುವ ವಿಶ್ವಾಸವಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಮಹಿಳಾ ಸಾಕ್ಷರತೆ ಕೇವಲ ಶೇ.41ರಷ್ಟಿದ್ದು, ಪೌಷ್ಟಿಕಾಂಶದ ಕೊರತೆ, ಶಿಶು ಮರಣ ಪ್ರಮಾಣ, ಶುದ್ಧ ಕುಡಿಯುವ ನೀರಿನ ಸಮಸ್ಯೆ ಸೇರಿದಂತೆ ಹಲವು ಮೂಲಭೂತ ಸೌಲಭ್ಯಗಳ ಕೊರತೆ ಇದೆ ಎಂದು ವಿಷಾದ ವ್ಯಕ್ತಪಡಿಸಿದ ಅವರು, ದೀರ್ಘಕಾಲ ಆಡಳಿತ ನಡೆಸಿದವರು ಅಭಿವೃದ್ಧಿಗೆ ಅಗತ್ಯವಾದ ಕ್ರಮಗಳನ್ನು ಕೈಗೊಳ್ಳಲಿಲ್ಲ ಎಂದು ಪರೋಕ್ಷವಾಗಿ ಟೀಕಿಸಿದರು.

ಜಿಲ್ಲೆಯ ಕೃಷಿಯಲ್ಲಿ ಉತ್ತಮ ಸಾಧನೆಗೈದ ದೊರನಹಳ್ಳಿಯ ರಾಧಾ ಹಾಗೂ ಬದ್ದೆ-ಪಲ್ಲಿಯ ಬುದ್ಧಿಬಾಯಿ ಮಹಿಳಾ ರೈತರಿಗೆ ಕಾರ್ಯಕ್ರಮದಲ್ಲಿ ಸಚಿವರು ಸನ್ಮಾನಿಸಿದರು. ಗುರುಮಠಕಲ್ ಶಾಸಕ ಶರಣಗೌಡ ಕಂದಕೂರು ಅವರು ಸಲ್ಲಿಸಿದ ಮನವಿಪತ್ರದಲ್ಲಿರುವ ಶಿಕ್ಷಕರ ನೇಮಕಾತಿ, ಶುದ್ಧ ಕುಡಿಯುವ ನೀರು ಹಾಗೂ ಸಿಂದಗಿ-ಕೋಡಂಗಲ್ ಹೆದ್ದಾರಿ ಯೋಜನೆ ಸೇರಿದಂತೆ ವಿವಿಧ ಬೇಡಿಕೆಗಳ ಬಗ್ಗೆ ಕೇಂದ್ರಮಟ್ಟದಲ್ಲಿ ಅಗತ್ಯಕ್ರಮ ಕೈಗೊಳ್ಳಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು. ಯಾದಗಿರಿ ಜಿಲ್ಲೆಯಲ್ಲಿ ವಾರ್ಷಿಕ 22,500 ಮೆಟ್ರಿಕ್ ಟನ್ ಶೇಂಗಾ ಉತ್ಪಾದನೆಯಾಗುತ್ತಿದ್ದು, ಬದ್ದೇಪಲ್ಲಿಯಲ್ಲಿ ಸ್ಥಾಪಿಸಿರುವ ಒಂದು ಘಟಕದ ಮಾದರಿಯಲ್ಲಿ ಇನ್ನೂ 41 ಘಟಕಗಳ ಅವಶ್ಯಕತೆ ಇದೆ. ಮಹಿಳೆಯರು ಉದ್ಯಮಿಗಳಾಗಬೇಕು ಹಾಗೂ ರೈತರು ಮಧ್ಯವರ್ತಿಗಳ ಹಾವಳಿಯಿಂದ ಹೊರಬಂದು ನೇರ ಮಾರುಕಟ್ಟೆ ವ್ಯವಸ್ಥೆ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ರಾಜ್ಯ ಸರ್ಕಾರ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯಿತಿಯ ಸಹಕಾರದಿಂದ ಈ ಘಟಕ ಸ್ಥಾಪನೆಯಾಗಿರುವುದು ಸಂತಸದ ವಿಷಯ. ಆದರೆ ಕಳೆದ ಆರು ತಿಂಗಳಲ್ಲಿ ಘಟಕದ ಬಳಕೆ ಕೇವಲ ಶೇ.15ರಷ್ಟೇ ಆಗಿರುವುದು ಸಮಾಧಾನಕರವಲ್ಲ ಎಂದು ಅಧಿಕಾರಿಗಳ ಗಮನ ಸೆಳೆದರು. ಮುಂದಿನ ಆರು ತಿಂಗಳಲ್ಲಿ 'ರೈತ ಉತ್ಪಾದಕ ಕಂಪನಿ' ಸ್ಥಾಪಿಸಿ, ಫ್ಲಿಪ್‌ಕಾರ್ಟ್ ಮತ್ತು ಅಮೆಜಾನ್‌ನಂತಹ ಆನ್‌ಲೈನ್ ವೇದಿಕೆಗಳ ಮೂಲಕ 'ಯಾದಗಿರಿ ಶೇಂಗಾ' ಬ್ರ್ಯಾಂಡ್ ಅನ್ನು ರಾಜ್ಯ, ದೇಶ ಹಾಗೂ ವಿದೇಶ ಮಟ್ಟಕ್ಕೆ ಕೊಂಡೊಯ್ಯುವ ಕನಸು ನನಸಾಗಬೇಕು ಎಂದು ಹೇಳಿದರು. ಉದ್ಘಾಟನೆಗೊಂಡ ಕೇಂದ್ರದಲ್ಲಿ ಶೇಂಗಾ ಸುಲಿಯುವ ಯಂತ್ರ, ಎಣ್ಣೆ ಉತ್ಪಾದನಾ ಘಟಕ, ಶುದ್ಧೀಕರಣ, ಗ್ರೇಡಿಂಗ್ ಹಾಗೂ ಪ್ಯಾಕಿಂಗ್ ಯಂತ್ರಗಳನ್ನು ಅಳವಡಿಸಲಾಗಿದೆ ಎಂದು ತಿಳಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಶರಣಗೌಡ ಕಂದಕೂರ ವಹಿಸಿದ್ದರು. ಕೇಂದ್ರ ಹಣಕಾಸು ಸಚಿವಾಲಯದ ಕಾರ್ಯದರ್ಶಿ ಸಂ-ಜಯ್ ಲೋಹಿಯಾ, ನಾಬಾರ್ಡ್ ಅಧ್ಯಕ್ಷ ಡಾ. ಶಾಜಿ ಕೆ.ವಿ., ಜಿಲ್ಲಾಧಿಕಾರಿ ಪಂಡ್ವೆ ರಾಹುಲ್ ತುಕಾರಾಂ, ಜನಪ್ರತಿನಿಧಿಗಳು, ರೈತರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

# ಸಾಧಕರೊಂದಿಗೆ ಸಂವಾದ-2026, ಡಾ.ಗುರಮ್ಮಾ ಸಿದ್ದಾರೆಡ್ಡಿಗೆ ವಿಶೇಷ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಆಯೋಜಿಸಲಾಗುತ್ತಿರುವ "ಸಾಧಕರೊಂದಿಗೆ ಸಂವಾದ-2026" ವಿಶೇಷ ಕಾರ್ಯಕ್ರಮಕ್ಕೆ ಬೀದರ ಜಿಲ್ಲೆಯ ಖ್ಯಾತ ಸಮಾಜಸೇವಕಿ ಹಾಗೂ ಮಹಿಳಾ ಸಾಧಕಿಯಾಗಿರುವ ಡಾ. ಗುರಮ್ಮಾ ಸಿದ್ದಾರೆಡ್ಡಿ ಅವರನ್ನು ವಿಶೇಷ ಅತಿಥಿಯಾಗಿ ಆಹ್ವಾನಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳು ಡಾ.ಗುರಮ್ಮಾ ಸಿದ್ದಾರೆಡ್ಡಿ ಅವರ ನಿವಾಸಕ್ಕೆ ಭೇಟಿ ನೀಡಿ, ಶಾಲು ಹೊದಿಸಿ ಸನ್ಮಾನಿಸಿ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಆಹ್ವಾನ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕರ ಆದೇಶದ ಮೇರೆಗೆ, ಜೂನ್ 10ರಂದು ಸಂಜೆ 4 ಗಂಟೆಗೆ ಬೀದರ ನಗರದ ಪೂಜ್ಯಶ್ರೀ ಡಾ.ಚನ್ನಬಸವ ಪಟ್ಟದೇವರು ಜಿಲ್ಲಾ ರಂಗಮಂದಿರದಲ್ಲಿ "ಸಾಧಕರೊಂದಿಗೆ



ಸಂವಾದ-2026" ಕಾರ್ಯಕ್ರಮ ನಡೆಯಲಿದ್ದು, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಗೌರವಿಸಿ ಅವರ ಅನುಭವಗಳನ್ನು ಸಾರ್ವಜನಿಕರೊಂದಿಗೆ ಹಂಚಿಕೊಳ್ಳುವ ಉದ್ದೇಶದಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ತಿಳಿಸಿದ್ದಾರೆ.

ಡಾ.ಗುರಮ್ಮಾ ಸಿದ್ದಾರೆಡ್ಡಿ ಅವರು ಮಹಿಳಾ ಸಬಲೀಕರಣ, ಅಂಗವಿಕಲರ ಅಭಿವೃದ್ಧಿ, ಸಾಮಾಜಿಕ ನ್ಯಾಯ ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ನೆರವು ನೀಡುವ ಮೂಲಕ ಸಮಾಜ ಸೇವಾ ಕ್ಷೇತ್ರದಲ್ಲಿ ವಿಶಿಷ್ಟ ಕೊಡುಗೆ ನೀಡಿರುವುದನ್ನು ಪರಿಗಣಿಸಿ ಅವರನ್ನು ವಿಶೇಷ ಮಹಿಳಾ ಸಾಧಕಿಯಾಗಿ ಆಯ್ಕೆ ಮಾಡಲಾಗಿದೆ. ಸಮಾಜಮುಖಿ ಕಾರ್ಯಗಳ ಮೂಲಕ ಅನೇಕ ಜನರ ಬದುಕಿನಲ್ಲಿ ಬದಲಾವಣೆ ತರಲು ಅವರು ಶ್ರಮಿಸಿರುವುದು ಗಮನಾರ್ಹವಾಗಿದೆ. ಕಾರ್ಯಕ್ರಮದಲ್ಲಿ ಡಾ. ಗುರಮ್ಮಾ ಸಿದ್ದಾರೆಡ್ಡಿ ಅವರು ತಮ್ಮ ಜೀವನ ಪಯಣ, ಸಮಾಜ ಸೇವೆಯ ಅನುಭವಗಳು ಹಾಗೂ ಸಾಧನೆಯ ಹಾದಿಯ ಕುರಿತು ಯುವಜನತೆ ಮತ್ತು ಸಾರ್ವಜನಿಕರೊಂದಿಗೆ ಸಂವಾದ ನಡೆಸಲಿದ್ದಾರೆ. ಅವರ ಅನುಭವಗಳು ಯುವ ಪೀಳಿಗೆಗೆ ಸ್ಫೂರ್ತಿಯಾಗಲಿವೆ ಎಂದು ಇಲಾಖೆ ವಿಶ್ವಾಸ ವ್ಯಕ್ತಪಡಿಸಿದೆ.

ಈ ಸಂದರ್ಭದಲ್ಲಿ ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿಗಳಾದ ಕು. ಕ್ಲೆಮೆಂಟಿನಾ, ಸುಧಾಕರ ಎಲ್ಲಾನೋರ, ಸಂಗ್ರಾಮ, ಏಸುದಾಸ್ ಅಲಿಯಂಬರೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪ್ರಕೃತಿ ಆರಾಧನೆಯ ಚಿತ್ತ ಕಾಂಕ್ರೀಟ್ ಕಾಡಿನತ್ತ



**ನುಡಿ-ನಡೆ**

● ಎಂ.ಪಿ.ಎಂ.ಕೊಟ್ರಯ್ಯ

ಹೂವಿನಹಡಗಲಿ

ಮಾತಾ ಭೂಮಿಃ ಪುತ್ರೋ ಅಹಂ ಪೃಥಿವ್ಯಾಃ। ಯಃ ಪರ್ಯಾವರಣಂ ರಕ್ಷತಿ, ಸಃ ಜೀವತಿ ಸುಖೇನ ಚ॥ "ಈ ಭೂಮಿ ನನ್ನ ತಾಯಿ, ನಾನು ಭೂದೇವಿಯ ಮಗ. ಪರಿಸರ ರಕ್ಷಣೆ ನಮ್ಮ ಕರ್ತವ್ಯ. ನಾವು ಪರಿಸರವನ್ನು ರಕ್ಷಿಸಿದರೆ ಅದು ನಮ್ಮನ್ನು ರಕ್ಷಿಸುವುದು" - ವೃಕ್ಷೋ ರಕ್ಷತಿ ರಕ್ಷಿತಃ. ಜೂನ್ 5 ಬಂತೆಂದರೆ ವಿಶ್ವದಾದ್ಯಂತ ಪರಿಸರ ದಿನಾಚರಣೆಯ ಸಭೆ-ಸಮಾರಂಭಗಳು, ಭಾಷಣಗಳು, ಗಿಡ ನೆಡುವ ಕಾರ್ಯಕ್ರಮಗಳು ಜೋರಾಗುತ್ತವೆ. ಆದರೆ ಪರಿಸರ ಎಂಬುದು ಕೇವಲ ಒಂದು ದಿನದ ಆಚರಣೆಯಲ್ಲ; ಅದು ನಮ್ಮ ಉಸಿರು, ನಮ್ಮ ಬದುಕು. ಇಂದು ನಾವು ತಲುಪಿರುವ ಪರಿಸರ ವಿನಾಶದ ಅಂಚನ್ನು ನೋಡಿದಾಗ, ನಮ್ಮ ಹಿರಿಯರ ಜೀವನಶೈಲಿ ಮತ್ತು ಇಂದಿನ ಕಾಂಕ್ರೀಟ್ ಬದುಕಿನ ನಡುವಿನ ಅಂತರ ಎದ್ದು ಕಾಣುತ್ತದೆ. ನಮ್ಮ ಸನಾತನ ಸಂಸ್ಕೃತಿಯಲ್ಲಿ ಪ್ರಕೃತಿಯನ್ನು ಕೇವಲ ಭೋಗದ ವಸ್ತುವಾಗಿ ನೋಡಲಿಲ್ಲ, ಬದಲಿಗೆ ದೈವಿಕ ಸ್ವರೂಪವಾಗಿ ಆರಾಧಿಸಲಾಯಿತು. ಋಷಿಮುನಿಗಳು ಕಾಡುಗಳಲ್ಲೇ ವಾಸಿಸುತ್ತಾ, ಪ್ರಕೃತಿಯೊಂದಿಗೆ ಮನುಷ್ಯ ಹೇಗೆ ಸಾಮರಸ್ಯದಿಂದ ಬದುಕಬೇಕು ಎಂಬುದನ್ನು ಜಗತ್ತಿಗೆ ಸಾರಿದರು.

**ವಿಶ್ವ ಪರಿಸರ ದಿನಾಚರಣೆ**

ನಮ್ಮ ಹಿರಿಯರು ಮರಗಳನ್ನು (ಅಶ್ವತ್ಥ, ಆಲ, ಬೇವು), ನದಿಗಳನ್ನು (ಗಂಗೆ, ಕಾವೇರಿ) ದೇವತೆಯರೆಂದು ಪೂಜಿಸುತ್ತಿದ್ದರು. ಕಾಡುಗಳನ್ನು 'ದೇವರ ಕಾಡು' ಎಂದು ರಕ್ಷಿಸುತ್ತಿದ್ದರು. ಸೂರ್ಯ, ವಾಯು, ಅಗ್ನಿ, ಜಲ ಎಲ್ಲವನ್ನೂ ದೇವರೆಂದು ಭಾವಿಸಿದ್ದರಿಂದ ಅವುಗಳನ್ನು ಕಲುಷಿತಗೊಳಿಸಲು ಹಿಂಜರಿಯುತ್ತಿದ್ದರು. ಪ್ರಕೃತಿಯನ್ನು ಶೋಷಿಸದೆ, ಅದರಿಂದ ಎಷ್ಟು ಬೇಕೋ ಅಷ್ಟನ್ನೇ ಪಡೆದು ಕೃತಜ್ಞತೆಯಿಂದ ಬದುಕುತ್ತಿದ್ದರು. ಅಂದಿನ ಕಾಲದಲ್ಲಿ ತಂತ್ರಜ್ಞಾನ ಇರಲಿಲ್ಲ ಎನ್ನುವುದು ನಿಜ. ಆದರೆ ಇಂದಿನವರಿಗಿಂತ ಅವರು ಆರೋಗ್ಯವಂತರಾಗಿದ್ದರು. ಯಾವುದೇ ರಾಸಾಯನಿಕವಿಲ್ಲದ ಕೈತೋಟದ ತರಕಾರಿ, ಕೊಟ್ಟಿಗೆ ಗೊಬ್ಬರ ಬಳಸಿ ಬೆಳೆದ ಧಾನ್ಯಗಳು ಮತ್ತು ಬಾವಿ-ಕೆರೆಗಳ ಸಿಹಿನೀರು ಅವರ ಆಯಸ್ಸನ್ನು ಹೆಚ್ಚಿಸಿದ್ದವು. ಪ್ರಕೃತಿಯ ಮಡಿಲಲ್ಲಿ ಮಾಡುತ್ತಿದ್ದ



ದೈಹಿಕ ಶ್ರಮವೇ ಅವರಿಗೆ ಯೋಗವಾಗಿತ್ತು. ಹಸಿರು ಪರಿಸರ, ಹಕ್ಕಿಗಳ ಚಿಲಿಪಿಲಿ, ಶುದ್ಧ ಗಾಳಿ ಅವರ ಮಾನಸಿಕ ಒತ್ತಡವನ್ನು ದೂರವಿಟ್ಟಿದ್ದವು. ಮಧುಮೇಹ, ಕ್ಯಾನ್ಸರ್, ರಕ್ತದೊತ್ತಡದಂತಹ ಆಧುನಿಕ ಕಾಯಿಲೆಗಳ ಹೆಸರೇ ಅಂದು ಯಾರಿಗೂ ತಿಳಿದಿರಲಿಲ್ಲ. ಅವರು ನೂರಾರು ವರ್ಷಗಳ ಕಾಲ ಸುಖವಾಗಿ, ನೆಮ್ಮದಿಯಿಂದ ಬದುಕಿದರು.

ಆದರೆ ಇಂದು ಪರಿಸ್ಥಿತಿ ಸಂಪೂರ್ಣ ತಲೆಕೆಳಗಾಗಿದೆ. ಮನುಷ್ಯ ಹಣದ ಹಿಂದೆ ಹುಚ್ಚನಂತೆ ಓಡುತ್ತಿದ್ದಾನೆ. ಈ ಓಟದಲ್ಲಿ ಅವನು ಇಡೀ ಜೀವಸಂಕುಲವನ್ನೇ ಬಲಿ ಕೊಡುತ್ತಿದ್ದಾನೆ. ಹಸಿರು ಮರಗಳಿದ್ದ ಜಾಗದಲ್ಲಿ ಇಂದು ಗಗನಚುಂಬಿ ಕಟ್ಟಡಗಳು ತಲೆಯೆತ್ತಿವೆ. ನಗರಗಳು ಕಾಂಕ್ರೀಟ್ ಕಾಡುಗಳಾಗಿ ಮಾರ್ಪಟ್ಟಿವೆ. ಮಳೆನೀರು ಭೂಮಿಗೆ ಇಳಿಯಲು ಜಾಗವಿಲ್ಲದೆ, ಅಂತರ್ಜಲ ಮಟ್ಟ ಪಾತಾಳಕ್ಕೆ ಕುಸಿದಿದೆ. ಒಂದು ಕಾಲದಲ್ಲಿ ದಾರಿಯಲ್ಲಿ ಹೋಗುವವರಿಗೆ ಪುಣ್ಯ ಬರಲಿ ಎಂದು 'ಅರವಟ್ಟಿಗೆ'ಗಳನ್ನು ಕಟ್ಟಿ ಉಚಿತವಾಗಿ ನೀರು ಕೊಡಲಾಗುತ್ತಿತ್ತು. ಆದರೆ ಇಂದು ಕುಡಿಯುವ ನೀರನ್ನು ಪ್ಲಾಸ್ಟಿಕ್ ಬಾಟಲಿಗಳಲ್ಲಿ ಕಾಸು ಕೊಟ್ಟು ಕೊಳ್ಳಬೇಕಾದ ದುಸ್ಥಿತಿ ಬಂದಿದೆ. ಜೀವಜಲವೇ ಇಂದು ಬಹುರಾಷ್ಟ್ರ ಕಂಪನಿಗಳ ವ್ಯಾಪಾರದ ವಸ್ತುವಾಗಿದೆ.

ಅಭಿವೃದ್ಧಿಯ ಹೆಸರಿನಲ್ಲಿ ಲಕ್ಷಾಂತರ ಕಾರ್ಖಾನೆಗಳು, ಕೋಟ್ಯಂತರ ವಾಹನಗಳು ರಸ್ತೆಗಿಳಿದಿವೆ. ಇವು ಹೊರಸೂಸುವ ಹೊಗೆಯಿಂದಾಗಿ ನಾವು ಉಸಿರಾಡುವ ಗಾಳಿ ವಿಷವಾಗಿದೆ. ದೆಹಲಿ, ಬೆಂಗಳೂರಿನಂತಹ ಮಹಾನಗರಗಳಲ್ಲಿ ಶುದ್ಧ ಗಾಳಿ ಸಿಗದೆ ಜನರು ಶ್ವಾಸಕೋಶದ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ. ಇನ್ನು ಕೆಲವು ವರ್ಷಗಳಲ್ಲಿ ಹೆಗಲಿಗೆ ಆಮ್ಲಜನಕದ (ಔಥಧಿಂಜಟಿ) ಸಿಲಿಂಡರ್ ಕಟ್ಟಿಕೊಂಡು ತಿರುಗಾಡಿದರೂ ಆಶ್ಚರ್ಯವಿಲ್ಲ. ನಾವು ತಿನ್ನುವ ಅನ್ನ ಇಂದು ಅಮೃತವಾಗಿ ಉಳಿದಿಲ್ಲ, ಅದು ನಿಧಾನವಾಗಿ ಕೊಲ್ಲುವ ವಿಷವಾಗಿದೆ (ಖಟಠತಿ ಕಋಠಟಿ). ಅತಿಯಾದ ಇಳುವರಿಗಾಗಿ ಬಳಸುತ್ತಿರುವ ರಾಸಾಯನಿಕ ಗೊಬ್ಬರಗಳು, ಕೀಟನಾಶಕಗಳು ಆಹಾರ ಧಾನ್ಯಗಳನ್ನು ಕಲುಷಿತಗೊಳಿವೆ. ತರಕಾರಿ, ಹಣ್ಣು, ಹಾಲು ಎಲ್ಲದರಲ್ಲೂ ಕಲಬೆರಕೆಯ ಕಾರುಬಾರು ಹೆಚ್ಚಾಗಿದೆ.

ಹಣದ ಹಪಾಹಪಿಗೆ ಬಿದ್ದು ನಾವು ಪ್ರಕೃತಿಯನ್ನು ಹೀಗೆಯೇ ಲೂಟಿ ಮಾಡುತ್ತಾ ಹೋದರೆ, ಮುಂದಿನ ಪೀಳಿಗೆಗೆ ನಾವು ನರಕವನ್ನು ಸೃಷ್ಟಿಸಿದಂತಾಗುತ್ತದೆ. ಜಾಗತಿಕ ತಾಪಮಾನದ (Global Warming) ಪರಿಣಾಮವಾಗಿ ಮಂಜುಗಡ್ಡೆಗಳು ಕರಗಿ ಸಮುದ್ರದ ಮಟ್ಟ ಹೆಚ್ಚಾಗಲಿದ್ದು, ಕರಾವಳಿ ನಗರಗಳು ಮುಳುಗಡೆಯಾಗಲಿವೆ. ಋತುಮಾನಗಳು ಸಂಪೂರ್ಣ ಏರುಪೇರಾಗಿ, ಒಂದೆಡೆ ಕುಡಿಯಲು ನೀರಿಲ್ಲದೆ ಬರಗಾಲ ಬಂದರೆ, ಇನ್ನೊಂದೆಡೆ ಅಕಾಲಿಕ ಮಹಾಪ್ರವಾಹಗಳು ಜನಜೀವನವನ್ನು ನಾಶಮಾಡುತ್ತವೆ. ಭೂಮಿ ತನ್ನ ಫಲವತ್ತತೆಯನ್ನು ಕಳೆದುಕೊಂಡು, ಕೋಟಿ ಹಣವಿದ್ದರೂ ತಿನ್ನಲು ಅನ್ನವಿಲ್ಲದ ಪರಿಸ್ಥಿತಿ ಬರಬಹುದು. "ಈ ಜಗತ್ತಿನಲ್ಲಿರುವುದೆಲ್ಲವೂ ಭಗವಂತನಿಗೆ ಸೇರಿದ್ದು. ಅದನ್ನು ತ್ಯಾಗಭಾವದಿಂದ ಅನುಭವಿಸು, ಯಾರ ಧನಕ್ಕೂ ಆಸೆಪಡಬೇಡ" ಎಂಬ ಉಪನಿಷತ್ತಿನ ಈ ಸಾಲು ನಮಗೆ ಎಚ್ಚರಿಕೆಯ ಗಂಟೆಯಾಗಬೇಕು.

ಮನಸ್ಸಿದ್ದಲ್ಲಿ ಮಾರ್ಗ ಎಂಬಂತೆ ನಮ್ಮ ಮುಂದೆ ಪರಿಹಾರಗಳೂ ಇವೆ. ಸಮಸ್ಯೆಗಳು ಕಣ್ಣಮುಂದಿವೆ, ಆದರೆ ಪರಿಹಾರಗಳು ನಮ್ಮ ಕೈಯಲ್ಲೇ ಇವೆ. ನಾವು ಈಗಲೇ ಎಚ್ಚೆತ್ತುಕೊಳ್ಳದಿದ್ದರೆ ಭವಿಷ್ಯವಿಲ್ಲ. ನಾವು ಮಾಡಬೇಕಾದ ತುರ್ತು ಕಾರ್ಯವೆಂದರೆ ಕೇವಲ ಗಿಡ ನೆಡುವುದಲ್ಲ, ಅವುಗಳನ್ನು ಮರವಾಗುವವರೆಗೆ ಪೋಷಿಸುವುದು. ಪ್ರತಿಯೊಬ್ಬರೂ ತಮ್ಮ ಹುಟ್ಟುಹಬ್ಬದ ಸವಿನೆನಪಿಗೆ ಕನಿಷ್ಠ ಒಂದು ಗಿಡ ನೆಟ್ಟು ಬೆಳೆಸಬೇಕು. ಮಳೆನೀರು ಕೊಯ್ಲು ಕಡ್ಡಾಯ ಮಾಡುವುದು ಹಾಗೂ ಕೆರೆ-ಬಾವಿಗಳನ್ನು ಪುನಶ್ಚೇತನಗೊಳಿಸುವ ಮೂಲಕ ಜಲ ಸಂರಕ್ಷಣೆ ಮಾಡಬೇಕು. ರಾಸಾಯನಿಕ ಮುಕ್ತ, ನೈಸರ್ಗಿಕ ಕೃಷಿ ಪದ್ಧತಿಗೆ ಮರಳಬೇಕು. ಏಕಬಳಕೆಯ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸಿ, ಬಟ್ಟೆ ಚೀಲಗಳನ್ನು ಬಳಸಬೇಕು. ವಾಯು ಮಾಲಿನ್ಯ ತಡೆಗಟ್ಟಲು ವೈಯಕ್ತಿಕ ವಾಹನಗಳಿಗಿಂತ ಸಾರ್ವಜನಿಕ ಸಾರಿಗೆ ಅಥವಾ ಇವಿ (ಇಗಿ) ವಾಹನಗಳನ್ನು ಬಳಸಬೇಕು.

"ಪ್ರಕೃತಿ ಮನುಷ್ಯನ ಅಗತ್ಯವನ್ನು ಪೂರೈಸಬಲ್ಲದೇ ಹೊರತು, ಅವನ ದುರಾಶೆಯನ್ನಲ್ಲ" ಎಂಬ ಮಹಾತ್ಮ ಗಾಂಧೀಜಿಯವರ ಮಾತು ಸಾರ್ವಕಾಲಿಕ ಸತ್ಯ. ನಾವು ನಮ್ಮ ಮುಂದಿನ ಪೀಳಿಗೆಗೆ ಆಸ್ತಿ-ಪಾಸ್ತಿ, ಹಣ ಮಾಡದಿದ್ದರೂ ಪರವಾಗಿಲ್ಲ; ಅವರು ಬದುಕಲು ಯೋಗ್ಯವಾದ ಶುದ್ಧ ಗಾಳಿ, ನೀರು ಮತ್ತು ಹಸಿರು ಭೂಮಿಯನ್ನು ಬಿಟ್ಟು ಹೋಗೋಣ. ಬನ್ನಿ, ಈ ವಿಶ್ವ ಪರಿಸರ ದಿನಾಚರಣೆಯಂದು ಕೇವಲ ಭಾಷಣಕ್ಕೆ ಸೀಮಿತವಾಗದೆ, "ಪರಿಸರ ರಕ್ಷಣೆ - ನಮ್ಮ ಹೊಣೆ" ಎಂಬುದನ್ನು ಅರಿತು ಪ್ರಕೃತಿಯನ್ನು ಉಳಿಸುವ ಶಪಥ ಮಾಡೋಣ.

ದಶಕೂಪಸಮಾ ವಾಪಿ, ದಶವಾಪೀಸಮೋ ಹ್ರದಃ। ದಶಹ್ರದಸಮಃ ಪುತ್ರೋ, ದಶಪುತ್ರಸಮೋ ದ್ರುಮಃ- ಈ ಶ್ಲೋಕದ ನೀತಿಯೇನೆಂದರೆ, ಹತ್ತು ಬಾವಿಗಳನ್ನು ತೋಡುವುದು ಒಂದು ಸಣ್ಣ ಕೆರೆಯನ್ನು ನಿರ್ಮಿಸುವುದಕ್ಕೆ ಸಮಾನ. ಹತ್ತು ಸಣ್ಣ ಕೆರೆಗಳನ್ನು ನಿರ್ಮಿಸುವುದು ಒಂದು ದೊಡ್ಡ ಸರೋವರವನ್ನು ನಿರ್ಮಿಸುವುದಕ್ಕೆ ಸಮಾನ. ಹತ್ತು ಸರೋವರಗಳನ್ನು ನಿರ್ಮಿಸುವುದು ಒಬ್ಬ ಸತ್ಪುತ್ರನನ್ನು ಹೊಂದುವುದಕ್ಕೆ ಸಮಾನ. ಆದರೆ, ಹತ್ತು ಜನ ಉತ್ತಮ ಪುತ್ರರನ್ನು ಹೊಂದುವುದು ಒಂದು ಮರವನ್ನು ಬೆಳೆಸುವುದಕ್ಕೆ ಸಮಾನವಾಗಿದೆ. ಅಂದರೆ, ಒಂದು ಮರವು ಹತ್ತು ಜನ ಮಕ್ಕಳಿಗಿಂತಲೂ ಶ್ರೇಷ್ಠವಾದುದು. ಇನ್ನಾದರೂ ವಾಸ್ತವವನ್ನು ಅರ್ಥೈಸಿಕೊಂಡು ಮುನ್ನಡೆಯೋಣ. ಪರಿಸರ ರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)